♦ ಮಂಡ್ಯ ♦ ಮೈಸೂರು ♦ ಚಾಮರಾಜನಗರ ♦ ಹಾಸನ ♦ ರಾಮನಗರ ♦ ತುಮಕೂರು ♦ ಬೆಂಗಳೂರು ಗ್ರಾಮಾಂತರ ♦ ಬೆಂಗಳೂರು ನಗರ

E-mail:kayakayogi @gmail.com

website: www.kayakayogi.com

ಕಾಯಕ ಯೋಗಿ

ಸಂಪಾದಕರು:ಅರುಣಜ್ಯೋತಿ ಬಿ.ಕೆ. KAYAKA YOGI - Regional Daily ಪ್ರಾದೇಶಿಕ ದಿನಪತ್ರಿಕೆ

Connecting hearts in the cultural capital

askಮೈಸೂರು

#askmysuru

RNI NO.KARKAN/2018/77805 | POST NO.KA/SK/MND/999/2022-2024 | ಮಂಡ್ಯ Mandya | ಸಂಪುಟ volume 07 | ಸಂಚಿಕೆ Issue 08 | ಗುರುವಾರ Thursday | 11-04-2024 | ಪುಟಗಳು Pages 06 | ಬೆಲೆ Rate 02 | ಸಂಪರ್ಕ 9980605484

ಚುಟುಕು ಸುದ್ದಿ

ಕನ್ನಡದಲ್ಲಿ ಎಕ್ಸ್ ಖಾತೆ ಆರಂಭಿಸಿದ ಮೋದಿ

ಬೆಂಗಳೂರು: ಲೋಕಸಭಾ ಚುನಾವಣೆಗೆ ದಿನಗಣನೆ ಆರಂಭವಾಗಿರುವ ಹೊತ್ತಿನಲ್ಲಿ, ಪ್ರಧಾನಿ ನರೇಂದ್ರ ಮೋದಿ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಕನ್ನಡದ ಪ್ರತ್ಯೇಕ ಚಾನೆಲ್‌ನ್ನು ಆರಂಭಿಸಿದ್ದಾರೆ

ಕನ್ನಡ ಮತದಾರರನ್ನು ತಲುಪುವ ಉದ್ದೇಶದಿಂದಾಗಿ ನಮೋ ಕನ್ನಡ ಎಂಬ ಹೆಸರಿನಲ್ಲಿ ಕನ್ನಡದ ಟ್ವಿಟರ್ ಖಾತೆ ಆರಂಭಿಸಲಾಗಿದೆ.

ಪ್ರಧಾನಿ ಮೋದಿ ಅವರ ಕಾರ್ಯಕ್ರಮಗಳು, ಭಾಷಣಗಳು ಹಾಗೂ ಸರ್ಕಾರದ ಯೋಜನೆಗಳನ್ನು ಜನರಿಗೆ ತಲುಪಿಸಲು ಖಾತೆ ಆರಂಭ ಮಾಡಲಾಗಿದೆ.

ಇಬ್ಬರು ಮಕ್ಕಳನ್ನು ಕೊಲೆ ಮಾಡಿದ ತಾಯಿ

ಬೆಂಗಳೂರು: ತಾಯಿಯೇ ತನ್ನ ಇಬ್ಬರು ಮಕ್ಕಳನ್ನು ಕೊಲೆ ಮಾಡಿರುವ ಹೃದಯವಿದ್ರಾವಕ ಘಟನೆ ನಗರದ ಜಾಲಹಳ್ಳಿಯಲ್ಲಿ ನಡೆದಿದೆ.

ಲಕ್ಷ್ಮೀ (9), ಗೌತವ್ (7) ಕೊಲೆಯಾದ ಮಕ್ಕಳು.

ಕೊಲೆ ಮಾಡಿದ ಆರೋಪಿ ಗಂಗಾದೇವಿಯನ್ನು ಪೊಲೀಸರು ಬಂಧಿಸಿದ್ದಾರೆ. ಮೂಲತಃ ಆಂಧ್ರ ಮೂಲದವರಾದ ಗಂಗಾದೇವಿ ಕುಟುಂಬ, ಬೆಂಗಳೂರಿನ ಜಾಲಹಳ್ಳಿಯಲ್ಲಿ ವಾಸವಾಗಿದ್ದರು. ಗಂಗಾದೇವಿ ಪತಿ ಪೊಕ್ಕೊ ಕೇಸ್‌ನಲ್ಲಿ ಬಂಧಿತನಾಗಿ ಜೈಲಿನಲ್ಲಿದ್ದಾನೆ. ಪತಿ ಮಗಳ ಜೊತೆಗೆ ಅಸಭ್ಯವಾಗಿ ವರ್ತಿಸಿದ ಹಿನ್ನೆಲೆಯಲ್ಲಿ ಪತ್ನಿ ಗಂಗಾದೇವಿ ಖುದ್ದು ಪೊಲೀಸ್? ಠಾಣೆಗೆ ದೂರು ನೀಡಿದ್ದಳು.

ಸಿಎಂ ವಿರುದ್ಧ ಸುಳ್ಳು ಸುದ್ದಿ: 7 ಮಂದಿ ವಿರುದ್ಧ FIR

ಬೆಂಗಳೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ಹಿಂದುಗಳ ಮತ ಬೇಡ, ಮುಸ್ಲಿಂ ಆಗಿ ಹುಟ್ಟುತ್ತೇನೆ ಎಂದು ಹೇಳಿದ್ದಾರೆಂದು ಸುದ್ದಿಪತ್ರಿಕೆಯ ವರದಿ ರೀತಿಯಲ್ಲಿ ಸುಳ್ಳು ಸುದ್ದಿ ಸೃಷ್ಟಿಸಿ ಸಾಮಾಜಿಕ ಜಾಲತಾಣದಲ್ಲಿ ಪ್ರಕಟಿಸಿದ್ದ 7 ಮಂದಿ ವಿರುದ್ಧ ಎಫ್‌ಐಆರ್ ದಾಖಲಾಗಿದೆ.

ಹಿಂದುಗಳ ಅಗತ್ಯ ನಮಗೆ ಬೇಡ. ಮುಸ್ಲಿಮರ ಓಟು ಸಾಕು. ಮುಂದಿನ ಜನ್ಮದಲ್ಲಿ ಮುಸ್ಲಿಂ ಆಗಿ ಹುಟ್ಟಲು ಬಯಸುತ್ತೇನೆ. ಮುಸ್ಲಿರ ಒಲೈಕೆ ಕುರಿತು ಬಿಜೆಪಿಗರ ಟೀಕೆ ಬಗ್ಗೆ ತಲೆಕೆಡಿಸಿಕೊಳ್ಳಬೇಡಿ" ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ ಎಂಬ ರೀತಿಯಲ್ಲಿ ಸುಳ್ಳು ಸುದ್ದಿಯನ್ನು ಬಗ್ಗೆ ಹರೀಶ್ ನಾಗರಾಜು ಎಂಬವರು ಪೊಲೀಸರಿಗೆ ದೂರು ನೀಡಿದ್ದರು.

ಅವರ ದೂರಿನ ಆಧಾರದ ಮೇಲೆ ಬೆಂಗಳೂರು ಪಶ್ಚಿಮ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಮಾಹಿತಿ ತಂತ್ರಜ್ಞಾನ ಕಾಯ್ದೆಯ ಸೆಕ್ಷನ್ 66, 66A ಮತ್ತು 66D ಹಾಗೂ ಐಪಿಸಿ ಸೆಕ್ಷನ್ 153A, 120B, 419, 469, 471, 505(2) ಮತ್ತು 468ರ ಅಡಿಯಲ್ಲಿ ಎಫ್‌ಐಆರ್ ದಾಖಲಾಗಿದೆ.

ಬೆಂಗಳೂರು ಗ್ರಾಮಾತರ ಸೇರಿ ಉಳಿದೆಲ್ಲ ಕ್ಷೇತ್ರಗಳಲ್ಲಿ ಜೆಡಿಎಸ್ ಸೋಲು ಅನುಭವಿಸಲಿದೆ: ಡಿಕೆ

ಬೆಂಗಳೂರು: ರಾಜ್ಯದ ಒಕ್ಕಲಿಗರು ಕಾಂಗ್ರೆಸ್ ಕೈ ಬಿಡಲ್ಲ. ರೆಡ್ಡಿಗಳು ಸೇರಿ ಒಟ್ಟು 8 ಒಕ್ಕಲಿಗ ಮುಖಂಡರಿಗೆ ಟಿಕೆಟ್ ನೀಡಲಾಗಿದೆ ಎಂತ್ತು ಕೆಪಿಸಿಸಿ ಅಧ್ಯಕ್ಷನಾಗಿರುವ ತಾನೂ ಕೂಡ ಒಕ್ಕಲಿಗ ಎಂದು ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಹೇಳಿದರು.

ನಗರದಲ್ಲಿಂದು ವಾಗ್ಯ್ವ ಪ್ರತಿನಿಧಿಗಳೊಂದಿಗೆ ಮಾತಾಡಿದ ಅವರು, ದೇವೇಗೌಡರು ತಮ್ಮ ಅಳಿಯನಿಗೆ ಬಿಜೆಪಿಯಿಂದ ಟಿಕೆಟ್ ಗಿಟ್ಟಿಸಿಕೊಳ್ಳುವಲ್ಲಿ ಯಶ ಕಂಡಿರಬಹುದು. ಆದರೆ ಜೆಡಿಎಸ್ ಪಕ್ಷವು ಬೆಂಗಳೂರು ಗ್ರಾಮಾಂತರ ಸೇರಿದಂತೆ ಎಲ್ಲ 4 ಸೀಟುಗಳಲ್ಲಿ ಸೋಲು ಅನಭವಿಸಲಿರುವುದು ವಿಚಿತ. ಇದನ್ನು ಬೇಕಾದರೆ ಬರೆದಿಟ್ಟುಕೊಳ್ಳಿ ಎಂದು ಶಿವಕುಮಾರ್ ಹೇಳಿದರು.

ನಿರ್ಮಲಾನಂದ ಸ್ವಾಮೀಜಿ ಆಶೀರ್ವಾದ ಪಡೆದ ಮೈತ್ರಿ ನಾಯಕರು

ಮಂಡ್ಯದಲ್ಲಿ ಬಾಡೂಟ ಜೋರು : ಹೊಸ ತೊಡಕು ದಿನವೇ ಮಠ ರೌಂಡ್ಸ್

■ ಕಾಯಕಯೋಗಿ ಸುದ್ದಿ

ಮಂಡ್ಯ: ಬಿಜೆಪಿ ಮತ್ತು ಜೆಡಿಎಸ್ ಮೈತ್ರಿ ಪಡೆಯ ಲೋಕಸಭಾ ಚುನಾವಣಾ ಅಭ್ಯರ್ಥಿಗಳು ಬುಧವಾರ ಶ್ರೀ ನಿರ್ಮಲಾನಂದ ಸ್ವಾಮೀಜಿಯವರನ್ನು ಭೇಟಿಯಾಗಿ ಆಶೀರ್ವಾದ ಪಡೆದಿದರು.

ಒಕ್ಕಲಿಗ ಮತಗಳ ಮೇಲೆ ಕಣ್ಣಿಟ್ಟಿರುವ ಮಾಜಿ ಸಿಎಂ ಕುಮಾರಸ್ವಾಮಿ ಮತ್ತಿತರರು ಈಗಿನಿಂದಲೇ ತಯಾರಿ ಮಾಡಿಕೊಳ್ಳುತ್ತಿದ್ದಾರೆ.

ಈ ಹಿನ್ನೆಲೆಯಲ್ಲಿ ರಾಜ್ಯದ 14 ಕ್ಷೇತ್ರದ ಅಭ್ಯರ್ಥಿಗಳು ಇಂದು ಒಕ್ಕಲಿಗ ಸಮುದಾಯದ ಜಗದ್ಗುರುಗಳಾದ ನಿರ್ಮಲಾನಂದ ಶ್ರೀಗಳನ್ನು ಭೇಟಿಯಾದರು.

ಮಂಡ್ಯ ಒಕ್ಕಲಿಗರ ಕೋಟೆ. ಬಾಡೂಟಕ್ಕೆ ಸಖತ್ ಫೇಮಸ್. ಇದೇ ಬಾಡೂಟವನ್ನ ಬಳಸಿಕೊಂಡು ಮತ ಸೆಳೆಯಲು ಮೈತ್ರಿ ನಾಯಕರು ಮುಂದಾಗಿದ್ದಾರೆ. ಹೊಸ ತೊಡಕು ಮೂಲಕ ಮೈತ್ರಿ ನಾಯಕರು ಒಕ್ಕಲಿಗರ ಮತ ಸೆಳೆಯಲು ರಣತಂತ್ರ ಹೆಣೆದಿದ್ದಾರೆ.

ವಿರೋಧ ಪಕ್ಷದ ನಾಯಕ ಆರ್. ಅಶೋಕ್, ಮಾಜಿ ಸಚಿವ ವಿ. ಸೋಮಣ್ಣ, ಮೈಸೂರು–ಕೊಡಗು ಕ್ಷೇತ್ರದ ಅಭ್ಯರ್ಥಿ ಯದುವೀರ ಒಡೆಯರ್, ಯಶವಂತಪುರ ಕ್ಷೇತ್ರದ ಅಭ್ಯರ್ಥಿ ಶೋಭಾ ಕರಂದ್ಲಾಜೆ, ಬೆಂಗಳೂರು ದಕ್ಷಿಣ ಕ್ಷೇತ್ರದ ಅಭ್ಯರ್ಥಿ ತೇಜಸ್ವಿ ಸೂರ್ಯ, ಬೆಂಗಳೂರು ಗ್ರಾಮಾಂತರದ ಅಭ್ಯರ್ಥಿ ಡಾ.ಸಿ.ಎನ್.ಮಂಜುನಾಥ್, ಚಿಕ್ಕಬಳ್ಳಾಪುರ ಕ್ಷೇತ್ರದ ಅಭ್ಯರ್ಥಿ ಸುಧಾಕರ್, ಸೇರಿದಂತೆ ಮೈತ್ರಿ ಕೂಟದ ಘಟಾನುಘಟಿ ನಾಯಕರು ನಿರ್ಮಲಾನಂದ ಶ್ರೀಗಳನ್ನು ಭೇಟಿಯಾಗಿ ಆಶೀರ್ವಾದ ಪಡೆದರು.

ಬಿಜೆಪಿ–ಜೆಡಿಎಸ್ ನಾಯಕರು ಲೋಕಸಭೆ ಕ್ಷೇತ್ರವನ್ನು ಅತ್ಯಂತ ಪ್ರತಿಷ್ಠಿತ ಎಂದು ಪರಿಗಣಿಸಿದ್ದಾರೆ. 28 ಕ್ಷೇತ್ರಗಳ ಪೈಕಿ 28 ಕ್ಷೇತ್ರಗಳನ್ನು ಗೆಲ್ಲಲು ಯೋಜನೆ



ರೂಪಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಒಕ್ಕಲಿಗ ಮತಗಳೇ ಹೆಚ್ಚಾಗಿರುವ ಪ್ರಮುಖ ಕ್ಷೇತ್ರಗಳನ್ನು ಗುರಿಯಾಗಿಸಲು ಬಯಸಿದ್ದಾರೆ. ಒಕ್ಕಲಿಗ ಸಮುದಾಯದ ಮುಖಂಡರಾದ ಆರ್.ಅಶೋಕ್, ಎಚ್.ಡಿ.ಕುಮಾರಸ್ವಾಮಿ, ಸಿ.ಎನ್.ಅಶ್ವತ್ಥ್ ನಾರಾಯಣ್ ಅವರು ಮಾಸ್ಟರ್ ಪ್ಲಾನ್ ರೂಪಿಸಿದ್ದಾರೆ.

ಮೊದಲ ಹಂತದ ಚುನಾವಣೆಯಲ್ಲಿ 14 ಕ್ಷೇತ್ರಗಳ ಬಿಜೆಪಿ ಅಭ್ಯರ್ಥಿಗಳು ಇಂದು ಬೆಂಗಳೂರಿನ ಆದಿಚುಂಚನಗಿರಿ ಮಠಕ್ಕೆ ಭೇಟಿ ನೀಡಲಿದ್ದಾರೆ. ಇಂದು ಬೆಳಗ್ಗೆ 9 ಗಂಟೆಗೆ ಬೆಂಗಳೂರಿನ ಆದಿಚುಂಚನಗಿರಿ ಮಠದಲ್ಲಿ ನಿರ್ಮಲಾನಂದ ಶ್ರೀಗಳಿಂದ ಆಶೀರ್ವಾದ ಪಡೆಯಲಿದ್ದಾರೆ. ಹಾಗಾಗಿ ಹಳೇ ಮೈಸೂರು ಭಾಗದಲ್ಲಿ ಪ್ರಬಲ ಒಕ್ಕಲಿಗ ಮತಗಳು ನಿರ್ಣಾಯಕವಾಗಿದ್ದ ಕ್ಷೇತ್ರವನ್ನು ಗೆಲ್ಲಲು ರಣತಂತ್ರ ಹೆಣೆದಿದ್ದಾರೆ.

ಈ ವೇಳೆ ಶಾಸಕರಾದ ಅಶ್ವತ್ಥ್ ನಾರಾಯಣ್, ಎಸ್.ಆರ್. ವಿಶ್ವನಾಥ್, ಕೆ. ಗೋಪಾಲಯ್ಯ ಹಾಗೂ ಸಿಟಿ. ರವಿ, ನಿಖಿಲ್ ಕುಮಾರಸ್ವಾಮಿ ಸೇರಿದಂತೆ ಹಲವು ನಾಯಕರು ಹಾಜರಿದ್ದರು.

ಬೈಕ್‌ಗೆ ಬೊಲೆರೋ ವಾಹನ ಡಿಕ್ಕಿಯಾಗಿ ಚಾಕುವಿನಿಂದ ಇರಿದು ಕೊಲೆಗೆ ಯತ್ನ

ಬೈಕ್ ಸವಾರನಿಗೆ ಗಂಭೀರ ಗಾಯ

■ ಕಾಯಕಯೋಗಿ ಸುದ್ದಿ

ನಂಜನಗೂಡು : ಜಮೀನಿನ ವೈಶ್ಯಮ್ಯದ ದ್ವೇಷದ ಜ್ವಾಲಾಕ್ಕೆ ದ್ವಿಚಕ್ರ ವಾಹನದಲ್ಲಿ ತೆರಳುತ್ತಿದ್ದ ವ್ಯಕ್ತಿಯ ಮೇಲೆ ಬೊಲೆರೋ ವಾಹನದಲ್ಲಿ ಡಿಕ್ಕಿ ಹೊಡೆಸಿ ಚಾಕುವಿನಿಂದ ಇರಿದು ಕೊಲೆಗೆ ಯತ್ನಿಸಿರುವ ಘಟನೆ ನಂಜನಗೂಡು ತಾಲ್ಲೂಕಿನ ಮೆಂಬಳ್ಳಿ ಗ್ರಾಮದಲ್ಲಿ ನಡೆದಿದೆ. ಹಲ್ಲೆಗೊಳಗಾದ ಕಪ್ಪಸೋಗೆ ಗ್ರಾಮದ ಮಲ್ಲೇಶ ನಂಜನಗೂಡು ನಗರದ ತಾಲ್ಲೂಕು ಆಡಳಿತ ಭವನದಲ್ಲಿ ಮಾತನಾಡಿದರು.



ಆರೋಪಿಯನ್ನು ವಶಕ್ಕೆ ಪಡೆದು ಜೈಲಿಗಟ್ಟಬೇಕಾದ ನಂಜನಗೂಡು ಗ್ರಾಮಾಂತರ ಪೊಲೀಸರು ಕೊಲೆಗಡುಕರ ಪರವಾಗಿ ನಿಂತಿದ್ದಾರೆ. ಚುನಾವಣಾ ಪ್ರಚಾರವನ್ನು ಮುಗಿಸಿಕೊಂಡು ಕಪ್ಪಸೋಗೆ ಗ್ರಾಮಕ್ಕೆ ಬೈಕ್ ನಲ್ಲಿ ನಂಜನಗೂಡು ಮಾರ್ಗವಾಗಿ ತೆರಳುತ್ತಿದ್ದ ವೇಳೆ ಮೆಂಬಳ್ಳಿ ಗ್ರಾಮದ ಬಳಿ ಸಂಜೆ ಆರೂವರೆ ಗಂಟೆಯ ವೇಳೆಯಲ್ಲಿ ಒಂಟಿ ಸಲಗ ಎಂಬ ನಾಮಫಲಕ ಇರುವ ಬೊಲೆರೋ ವಾಹನ ಹಿಂಬದಿಯಿಂದ ವೇಗವಾಗಿ ಬಂದು ನಾನು ಹೋಗುತ್ತಿದ್ದ ದ್ವಿಚಕ್ರ ವಾಹನಕ್ಕೆ ಡಿಕ್ಕಿ ಹೊಡೆದಿದ್ದಾರೆ. ವಾಹನದಿಂದ ಕೆಳಗೆ ಬಿದ್ದ ನನ್ನ ಮೇಲೆ ಬೊಲೆರೋ ವಾಹನವನ್ನು ದೇಹದ ಮೇಲೆ ಬಿಟ್ಟು ಕಿವಿಗೆ ಚಾಕುವಿನಿಂದ ಇರಿದು ಪ್ರಾಣ ತೆಗೆಯಲು ಮುಂದಾಗಿದ್ದರು ಎಂದು ಆರೋಪಿಸಿದರು.

ಸ್ಥಳೀಯರು ಗಂಭೀರ ಗಾಯಗೊಂಡ ವ್ಯಕ್ತಿಯನ್ನು ನಂಜನಗೂಡಿನ ಸರ್ಕಾರಿ ಆಸ್ಪತ್ರೆಗೆ ಚಿಕಿತ್ಸೆಗೆ ಗೆ ದಾಖಲು ಮಾಡಿದ್ದಾರೆ. ಜಮೀನಿನ ವಿಚಾರವಾಗಿ ಹಳೆ ವೈಶ್ಯಮ್ಯಕ್ಕೆ ಉದ್ದೇಶ ಪೂರ್ವಕವಾಗಿ ಕೊಲೆ ಮಾಡಲು ಯತ್ನಿಸಲಾಗಿದೆ ಎಂದು ಮಲ್ಲೇಶ್ ಗಂಭೀರವಾಗಿ ಆರೋಪ ಮಾಡಿದ್ದಾರೆ. ಚಾಲಕ ಮತ್ತು ನಾಲ್ಕು ಜನರ ವಿರುದ್ಧ ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣೆಗೆ ದೂರು ನೀಡಿದ್ದೇನೆ. ಘಟನೆಯ ನೈಜತೆಯನ್ನು ಪರಿಶೀಲಿಸಿ ತಪ್ಪಿತಸ್ಥ ಆರೋಪಿಯನ್ನು ಜೈಲಿಗಟ್ಟಬೇಕಾದ ತಪ್ಪಿತಸ್ಥರೇ ಕಚೇರಿಯ ಮುಂಭಾಗದಲ್ಲಿ ತನಗಾಗಿರುವ ಪ್ರಾಣ ಬೆದರಿಕೆ ಮತ್ತು ಘಟನೆಗೆ ಕಾರಣವಾಗಿರುವ ಆರೋಪಿಯನ್ನು ಕೂಡಲೇ ಬಂಧಿಸಬೇಕು. ನಂಜನಗೂಡಿನ ಗ್ರಾಮಾಂತರ ಪೊಲೀಸ್ ಠಾಣೆ ಪೊಲೀಸ್ ವಿರುದ್ಧ ಕ್ರಮ ಕೈಗೊಂಡು ನನಗೆ ನ್ಯಾಯ ಒದಗಿಸಬೇಕು ಎಂದು ಒತ್ತಾಯಿಸಿದ್ದಾರೆ.

ಮಂಡ್ಯ ಅಖಾಡಕ್ಕೆ ರಮ್ಯಾ ಎಂಟ್ರಿ

ಸಕ್ಕರೆ ನಾಡಿನಲ್ಲಿ ಮೋಡಿ ಮಾಡುತ್ತಾರಾ ಮೋಹಕ ತಾರೆ?

■ ಕಾಯಕಯೋಗಿ ಸುದ್ದಿ



ಮಂಡ್ಯ ಅಖಾಡದಲ್ಲಿ ಮೈತ್ರಿ ಅಭ್ಯರ್ಥಿ ಹೆಚ್.ಡಿ ಕುಮಾರಸ್ವಾಮಿ ಗೆಲುವಿಗೆ ತಂತ್ರ ರೂಪಿಸುತ್ತಿರುವ, ಬೆನ್ನಲ್ಲೇ ಕಾಂಗ್ರೆಸ್ ಅಭ್ಯರ್ಥಿ ಸ್ಟಾರ್ ಚಂದ್ರು ಪರ ಮಾಜಿ ಸಂಸದೆ, ನಟಿ ರಮ್ಯಾ ಪ್ರಚಾರಕ್ಕೆ ಅಖಾಡಕ್ಕೆ ಇಳಿಯಲು ಒಪ್ಪಿಗೆ ಸೂಚಿಸಿದ್ದಾರೆ

ರಮ್ಯ ಅವರನ್ನು ಪ್ರಚಾರಕ್ಕೆ ಕರೆಸಿ ಮತದಾರರನ್ನ ಸೆಳೆಯಲು ಕಾಂಗ್ರೆಸ್ ಮಾಸ್ಟರ್ ಪ್ಲಾನ್ ಮಾಡಿದ್ದು, ರಮ್ಯಾ ಜೊತೆ ಕಾಂಗ್ರೆಸ್ ಶಾಸಕ ಗಣಿಗ ರವಿಕುಮಾರ್ ಈಗಾಗಲೇ ಮಾತುಕತೆ ನಡೆಸಿದ್ದಾರೆ.

ಮಂಡ್ಯ ಕ್ಷೇತ್ರದ ಕ್ಯಾಂಪೇನ್‌ಗೆ ಬರಲು ಅವರು ಒಪ್ಪಿಗೆ ಸೂಚಿಸಿದ್ದು, ಮುಂದಿನ ವಾರ ಅಭ್ಯರ್ಥಿ ಜೊತೆ ರೋಡ್ ಶೋ ನಡೆಸುವ ಸಾಧ್ಯತೆ ಇದೆ.

ಒಕ್ಕಲಿಗರ ಭದ್ರಕೋಟೆಯಲ್ಲಿ ಗೆಲುವು ಸಾಧಿಸಲು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ ಶಿವಕುಮಾರ್ ಸಹ ಎಂಟ್ರಿ ಕೊಡಲಿದ್ದಾರೆ. ಏಪ್ರಿಲ್ 17 ಅಥವಾ 20 ರಂದು ಮಂಡ್ಯದಲ್ಲಿ ಬೃಹತ್ ಸಮಾವೇಶ ನಡೆಸಲು ಸಿದ್ಧತೆ ಮಾಡಿಕೊಳ್ಳಲಾಗಿದೆ. ಈ ಸಮಾವೇಶದಲ್ಲಿ ರಾಹುಲ್ ಗಾಂಧಿ ಸೇರಿದಂತೆ ಕಾಂಗ್ರೆಸ್ ನಾಯಕರು ಹೆಜ್ಜೆಕೆ ಏರುದ್ಧ ತಂತ್ರ ಹೆಣೆದು ಮತದಾರರನ್ನು ಸೆಳೆಯಲು ಮುಂದಾಗಿದ್ದಾರೆ.

ಮತ್ತೊಂದೆಡೆ ಮೈತ್ರಿ ಬಲ ಹೆಚ್ಚಿಸಿರುವ ಸಂಸದೆ ಸುಮಲತಾ, ಮೈತ್ರಿ ಅಭ್ಯರ್ಥಿ ಕುಮಾರಸ್ವಾಮಿ ಪರ ಪ್ರಚಾರಕ್ಕೆಳಿಯಲು ಸಿದ್ಧತೆ ನಡೆಸಿದ್ದಾರೆ. ಸ್ಥಳೀಯ ನಾಯಕರೊಂದಿಗೆ ಪ್ರಚಾರ ನಡೆಸಲು ಮಾತುಕತೆ ನಡೆದಿದ್ದು, ಈ ಮೂಲಕ ಸುಮಲತಾ ಬೆಂಬಲಿಗರು ಹಾಗೂ ಮಹಿಳಾ ಮತದಾರರನ್ನು ಸೆಳೆಯಲು ದೋಸ್ತಿ ನಾಯಕರ ಪ್ಲಾನ್ ಮಾಡಿಕೊಂಡಿದ್ದಾರೆ

ಕೇಜ್ರಿವಾಲ್ ಜೈಲಿನ ಬಳಿಕ ಮೊದಲ ವಿಕೆಟ್ ಪತನ: ಸಚಿವ ರಾಜ್ ಕುಮಾರ್ ಆನಂದ್ ರಾಜೀನಾಮೆ

ನವದೆಹಲಿ: ಅರವಿಂದ್ ಕೇಜ್ರಿವಾಲ್ ಸಂಪುಟದ ಸಮಾಜ ಕಲ್ಯಾಣ ಸಚಿವ ಮತ್ತು ಆಮ್ ಆದ್ಮಿ ಪಕ್ಷದ(ಎಎಪಿ) ನಾಯಕ ರಾಜ್ ಕುಮಾರ್ ಆನಂದ್ ತಮ್ಮ ಸ್ಥಾನಕ್ಕೆ ಮತ್ತು ಪಕ್ಷದ ಪ್ರಾಥಮಿಕ ಸದಸ್ಯತ್ವಕ್ಕೆ ರಾಜೀನಾಮೆ ನೀಡಿದ್ದಾರೆ.

ಆನಂದ್ ಅವರು ಪಟೇಲ್ ನಗರ ವಿಧಾನಸಭಾ ಕ್ಷೇತ್ರದ ಶಾಸಕರಾಗಿದ್ದಾರೆ. 2020 ರ ದೆಹಲಿ ವಿಧಾನಸಭಾ ಚುನಾವಣೆಯಲ್ಲಿ ಪಟೇಲ್ ನಗರ ಕ್ಷೇತ್ರದಿಂದ ಭಾರತೀಯ ಜನತಾ ಪಕ್ಷದ (ಬಿಜೆಪಿ) ಪ್ರವೇಶ್ ರತ್ನ ಅವರನ್ನು 30,000 ಕ್ಕೂ ಹೆಚ್ಚು ಮತಗಳ ಅಂತರದಿಂದ ಸೋಲಿಸಿದರು. ಅವರು ನವೆಂಬರ್ 2022 ರಲ್ಲಿ ದೆಹಲಿ ಕ್ಯಾಬಿನೆಟ್ ಮಂತ್ರಿಯಾದರು. ಅವರು ಕಾರ್ಮಿಕ ಮತ್ತು ಉದ್ಯೋಗ, ಖಾ ಮತ್ತು ಖಾದಿ, ಭೂಮಿ ಮತ್ತು ಕಟ್ಟಡ, ಸಹಕಾರ ಮತ್ತು ಗುರುದ್ವಾರ ಚುನಾವಣಾ ಇಲಾಖೆಗಳ ಹೆಚ್ಚುವರಿ ಉಸ್ತುವಾರಿಯನ್ನು ಹೊಂದಿದ್ದರು.

ರಾಜೀನಾಮೆ ಘೋಷಿಸಿದ ಬೆನ್ನಲ್ಲೇ ಆನಂದ್, ಎಎಪಿ ಭ್ರಷ್ಟಾಚಾರದಲ್ಲಿ ಮುಳುಗಿದೆ ಎಂದು ಆರೋಪಿಸಿದ್ದಾರೆ. ನಾನು ಭ್ರಷ್ಟರೊಂದಿಗೆ ಕೆಲಸ ಮಾಡಲು ಸಾಧ್ಯವಿಲ್ಲ. ಇಂದು ರಾಜಕೀಯ ಬದಲಾಗಿಲ್ಲ. ಆದರೆ ರಾಜಕಾರಣಿ ಬದಲಾಗಿದ್ದಾರೆ, ನನ್ನ ರಾಜೀನಾಮೆಯನ್ನು ಮುಖ್ಯಮಂತ್ರಿ ಕಚೇರಿಗೆ ಕಳುಹಿಸಿದ್ದೇನೆ ಎಂದು ತಿಳಿಸಿದ್ದಾರೆ.

ಹಳೇ ದ್ವೇಷ: ಕೊಲೆಯಲ್ಲಿ ಯುವಕನ ಅಂತ್ಯ

■ ಕಾಯಕಯೋಗಿ ಸುದ್ದಿ

ಮಂಡ್ಯ : ನಗರದ ಸ್ವರ್ಣಸಂದ್ರ ಬಡಾವಣೆಯಲ್ಲಿ ಹಳೇ ದ್ವೇಷದ ಹಿನ್ನೆಲೆಯಲ್ಲಿ ದುಷ್ಕರ್ಮಿಗಳಿಬ್ಬರು ಮಾರಕಾಸ್ತ್ರಗಳಿಂದ ಯುವಕನೊಬ್ಬನನ್ನು ಕೊಚ್ಚಿ ಕೊಲೆ ಮಾಡಿರುವ ಘಟನೆ ಕಳೆದ ಮಧ್ಯರಾತ್ರಿ ನಡೆದಿದೆ.

ಅಕ್ಷಯ್(24) ಹತ್ಯೆಯಾದ ಯುವಕ. ಆತನ ಸ್ನೇಹಿತ ಹೇಮಂತ ಗಂಭೀರವಾಗಿ ಗಾಯಗೊಂಡಿದ್ದು ಆತನನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ.

ಕಳೆದ ವರ್ಷ ಚೀಟಿ ವ್ಯವಹಾರದ ಹಿನ್ನೆಲೆಯಲ್ಲಿ ಅಕ್ಷಯ್ ಹಾಗೂ ಆತನ ಸ್ನೇಹಿತ ಸಾಹುಕಾರ್ ಭರತ್ ಮಧ್ಯೆ ಗಲಾಟೆ ನಡೆದಿತ್ತು. ಆ ಸಂದರ್ಭದಲ್ಲಿ ಅಕ್ಷಯ್ ಸಾಹುಕಾರ್ ಭರತ್ ಮತ್ತು ಪ್ರಮೋದ್ ಮೇಲೆ ಹಲ್ಲೆ ನಡೆಸಿದ್ದ. ಈ ದ್ವೇಷದ ಹಿನ್ನೆಲೆಯಲ್ಲಿ ಸಾಹುಕಾರ್ ಭರತ್ ಹಾಗೂ ಪ್ರಮೋದ್ ಅಲಿಯಾಸ್ ಕಾಡು ಅಕ್ಷಯನನ್ನು ಕೊಲೆ ಮಾಡಿದ್ದಾರೆ ಎಂದು ತಿಳಿದು ಬಂದಿದೆ.

ಕಳೆದ ರಾತ್ರಿ ಅಕ್ಷಯನನ್ನು ಫೋನ್ ಮಾಡಿ ಭರತ್ ಹಾಗೂ ಪ್ರಮೋದ್ ಕರೆಸಿಕೊಂಡಿದ್ದಾರೆ. ಸ್ವರ್ಣಸಂದ್ರದ ಬಡಾವಣೆಯ ಅರಳಿಕಟ್ಟೆ ಮುಂಭಾಗ ಅಕ್ಷಯ್ ಹಾಗೂ ಆತನ ಸ್ನೇಹಿತ ಹೇಮಂತ್‌ನ ಮೇಲೆ ಮಚ್ಚು ಲಾಂಗ್‌ಗಳಿಂದ ಹಲ್ಲೆ ಮಾಡಿದ್ದಾರೆ. ಈ ಸಂದರ್ಭದಲ್ಲಿ ಅಕ್ಷಯ್ ಸ್ಥಳದಲ್ಲಿಯೇ ಮೃತಪಟ್ಟರೆ, ಹೇಮಂತ ಗಂಭೀರವಾಗಿ ಗಾಯಗೊಂಡಿದ್ದಾನೆ.

ಕಳೆದ ವರ್ಷ ಚೀಟಿ ವ್ಯವಹಾರದ ಹಿನ್ನೆಲೆಯಲ್ಲಿ ಅಕ್ಷಯ್ ಹಾಗೂ ಸಾಹುಕಾರ್ ಭರತ್ ಮಧ್ಯೆ ಒಂದು ವರ್ಷದ ಹಿಂದೆ ಗಲಾಟೆ ನಡೆದಿತ್ತು. ಈ ಸಂದರ್ಭದಲ್ಲಿ ಅಕ್ಷಯ್ ಭರತ್ ಮೇಲೆ ಹಲ್ಲೆ ಮಾಡಿದ್ದ.

ಈ ಬಗ್ಗೆ ಮಂಡ್ಯ ಪಶ್ಚಿಮ ಪೊಲೀಸ್‌ಠಾಣೆಯಲ್ಲಿ ಪ್ರಕರಣ ಕೂಡ ದಾಖಲಾಗಿತ್ತು. ಚೀಟಿ ಹಣಕ

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ-2 | 11-04-2024

ಮಂಡ್ಯ

ಬಿಸಿಲಿನ ತಾಪಮಾನಕ್ಕೆ ಸೋಂಪು ಕಾಳುಗಳ ಪಾನೀಯ

ರಾಗಿ ಅಂಬಲಿಯ ತರಹ ದೇಹಕ್ಕೆ ತಂಪು ನೀಡುವ ಇತರ ಪಾನೀಯ ಎಂದರೆ ಸೋಂಪು ಕಾಳುಗಳ ಶರಬತ್ತು.

ಸೋಂಪು ಕಾಳುಗಳು ನೈಸರ್ಗಿಕವಾಗಿ ನಮ್ಮ ದೇಹದಿಂದ ವಿಷಕಾರಿ ಅಂಶಗಳನ್ನು ತೆಗೆದು ಹಾಕುತ್ತವೆ. ಅಷ್ಟೇ ಅಲ್ಲದೆ ನಮ್ಮ ಮಾನಸಿಕ ಆರೋಗ್ಯವನ್ನು ಉತ್ತಮ ಪಡಿಸುತ್ತವೆ.

ಸೋಂಪು ಕಾಳುಗಳ ಶರಬತ್ ತಯಾರು ಮಾಡಲು ಬೇಕಾಗಿರುವ ಸಾಮಗ್ರಿಗಳು. 5 ಟೀಬಲ್ ಚಮಚ ಚೆನ್ನಾಗಿ ಹುರಿದು ಪುಡಿ ಮಾಡಿದ ಸೋಂಪು ಕಾಳುಗಳು ಎರಡು ಟೀಬಲ್ ಚಮಚ ಜೇನುತುಪ್ಪ ಅಥವಾ ಬೆಲ್ಲ ನಿಂಬೆಹಣ್ಣಿನ ರಸ, ಚಿಟಿಕೆ ಉಪ್ಪು ತಯಾರು ಮಾಡುವ ವಿಧಾನ.

ಮೊದಲಿಗೆ ನಾಲ್ಕು ಲೋಟ ನೀರು ತೆಗೆದುಕೊಂಡು ಅದಕ್ಕೆ ಸೋಂಪು ಕಾಳುಗಳ ಪೌಡರ್, ಉಪ್ಪು ಮತ್ತು ಬೆಲ್ಲದ ಪುಡಿ ಸೇರಿಸಿ. ಇದನ್ನು ಇಡೀ ರಾತ್ರಿ ನೀರಿನಲ್ಲಿ ಹಾಗೆ ನೆನೆ ಹಾಕಿ. ಬೇಕೆಂದರೆ ರೆಫ್ರಿಜರೇಟರ್ ನಲ್ಲಿ ಕೂಡ ಇರಿಸಬಹುದು.



ಇದು ಚೆನ್ನಾಗಿ ನೆನೆದ ನಂತರದಲ್ಲಿ ಇದನ್ನು ಸೋಸಿ ಕೊಂಡು, ಸ್ವಲ್ಪ ನೀರು ಮತ್ತು ನಿಂಬೆಹಣ್ಣಿನ ರಸ ಸೇರಿಸಿ ಸವಿಯಬಹುದು. ಇದರಿಂದ ದೇಹ ಸಾಕಷ್ಟು ತಂಪಾಗುತ್ತದೆ.

ಜನ-ಜಾನುವಾರುಗಳಿಗೆ ನೀರಿನ ಕೊರತೆಯಾಗದಂತೆ ಮುನ್ನೆಚ್ಚರಿಕೆ ಕ್ರಮಕೈಗೊಳ್ಳಿ: ಡಿಸಿ

■ ಕಾಯಕಯೋಗಿ ಸುದ್ದಿ

ಮಂಡ್ಯ : ಬರ ಪರಿಸ್ಥಿತಿ ಹಿನ್ನೆಲೆಯಲ್ಲಿ ಜನ ಹಾಗೂ ಜಾನುವಾರುಗಳಿಗೆ ಕುಡಿಯುವ ನೀರಿನ ಕೊರತೆಯಾಗದಂತೆ ಅವಶ್ಯಕ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಡಾ.ಕುಮಾರ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಪಂಪತ್ತು ನಿರ್ವಹಣಾ ಪ್ರಾಧಿಕಾರದ ತುರ್ತು ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಟ್ಯಾಂಕರ್ ಹಾಗೂ ಖಾಸಗಿ ಬೋರ್ ವೆಲ್ ಮೂಲಕ ನೀರು ಒದಗಿಸುತ್ತಿರುವ ಗ್ರಾಮಗಳಿಗೆ ತಾಲ್ಲೂಕು ತಹಶೀಲ್ದಾರ್ ಹಾಗೂ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ಕಡ್ಡಾಯವಾಗಿ ಭೇಟಿ ನೀಡಿ ಪರಿಶೀಲನೆ ನಡೆಸಬೇಕು ಎಂದರು.

163 ಹೊಸ ಬೋರ್ ವೆಲ್: ಜಿಲ್ಲೆಯಲ್ಲಿ ಕುಡಿಯುವ ನೀರು ಒದಗಿಸಲು ಕಳೆದ ಎರಡು ತಿಂಗಳಿನಿಂದ ಜೆ.ಜೆ.ಎಂ ಹಾಗೂ ಕಂಟೆಜೆನ್ಸಿ ಯೋಜನೆಯಡಿ 164 ಹೊಸ ಬೋರ್ ವೆಲ್ ಗಳನ್ನು ಕೊರೆಯಲಾಗಿದೆ. ಕುಡಿಯುವ ನೀರಿನ ಅವಶ್ಯಕತೆಗೆ ಜಿಲ್ಲಾಡಳಿತ ನಿರಂತರವಾಗಿ ಸ್ಪಂದಿಸುತ್ತಿದ್ದು, ಸಾರ್ವಜನಿಕರು ಸಹ ನೀರು



ಪೋಲಾಗದಂತೆ ಎಚ್ಚರಿಕೆ ವಹಿಸಬೇಕು ಎಂದರು.

ಕೆ.ಆರ್.ಪೇಟೆ ತಾಲ್ಲೂಕಿನ ಮುರುಗನಕೊಪ್ಪಲು ಹಾಗೂ ಹೊಸೂರು, ಮದ್ದೂರು ತಾಲ್ಲೂಕಿನ ಚಿಕ್ಕೊನಹಳ್ಳಿ ಹಾಗೂ ಬಸರಾಳು ಮಂಡ್ಯ ತಾಲ್ಲೂಕಿನ ಪಂಚಗೌಡನಹಳ್ಳಿ ಹಾಗೂ ತಿಮ್ಮನಹೊಸೂರು ಒಟ್ಟು 6 ಗ್ರಾಮಗಳಿಗೆ ಟ್ಯಾಂಕರ್ ಮೂಲಕ ನೀರನ್ನು ಪೂರೈಸಲಾಗುತ್ತಿದೆ ಎಂದು ಯೂಆ ತಾಲ್ಲೂಕಿನ ತಹಶೀಲ್ದಾರ್ ಸಭೆಗೆ ಮಾಹಿತಿ ಒದಗಿಸಿದರು.

ಉಪವಿಭಾಗಾಧಿಕಾರಿಗಳು ಟಾಸ್ಕ್ ಫೋರ್ಸ್‌ಸಮಿತಿ ಅಧ್ಯಕ್ಷರಾಗಿದ್ದು, ಪ್ರತಿವಾರ ಸಭೆ ನಡೆಸಿ ಕುಡಿಯುವ ನೀರಿನ ತೊಂದರೆ ಯಾಗದಂತೆ ಅಗತ್ಯ ಕ್ರಮ ಕೈಗೊಳ್ಳಬೇಕು. ಕುಡಿಯುವ ನೀರಿನ ಸಮಸ್ಯೆ ಉಲ್ಬಣವಾಗುವ ಗ್ರಾಮಗಳನ್ನು ಪಟ್ಟಿ ಮಾಡಿಕೊಂಡು ಯೋಜನೆಗಳನ್ನು ರೂಪಿಸಿಕೊಳ್ಳಿ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಬರ ಪರಿಸ್ಥಿತಿ ಸಂದರ್ಭದಲ್ಲಿ ಖಾಸಗಿ ಬೋರ್ ವೆಲ್ ಗಳನ್ನು ಅಧಿಗ್ರಹಣ ಮಾಡಿಕೊಳ್ಳುವ ಅಧಿಕಾರವನ್ನು ತಹಶೀಲ್ದಾರ್ ಹೊಂದಿದ್ದು, ಗ್ರಾಮಗಳಲ್ಲಿ ಉಭ್ಭವಿರುವ ಖಾಸಗಿ ಬೋರ್ ವೆಲ್ ಗಳನ್ನು ಪಟ್ಟಿ ಮಾಡಿಕೊಳ್ಳಿ ಎಂದರು.

ಕುಡಿಯುವ ನೀರಿನ ಉಪಯೋಗಕ್ಕಾಗಿ ಬಳಸುತ್ತಿರುವ ಬೋರ್ ವೆಲ್ ಗಳ ರಿಡ್ರಿಲ್ ಗಳಿಗೆ ರಿಗ್ ಮಾಲೀಕರು ಮೊದಲ ಆದ್ಯತೆ ನೀಡಬೇಕು ಎಂದು ಈಗಾಗಲೇ ತಿಳಿಸಲಾಗಿದೆ. ರಿಗ್ ವಾಲೀಕರು ಸಹಕರಿಸದಿದ್ದಲ್ಲಿ ಭೂವಿಜ್ಞಾನಿಗಳ ಕಚೇರಿಗೆ ಮುಂದಿನ ಕ್ರಮ ಕೈಗೊಳ್ಳಲು ಮಾಹಿತಿ ನೀಡಿ ಎಂದರು.

ಖಾಸಗಿ ಬೋರ್ ವೆಲ್ ನಿಂದ ನೀರು ಪಡೆಯುತ್ತಿರುವ ಕಡೆ ತಹಶೀಲ್ದಾರ್ ಖಾಸಗಿ ಬೋರ್ ವೆಲ್ ಮಾಲೀಕರೊಂದಿಗೆ ಮಾತುಕತೆ ನಡೆಸಿ ಒಪ್ಪಂದ ಮಾಡಿಕೊಳ್ಳಬೇಕು. ಖಾಸಗಿ ಬೋರ್ ವೆಲ್‌ಗಳ ಮೂಲಕ ದಾನಿಗಳು ಉಚಿತವಾಗಿ ನೀರು ನೀಡುತ್ತಿದ್ದಲ್ಲಿ ಅದಕ್ಕೂ ಸಹ ಪಂಚನಾಮೆ ಮಾಡಿಕೊಂಡು ತಹಶೀಲ್ದಾರ್ ಆದೇಶ ಹೊರಡಿಸಬೇಕು ಎಂದರು.

ಅನಧಿಕೃತವಾಗಿ ಪಂಪ್ ಸೆಟ್ ಮೋಟರ್ ಬಳಸಿ ಕೆರೆಗಳಿಂದ ನೀರು ಪಡೆದು ಕೃಷಿ ಅಥವಾ ಅನ್ಯ ಉದ್ದೇಶಕ್ಕೆ ಬಳಸುತ್ತಿದ್ದರೆ ಮುಲಾಜಿಲ್ಲದೆ ಮೋಟರ್ ಗಳನ್ನು ಜಪ್ತಿ ಮಾಡಿಕೊಂಡು ಕ್ರಮಕೈಗೊಳ್ಳಿ. ಕುಡಿಯುವ ನೀರು ಸಾರ್ವಜನಿಕರು ಹಾಗೂ ಜಾನುವಾರು ಗಳಿಗೆ ಒದಗಿಸುವುದು ನಮ್ಮ ಮೊದಲ ಆದ್ಯತೆಯಾಗಿದೆ ಎಂದರು.

ಬರ ಪರಿಸ್ಥಿತಿ ಹಾಗೂ ಕುಡಿಯುವ ನೀರನ್ನು ಪಡೆಯುತ್ತಿರುವ ಮೂಲಗಳು ಬದಲಾಗಬಹುದು. ಈ ಹಿನ್ನೆಲೆಯಲ್ಲಿ ಕುಡಿಯುವ ನೀರನ್ನು ಲ್ಯಾಬ್‌ಗಳಲ್ಲಿ ಪರೀಕ್ಷೆಗೆ ಒಳಪಡಿಸಿ ಎಂದು ಜೆ.ಜಂ. ಸಿಇಒ ಅಧಿಕಾರಿ ಶೇಖ್ ತನ್ವೀರ್ ಆಸಿಫ್ ಅವರು ತಿಳಿಸಿದರು.

ಟ್ಯಾಂಕರ್ ಹಾಗೂ ಖಾಸಗಿ ಬೋರ್ ವೆಲ್ ಗಳ ಮೂಲಕ ನೀರು ಒದಗಿಸುತ್ತಿರುವ ಗ್ರಾಮಗಳಿಗೆ ದಿಢೀರ್ ಭೇಟಿ ನೀಡಲಿದ್ದು, ದಾಖಲೆಗಳನ್ನು ಅಧಿಕಾರಿಗಳು ಸರಿಯಾಗಿ ನಿರ್ವಹಿಸಬೇಕು. ಯಾವುದೇ ಲೋಪ ಕಂಡು ಬಂದರು ಕ್ರಮ ವಹಿಸುವುದಾಗಿ ಎಚ್ಚರಿಕೆ ನೀಡಿದರು.

ಅಪರ ಜಿಲ್ಲಾಧಿಕಾರಿ ಡಾ:ಹೆಚ್.ಎಲ್. ನಾಗರಾಜು ಮಾತನಾಡಿ, ಜನರಿಗೆ ಮಿತವಾಗಿ ನೀರು ಬಳಸುವುದರ ಬಗ್ಗೆ ಜಾಗೃತಿ ಮೂಡಿಸಿ. ಟ್ಯಾಂಕರ್ ನಿಂದ ನೀರು ಒದಗಿಸುವ ಮೊದಲು ಸುತ್ತೂರು ಯಾವುದೇ ಖಾಸಗಿ ಬೋರ್ ವೆಲ್ ನಿಂದ ನೀರು ಪಡೆಯಲು ಸಾಧ್ಯವಿಲ್ಲ ಎಂಬುದನ್ನು ಖಾತ್ರಿ ಪಡಿಸಿಕೊಳ್ಳುವುದು ಉತ್ತಮ ಎಂದು ಸಲಹೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಕೆ.ಮೋಹನ್, ಗ್ರಾಮೀಣ ಕುಡಿಯುವ ನೀರು ಸರಬರಾಜು ಇಲಾಖೆಯ ಕಾರ್ಯಪಾಲಕ ಅಭಿಯಂತರ ಶಿವರಾಜು, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕಿ ತುಷಾರಮಣಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕಿ ಎಸ್ ಹೆಚ್ ನಿರ್ಮಲ ಸೇರಿದಂತೆ ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.


ದೊಡ್ಡರಸಿನಕೆರೆ ನೂತನ ಸಣ್ಣಕ್ಕಿರಾಯಸ್ವಾಮಿ ಬಸವನಿಗೆ ವಿಶೇಷ ಪೂಜೆ

■ ಕಾಯಕಯೋಗಿ ಸುದ್ದಿ

ಭಾರತೀನಗರ: ಇಲ್ಲಿಗೆ ಸಮೀಪದ ದೊಡ್ಡರಸಿನಕೆರೆ ಶ್ರೀಸಣ್ಣಕ್ಕಿರಾಯಸ್ವಾಮಿ ದೇವಸ್ಥಾನದಲ್ಲಿ ಯುಗಾದಿ ಹಬ್ಬದ ಅಂಗವಾಗಿ ನೂತನ ಸಣ್ಣಕ್ಕಿರಾಯಸ್ವಾಮಿ ಬಸವನಿಗೆ ವಿಧಿ-ವಿಧಾನದೊಂದಿಗೆ ವಿಶೇಷ ಪೂಜೆಯನ್ನು ಹಮ್ಮಿಕೊಳ್ಳಲಾಗಿತ್ತು.

ಈ ಹಿಂದೆ ಶ್ರೀಸಣ್ಣಕ್ಕಿರಾಯಸ್ವಾಮಿ ಬಸವಪ್ಪ ಲಿಂಗೈಕ್ಯ ಆದ ಹಿನ್ನೆಲೆಯಲ್ಲಿ ಸಾತನೂರು ಸಮೀಪದ ಮುಳ್ಳನದೊಡ್ಡಿ ಗ್ರಾಮದಿಂದ ನೂತನ ಬಸವಪ್ಪನನ್ನು ದೇವಸ್ಥಾನಕ್ಕೆ ಕರೆತಂದು ಬಸವಪ್ಪನಿಗೆ ವಿಶೇಷ ಪೂಜೆಸಲ್ಲಿಸಲಾಯಿತು.

ಇದೇ ಸಂದರ್ಭದಲ್ಲಿ ಬಸವ ಸಮಿತಿ ಅಧ್ಯಕ್ಷ ಡಿ.ಎಂ.ಮಂಚೇಗೌಡ ಅವರು ಮಾತನಾಡಿ, ಈ ಹಿಂದೆ ಬಸವನಲ್ಲಿದ್ದ ಕಳೆ ಹಾಗೂ ವರ್ಚಸ್ಸು ನೂತನ ಬಸವನಲ್ಲಿ ಎದ್ದು ಕಾಣುತ್ತಿದೆ. ನಮ್ಮ ಬಸವ ಮತ್ತೆ ಹುಟ್ಟಿ ಬಂದಿದ್ದಾನೆ ಎಂದು ನಮಗೆ ಭಾಸವಾಗುತ್ತಿದೆ. ಶ್ರೀಸಣ್ಣಕ್ಕಿರಾಯಸ್ವಾಮಿ ಬಸವನನ್ನು ನಂಬಿರುವ ಭಕ್ತಾಧಿಗಳಿಗೆ ಕಷ್ಟಕಾರ್ಪಣ್ಯಗಳು ಹೋಗಲಾ ಡಿಸುವ ಉದ್ದೇಶದಿಂದ ಬಸವನನ್ನು



ಬಿಡಲಾಗಿದೆ. ಭಕ್ತಾಧಿಗಳು ಬಂದು ಬಸವನ ಕೃಪೆಗೆ ಪಾತ್ರರಾಗಬೇಕೆಂದರು.

ಇದೇ ಸಂದರ್ಭದಲ್ಲಿ ಯುಗಾದಿ ಹಬ್ಬದ ಪ್ರಯುಕ್ತ ಶ್ರೀಸಣ್ಣಕ್ಕಿರಾಯಸ್ವಾಮಿಗೆ ಬೆಳಿಗ್ಗೆಯಿಂದ ಅಭಿಷೇಕ, ವಿವಿಧ ಪುಷ್ಪಗಳಿಂದ ಅಲಂಕಾರಗೊಳಿಸಿ ನೂರೆಂಟು ಆರತಿಯನ್ನು ಬೆಳಗಲಾಯಿತು. ನಂತರ ಬಂದಂತಹ ಭಕ್ತಾಧಿಗಳಿಗೆ ಅನ್ನಸಂತರ್ಪಣೆ ಕಾರ್ಯಕ್ರಮವನ್ನು ಬಸವ ಸಮಿತಿ ವತಿಯಿಂದ ಏರ್ಪಡಿಸಲಾಗಿತ್ತು.

ಇದೇ ವೇಳೆ ದೇವಸ್ಥಾನದ ಅರ್ಚಕ ಕುಮಾರ್, ಬಸವ ಸಮಿತಿ ಪದಾಧಿಕಾರಿಗಳಾದ ಶರತ್, ಆನಂದ್, ಪುರುಷೋತ್ತಮ್, ತಮ್ಮಯ್ಯ, ಚಿಕ್ಕಣ್ಣ ಸೇರಿದಂತೆ ಹಲವರಿದ್ದರು.

ಚುನಾವಣಾ ಆಯೋಗಕ್ಕೆ ವೀಕ್ಷಕರ ನೇಮಕ

■ ಕಾಯಕಯೋಗಿ ಸುದ್ದಿ

ಮಂಡ್ಯ: ಮಂಡ್ಯ ಲೋಕಸಭಾ ಚುನಾವಣೆಗೆ ಬಿಜೆಪಿ-ಜೆಡಿಎಸ್ ಮೈತ್ರಿ ಅಭ್ಯರ್ಥಿಯಾಗಿರುವ ಸ್ಪರ್ಧೆ ಮಾಡಿರುವ ಹೆಚ್.ಡಿ.ಕುಮಾರಸ್ವಾಮಿ ಅವರು ಮಂಡ್ಯಕ್ಕೆ ತಾವು ನೀಡಿರುವ ಕೊಡುಗೆಗಳ ಆಧಾರದ ಮೇಲೆ ಮತಯಾಚಿಸಲಿ ಎಂದು ಮೈಷುಗರ್ ಹಾಗೂ ಮಂಡ್ಯ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಸಿ.ಡಿ.ಗಂಗಾಧರ್ ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಮ್ಮ ಕಾಂಗ್ರೆಸ್ ಪಕ್ಷವು ಕಳೆದ 10 ತಿಂಗಳಿಂದ ಮಾಡಿರುವ 5 ಗ್ಯಾರಂಟಿಗಳ ಅನುಷ್ಠಾನವನ್ನು ಮುಂದಿಟ್ಟುಕೊಂಡು ಕಾಂಗ್ರೆಸ್ ಅಭ್ಯರ್ಥಿ, ಜಿಲ್ಲೆಯ ಮಣ್ಣಿನ ಮಗ ವೆಂಕಟರಮಣೇಗೌಡ (ಸ್ಟಾರ್‌ಚಂದ್ರು) ಅವರಿಗೆ ಮತ ಚಲಾಯಿಸಬೇಕೆಂದು ಜನರ ಬಳಿ ಮತ ಪ್ರಚಾರ ನಡೆಸುತ್ತಿದ್ದೇವೆ. ಅದೇ ರೀತಿ ತಮ್ಮ ಸಾಧನೆಗಳೆದ್ದರೆ ತಿಳಿಸಲಿ ಎಂದು ಸವಾಲು ಹಾಕಿದರು.

ಮಂಡ್ಯ ಜಿಲ್ಲೆಯ ಮಣ್ಣಿನ ಮಗ 20 ವರ್ಷಗಳ ಹಿಂದೆ 2004ರಲ್ಲಿ ಅತಂತ್ರ ವಿಧಾನಸಭೆ ನಿರ್ಮಾಣವಾದಾಗ 2ನೇ ಬಾರಿ ಮುಖ್ಯಮಂತ್ರಿಯಾಗುವ ಅವಕಾಶವನ್ನು ವಂಚಿಸಿದರು. ಮಂಡ್ಯ ಜಿಲ್ಲೆಯಲ್ಲಿ ಮತಯಾಚಿಸುತ್ತಿರುವುದು ಹಾಸ್ಯಸ್ಪದವಾಗಿದೆ. ಕಳೆದ ಸಾರ್ವತ್ರಿಕ ಲೋಕಸಭಾ ಚುನಾವಣೆಯಲ್ಲಿ ತಮ್ಮ ಮಿತ್ರ ಸೋಲಿನ ನಂತರ ಕಾವೇರಿ ಕೊಳ್ಳದ ರೈತರು ನೀರಿಗಾಗಿ ಮನವಿ ಮಾಡಿದಾಗ ದೆಹಲಿಯಲ್ಲಿ ಕೇ ಇದೆ ನೀವು ಅಲ್ಲಿಯೇ ನೀರನ್ನು ಬಿಡಿಸಿಕೊಳ್ಳಬೇಕು ಎಂದವರಿಗೆ ಮಂಡ್ಯ ಜಿಲ್ಲೆಯ ಜನತೆಯ ಮತಯಾಚಿಸಲು ಯಾವ ನೈತಿಕ ಹಕ್ಕಿದೆ? ಎಂದು ಪ್ರಶ್ನಿಸಿದರು.

1018ರ ಕಾಂಗ್ರೆಸ್ ಬೆಂಬಲಿತ ಸಮ್ಮಿಶ್ರ ಸರ್ಕಾರದ ಮುಖ್ಯಮಂತ್ರಿಯಾಗಿದ್ದಾಗ ದಲಿತರಿಗೆ, ಹಿಂದುಳಿದವರಿಗೆ, ಮಹಿಳೆಯರಿಗೆ ಯಾವುದೇ ಮಂತ್ರಿಸ್ಥಾನ ನೀಡದೆ ವಂಚಿಸಿದವರಿಗೆ ಈ ವರ್ಗದ ಮತವನ್ನು ಕೇಳುವ ಯಾವುದೇ ನೈತಿಕತೆ ಇದೆಯೇ?... ಬಹುಮುಖ್ಯವಾಗಿ ರೈತರ ಹೆಸರಿನಲ್ಲಿ ಮತಯಾಚಿಸುವ ನೀವು ಕೇಂದ್ರದ ಕರಾಳ ಕೃಷಿ ಕಾಯ್ದೆಗಳಿಗೆ ನಮ್ಮ ರಾಜ್ಯದಿಂದ ಬೆಂಬಲ ವ್ಯಕ್ತಪಡಿಸಿದ್ದು ಸುಳ್ಳೇ..? ಹಲವಾರು ತಿಂಗಳು ಕಾಲ ನಡೆದ ರೈತ ಹೋರಾಟದಲ್ಲಿ ನೂರಾರು ರೈತರು ಹುತಾತ್ಮರಾಗಿದ್ದು ಸುಳ್ಳೇ? ಹಿಗಿರುವಾಗ ರೈತರ ಬಳಿ ಮತಯಾಚಿಸಲು ನಿಮಗೆ ಯಾವ ನೈತಿಕ ಹಕ್ಕಿದೆ? ದಯಮಾಡಿ ಈ ಎಲ್ಲಾ ಪ್ರಶ್ನೆಗಳಿಗೆ ಉತ್ತರ ನೀಡುವ ಮೂಲಕ ಮತಯಾಚಿಸಿ ಎಂದು ಒತ್ತಾಯಿಸಿದರು.

ಗೋಷ್ಠಿಯಲ್ಲಿ ಕಾಂಗ್ರೆಸ್ ಕಾರ್ಯಾಧ್ಯಕ್ಷ ಎಂ.ಎಸ್.ಚಿದಂಬರ್, ಮುಖಂಡರಾದ ವಿಜಯಲಕ್ಷ್ಮಿ, ರಘುನಂದನ್, ಕೆ.ಎಚ್.ನಾಗರಾಜು, ಮುಜಾಹಿದ್ ಪಾಷ, ಕೆ.ಎಂ.ರಾಮಕೃಷ್ಣ ಇದ್ದರು.

ಏ.26 ರಂದು ಸಂತೆ, ಜಾತ್ರೆ ಹಾಗೂ ಉತ್ಸವ ನಿಷೇಧ

■ ಕಾಯಕಯೋಗಿ ಸುದ್ದಿ

ಮಂಡ್ಯ : ವರ್ತಕ ಚುನಾವಣೆ – 2024 ರ ಸಂಬಂಧ ಮಂಡ್ಯ ಲೋಕಸಭಾ ಕ್ಷೇತ್ರದಲ್ಲಿ ಮತದಾನವು ಏಪ್ರಿಲ್ 26ರಂದು ನಡೆಯಲಿದ್ದು, ಮತದಾರರಿಗೆ ಮುಕ್ತ ಮತ್ತು ನ್ಯಾಯೋಚಿತ ಮತದಾನಕ್ಕೆ ಅವಕಾಶ ಕಲ್ಪಿಸುವ ಹಾಗೂ ಮತದಾನ ಕಾರ್ಯವನ್ನು ಸುಗಮವಾಗಿ ನಡೆಸುವ ಸಲುವಾಗಿ ಸದರಿ ದಿನದಂದು ಮಂಡ್ಯ ಜಿಲ್ಲೆಯಾದ್ಯಂತ ನಡೆಯುವ ಎಲ್ಲಾ ರೀತಿಯ ಸಂತೆ, ಜಾತ್ರೆ ಹಾಗೂ ಉತ್ಸವಗಳನ್ನು ನಿಷೇಧಿಸುವಂತೆ ಮಂಡ್ಯ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಡಾ. ಕುಮಾರ ಅವರು ಆದೇಶವನ್ನು ಹೊರಡಿಸಿದ್ದಾರೆ.

581.28 ಹೆಕ್ಟೇರ್ ಅರಣ್ಯ ಪ್ರದೇಶ ಮೀಸಲಿಗೆ ಸೂಚನೆ

■ ಕಾಯಕಯೋಗಿ ಸುದ್ದಿ

ಮಂಡ್ಯ : ಕರ್ನಾಟಕ ಸರ್ಕಾರವು ಕರ್ನಾಟಕ ಅರಣ್ಯ ಕಾಯ್ದೆ–1963 ರ ಕಲಂ–4 ರ ಪ್ರಕಾರ ಮಂಡ್ಯ ಜಿಲ್ಲೆಯ ಗ್ರಾಮಗಳಲ್ಲಿ ನಿರ್ದಿಷ್ಟ ಸೂಚಿತ ಪ್ರದೇಶವನ್ನು ಮೀಸಲು ಅರಣ್ಯ ಪ್ರದೇಶವನ್ನಾಗಿ ಅಧಿಸೂಚಿಸಿ ಹೊರಡಿಸಲಾಗಿರುತ್ತದೆ.

ಪಾಂಡವಪುರ ತಾಲ್ಲೂಕಿನ ಅಂತಸಹಳ್ಳಿ ಗ್ರಾಮದ ಸರ್ವೇ ನಂ.111 ರ ವಿಸ್ತೀರ್ಣ 50.88 ಹೆಕ್ಟೇರ್, ಬೋರಾಪುರ ಗ್ರಾಮದ ಸರ್ವೇ ನಂ. 21 ರ ವಿಸ್ತೀರ್ಣ 29.60 ಹೆಕ್ಟೇರ್, ಬೋಳೇನಹಳ್ಳಿ ಮತ್ತು ನರಹಳ್ಳಿ ಗ್ರಾಮಗಳ ಸರ್ವೇ ನಂ. 25, 71 ರಲ್ಲಿ ಕ್ರಮವಾಗಿ ವಿಸ್ತೀರ್ಣ 69.60, 22.40 ಹೆಕ್ಟೇರ್, ಅರಕನಕೆರೆ ಮತ್ತು ಶಂಭೂನಹಳ್ಳಿ ಗ್ರಾಮಗಳ ಸರ್ವೇ ನಂ. 25, 61 ರಲ್ಲಿ ಕ್ರಮವಾಗಿ ವಿಸ್ತೀರ್ಣ 79.20, 25.60 ಹೆಕ್ಟೇರ್, ಗುಮ್ಮನಹಳ್ಳಿ ಗ್ರಾಮದ ಸರ್ವೇ ನಂ. 227 ರ ವಿಸ್ತೀರ್ಣ 62.80 ಹೆಕ್ಟೇರ್, ನ್ಯಾಮನಹಳ್ಳಿ ಗ್ರಾಮದ ಸರ್ವೇ ನಂ. 112 ರ ವಿಸ್ತೀರ್ಣ 19.40ಹೆಕ್ಟೇರ್, ಪಗಡೆಕಲ್ಲಹಳ್ಳಿ ಗ್ರಾಮದ ಸರ್ವೇ ನಂ. 33 ರ ವಿಸ್ತೀರ್ಣ 48.00 ಹೆಕ್ಟೇರ್, ಕನಗೋನಹಳ್ಳಿ ಗ್ರಾಮದ ಸರ್ವೇ ನಂ. 27 ರ ವಿಸ್ತೀರ್ಣ 15.00 ಹೆಕ್ಟೇರ್, ಶಂಭೂನಹಳ್ಳಿ ಗ್ರಾಮದ ಸರ್ವೇ ನಂ. 51, 55 ರಲ್ಲಿ ಕ್ರಮವಾಗಿ ವಿಸ್ತೀರ್ಣ 9.20, 70.40 ಹೆಕ್ಟೇರ್, ಕೆ.ಬೆಟ್ಟಹಳ್ಳಿ ಗ್ರಾಮದ ಸರ್ವೇ ನಂ. 23 ರ ವಿಸ್ತೀರ್ಣ 8.00 ಹೆಕ್ಟೇರ್, ಪುರ?ನಕೊಪ್ಪಲು ಗ್ರಾಮದ ಸರ್ವೇ ನಂ. 8, 2ರಲ್ಲಿ ಕ್ರಮವಾಗಿ ವಿಸ್ತೀರ್ಣ 11.20, 0.80 ಹೆಕ್ಟೇರ್, ಚಂದ್ರೆ ಗ್ರಾಮದ ಸರ್ವೇ ನಂ. 36 ರ ವಿಸ್ತೀರ್ಣ 15.20 ಹೆಕ್ಟೇರ್, ಬಿಜ್ಜನಹಳ್ಳಿ ಗ್ರಾಮದ ಸರ್ವೇ ನಂ.11 ರ ವಿಸ್ತೀರ್ಣ 32.00.

ಹೆಕ್ಟೇರ್, ರಂಗನಕೊಪ್ಪಲು ಗ್ರಾಮದ ಸರ್ವೇ ನಂ. 22 ರ ವಿಸ್ತೀರ್ಣ 4.00 ಹೆಕ್ಟೇರ್, ಹಾರೋಹಳ್ಳಿ ಗ್ರಾಮದ ಸರ್ವೇ ನಂ. 13 ರ ವಿಸ್ತೀರ್ಣ 8.00 ಹೆಕ್ಟೇರ್ ಒಟ್ಟು 581.28 ಹೆಕ್ಟೇರ್ ಪ್ರದೇಶವು ಅಧಿಸೂಚನೆಯಾಗಿರುತ್ತದೆ ಎಂದು ಮಂಡ್ಯ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜೆಡಿಎಸ್ ಸೇರ್ಪಡೆಗೊಂಡ ಕಾಂಗ್ರೆಸ್ ಮುಖಂಡ ರಾಜಣ್ಣ, ಬೆಂಬಲಿಗರು

■ ಕಾಯಕಯೋಗಿ ಸುದ್ದಿ

ಮದ್ದೂರು: ತಾಲೂಕಿನ ಆತಗೂರು ಹೋಬಳಿಯ ಕೆಸ್ತೂರು ಗ್ರಾಮದ ಕಾಂಗ್ರೆಸ್ ಮುಖಂಡ ಕೆ.ಟಿ ರಾಜಣ್ಣ ತಮ್ಮ ಅಪಾರ ಬೆಂಬಲಿಗರೊಡನೆ ಮಾಜಿ ಶಾಸಕ ಡಿ.ಸಿ ತಮ್ಮಣ್ಣ ಸಮ್ಮುಖದಲ್ಲಿ ಜೆಡಿಎಸ್ ಪಕ್ಷಕ್ಕೆ ಸೇರ್ಪಡೆಗೊಂಡರು.

ಕೆಸ್ತೂರು ಗ್ರಾಮದಲ್ಲಿ ಆಯೋಜಿಸಿದ್ದ ಸೇರ್ಪಡೆ ಕಾರ್ಯಕ್ರಮದ ವೇಳೆ ಮಾಜಿ ಸಚಿವ ಡಿ.ಸಿ ತಮ್ಮಣ್ಣ ಪಕ್ಷದ ಜಿಲ್ಲಾಧ್ಯಕ್ಷ ಡಿ.ರಮೇಶ್, ಸಮ್ಮುಖದಲ್ಲಿ ಅಧಿಕೃತವಾಗಿ ಕಾಂಗ್ರೆಸ್ ತೊರೆದು ಜೆಡಿಎಸ್ ಪಕ್ಷಕ್ಕೆ ಸೇರ್ಪಡೆಗೊಂಡರು.

ಬಳಿಕ ಮಾತನಾಡಿದ ಮಾಜಿ ಸಚಿವ ಡಿ.ಸಿ

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ–3 | 11–04–2024

ಮೈಸೂರು

ಶ್ರೀಮಹಾಲಕ್ಷ್ಮಿ ಗುಂಜಾ ನರಸಿಂಹಸ್ವಾಮಿ ಸನ್ನಿಧಾನಕ್ಕೆ ಆಗಮಿಸಿದ ಭಕ್ತ ಸಾಗರ

■ ಕಾಯಕಯೋಗಿ ಸುದ್ದಿ

ಟಿ ನರಸೀಪುರ ಐತಿಹಾಸಿಕ ಶ್ರೀ ಮಹಾಲಕ್ಷ್ಮಿ ಗುಂಜ ನರಸಿಂಹಸ್ವಾಮಿ ದೇವಾಲಯಕ್ಕೆ ಯುಗಾದಿ ಹಬ್ಬದಂದು ವಿಶೇಷ ಪೂಜೆಗೆ ವಿವಿಧ ಜಿಲ್ಲೆಗಳು ಸೇರಿದಂತೆ ವಿವಿಧ ಗ್ರಾಮಗಳಿಂದ ಸಹಸ್ರಾರು ಭಕ್ತರು ಆಗಮಿಸಿ ದೇವರ ದರ್ಶನ ಪಡೆದರು.

ಕಾವೇರಿ , ಕಪಿನಿ, ಸ್ಪಟಿಕ, ಮೂರು ನದಿಗಳು ಬೇರೆ ಬೇರೆಯಾಗಿ ಹರಿದು ಟಿ ನರಸೀಪುರ ಗುಂಜಾ ನರಸಿಂಹಸ್ವಾಮಿ ದೇವಾಲಯದ ಬಳಿ ಒಟ್ಟಾಗಿ ಸೇರಿ ಹರಿಯುತ್ತದೆ ಮೂರು ನದಿಗಳು ಒಟ್ಟಾಗಿ ಸೇರಿ ಹರಿಯುವ ಈ ಸ್ಥಳವನ್ನು ಕೂಡಲಸಂಗಮ ಎಂಡು ಕರೆಯುತ್ತಾರೆ ಈ ಸ್ಥಳದಲ್ಲಿ ಯುಗಾದಿ ಹಬ್ಬದಿನದಂದು ಸ್ನಾನ ಮಾಡಿದರೆಪುಣ್ಯ ಪ್ರಾಪ್ತಿಯಾಗುತ್ತದೆಎಂಬುದು ಇಲ್ಲಿನ ಭಕ್ತಾದಿಗಳ ನಂಬಿಕೆಈ ಸ್ಥಳಕ್ಕೆಸುತ್ತ ಮುತ್ತಲ ಗ್ರಾಮಸ್ಥರು ಸೇರಿದಂತೆವಿವಿಧ ರಾಜ್ಯ ಜಿಲ್ಲಾ ಹಾಗೂತಾಲೂಕು ಗಳಿಂದಸಹಸ್ರಾರು



ಸಂಖ್ಯೆಯಲ್ಲಿ ಭಕ್ತ ಸಾಗರವು ಹರಿದು ಬಂದು ಕೂಡಲಸಂಗಮದಲ್ಲಿ ಮಡಿ ಮೈಲಿಗೆ ತೊಳೆದು ದೇವರ ದರ್ಶನ ಪಡೆದು ಪುನೀತರಾಗುತ್ತಾರೆ ಅಲ್ಲದೆ ಹರಕೆ ಭಕ್ತರುಛಾ ಉಪಹಾರ ಸೇರಿದಂತೆ ಮಜ್ಜಿಗೆತಂಪು ಪಾನೀಯ ಗಳನ್ನುಭಕ್ತಾದಿಗಳಿಗೆ ನೀಡಿ ದೇವರ ಸೇವೆಗೆ ಪ್ರಾಪ್ತರಾಗುತ್ತಾರೆ

ಚುನಾವಣಾ ವೆಚ್ಚ ಪರಿಶೀಲನೆ

ಮೈಸೂರು: ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದಲ್ಲಿ ಚುನಾವಣೆಗೆ ಸ್ಪರ್ಧಿಸಿರುವ ಅಭ್ಯರ್ಥಿಗಳ ಚುನಾವಣಾ ವೆಚ್ಚದ ಲೆಕ್ಕಗಳ ಪರಿಶೀಲನೆಯನ್ನು ಚುನಾವಣಾ ವೆಚ್ಚ ವೀಕ್ಷಕರು ಚುನಾವಣಾ ನೀತಿ ಅನ್ವಯ ಚುನಾವಣಾ ಅವಧಿಯಲ್ಲಿ ಒಟ್ಟು ಮೂರು ಬಾರಿ ಪರಿಶೀಲಿಸಲಾಗುತ್ತಿದ್ದು, ಅದರಂತೆ ಏಪ್ರಿಲ್ 12, 19 ಹಾಗೂ 24 ರಂದು ವೆಚ್ಚಗಳ ಪರಿಶೀಲಿಸಲಾಗುತ್ತಿದ್ದು ಅಭ್ಯರ್ಥಿಗಳು ಅಥವಾ ಏಜೆಂಟರುಗಳು ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಬೆಳಿಗ್ಗೆ 10 ರಿಂದ ಸಂಜೆ 5 ಗಂಟೆಯೊಳಗೆ ಹಾಜರಾಗುವಂತೆ ಜಿಲ್ಲಾಧಿಕಾರಿ ಗಳು ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ.ರಾಜೇಂದ್ರ ಕೆ.ವಿ ಸೂಚಿಸಿದ್ದಾರೆ.

ಏ.14 ರಂದು 133 ನೇ ಡಾ.ಬಿ.ಆರ್ ಅಂಬೇಡ್ಕರ್ ಜಯಂತಿ

ಮೈಸೂರು: ಜಿಲ್ಲಾಡಳಿತದ ವತಿಯಿಂದ ಏ.14 ರಂದು ಬೆಳಿಗ್ಗೆ 9.30 ಗಂಟೆಗೆ ಮೈಸೂರು ಪುರಭವನದ ಆವರಣದಲ್ಲಿ ಡಾ.ಬಿ.ಆರ್ ಅಂಬೇಡ್ಕರ್ ರವರ 133 ನೇ ಜನ್ಮ ದಿನಾಚರಣೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿಯ ಜಿಲ್ಲಾಧಿಕಾರಿ ಹಾಗೂ ಅಧ್ಯಕ್ಷರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮತದಾರರೊಂದಿಗೆ ನಡೆಸುವ ಸಂವಾದ ಕಾರ್ಯಕ್ರಮಗಳನ್ನು ಒಳಾಂಗಣದಲ್ಲಿ ಆಯೋಜಿಸುವ ಬಗ್ಗೆ

ಮೈಸೂರು: ಲೋಕಸಭಾ ಸಾರ್ವತ್ರಿಕ ಚುನಾವಣೆ– 2024ರ ಸಂಬಂಧ ವಿದ್ಯುನ್ಮಾನ ಮಾಧ್ಯಮಗಳು ಅಥವಾ ವಿವಿಧ ಮಾಧ್ಯಮ ಗಳು ಮತದಾರರೊಂದಿಗೆ ನಡೆಸುವ ಸಂವಾದ ಕಾರ್ಯಕ್ರಮಗಳನ್ನು ಹೊರಾಂಗಣದಲ್ಲಿ ನಡೆಸದೆ, ಒಳಾಂಗಣಗಳಲ್ಲಿ (in door) ಸಹಾಯಕ ಚುನಾವಣಾಧಿಕಾರಿಗಳ ಅನುಮತಿ ಪಡೆದು ಆಯೋಜಿಸಬೇಕೆಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವೈಕುಂಠರಾಜ ನಾಟಕ ಪ್ರದರ್ಶನ

ಮೈಸೂರು: ರಂಗಾಯಣದ ಭಾರತೀಯ ರಂಗಶಿಕ್ಷಣ ಕೇಂದ್ರದ ವಿದ್ಯಾರ್ಥಿಗಳಿಂದ ಹೈಸ್ಕಾಮ್ ತೋಂಬಾ ಅವರ ನಿರ್ದೇಶನದಲ್ಲಿ ಏ.14 ರಿಂದ ಪ್ರತಿ ಭಾನುವಾರ ಸಂಜೆ 6.30 ಗಂಟೆಗೆ 'ವೈಕುಂಠ' ನಾಟಕ ಪ್ರದರ್ಶನವನ್ನು ರಂಗಾಯಣದ ಬಹುರೂಪಿ ರಂಗಮಂದಿರದಲ್ಲಿ ಏರ್ಪಡಿಸಲಾಗಿದೆ ಎಂದು ರಂಗಾಯಣದ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಲೋಕ ಸಮರಕ್ಕೆ ಅರಮನೆ ನಗರಿಯಲ್ಲಿ, ಘಟಾನುಘಟಿಗಳ ಸಜ್ಜು! ರಂಗೇರುತ್ತಿದೆ ಚಾಮರಾಜನಗರ ಮತ್ತು ಮೈಸೂರು ಕೊಡಗು ಕ್ಷೇತ್ರ


■ ಕಾಯಕಯೋಗಿ ಸುದ್ದಿ
ವಿಶೇಷ ವರದಿ

ಮೈಸೂರು: ಪಟ್ಟಣ ಮತ್ತು ಗ್ರಾಮೀಣ ಪ್ರದೇಶದ ಅರಳಿ ಕಟ್ಟೆ ಜಿಗುಳಿಯಲ್ಲೂ ಚುನಾವಣೆಯದ್ದೆ ಮಾತಾಗಿದೆ. ದಿನ ಕಳೆಯುತ್ತಿದ್ದಂತೆಯೇ ರಾಜ್ಯದಲ್ಲಿ ಲೋಕಸಭಾ ಚುನಾವಣೆಯ ಕಾವು ರಂಗೇರತೊಡಗಿದ್ದು, ರಾಜಕೀಯ ಪಕ್ಷಗಳ ಆರೋಪ ಪ್ರತ್ಯಾರೋಪ, ಮತದಾರರನ್ನು ಓಲೈಸಲು ಮಾಡುವ ರಂಗಿನಾಟ ಮೆರುಗು ಪಡೆಯುತ್ತಿದೆ. ಇದರ ಜೊತೆಗೆ ಅರಮನೆ ನಗರಿ ಮೈಸೂರು ರಾಜಕೀಯ ಶಕ್ತಿ ಕೇಂದ್ರ ವಾಗಿ ಮಾರ್ಪಾಡಾಗಿದೆ.

ಯುಗಾದಿ ಹಬ್ಬದ ಬಳಿಕ ರಾಜಕೀಯ ನಾಯಕರ ಸಮಾಗಮಕ್ಕೆ ಅರಮನೆ ನಗರಿ ಮೈಸೂರು ಸಾಕ್ಷಿಯಾಗಲಿದ್ದು, ರಾಜಕೀಯ ಪಕ್ಷಗಳ ಘಟಾನುಘಟಿ ನಾಯಕರ ಅಬ್ಬರ ಪ್ರಚಾರಕ್ಕೆ ಮೈಸೂರು ವೇದಿಕೆಯಾಗಲಿದೆ. ಪ್ರಧಾನಿ ಮೋದಿ, ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ಇತರ ಪ್ರಮುಖರು ಮೈಸೂರಿನಲ್ಲಿ ಅಬ್ಬರ ಪ್ರಚಾರದಲ್ಲಿ ತೊಡಗಲು ಸಜ್ಜಾಗುತ್ತಿದ್ದಾರೆ.

ಮಹಾರಾಜ ಕಾಲೇಜಿನಲ್ಲಿ ರಾಜಕೀಯ ಪಕ್ಷಗಳ ಬೃಹತ್ ರ್ಯಾಲಿಗಳು ನಡೆಯಲಿದ್ದು, ಪ್ರತಿಪಕ್ಷಗಳ ಇಂಡಿಯಾ ಮೈತ್ರಿ ಕೂಟ ಮತ್ತು ಎನ್‌ಡಿಎ ಬಣಗಳ ಉನ್ನತ ನಾಯಕರು ಅಬ್ಬರದ ಪ್ರಚಾರ ನಡೆಸಲಿದ್ದಾರೆ. ಈ ಬಾರಿಯ ಚುನಾವಣೆಯಲ್ಲಿ ಹಳೆ ಮೈಸೂರಿನಲ್ಲಿ ಹಿಡಿತ ಸಾಧಿಸಲು ಮತ್ತು ಗರಿಷ್ಠ ಸ್ಥಾನಗಳನ್ನು ಗೆಲ್ಲಲು ಬಿಜೆಪಿ–ಜೆಡಿಎಸ್ ಮತ್ತು ಕಾಂಗ್ರೆಸ್ ಭಾರೀ ಪೈಪೋಟಿ ನಡೆಸುತ್ತಿವೆ. ಬಿಜೆಪಿ ಅಭ್ಯರ್ಥಿ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಮತ್ತು ಕಾಂಗ್ರೆಸ್ ಅಭ್ಯರ್ಥಿ ಎ ಲಕ್ಷ್ಮಣ್ ಅವರು ಈಗಾಗಲೇ ಮೈಸೂರು ನಗರದಲ್ಲಿ ಒಂದು ಸುತ್ತಿನ ಪ್ರಚಾರ ಮುಗಿಸಿ ಮೈಸೂರು–ಕೊಡಗು ಕ್ಷೇತ್ರದ ಇತರೆ ವಿಧಾನಸಭಾ ಕ್ಷೇತ್ರಗಳಲ್ಲಿ ಪ್ರಚಾರ ಕೈಗೊಳ್ಳಲಿದ್ದಾರೆ. ಏಪ್ರಿಲ್ 19 ರಂದು ಮೈಸೂರಿನಲ್ಲಿ ಬಿಜೆಪಿ ರ್ಯಾಲಿ ನಡೆಸಲಿದ್ದು, ಪ್ರಧಾನಿ ಮೋದಿ, ಮಾಜಿ ಪ್ರಧಾನಿ ಹೆಚ್ ಡಿ ದೇವೇಗೌಡ, ಮಾಜಿ ಮುಖ್ಯಮಂತ್ರಿಗಳಾದ ಎಚ್ ಡಿ ಕುಮಾರಸ್ವಾಮಿ ಮತ್ತು ಬಿಎಸ್ ಯಡಿಯೂರಪ್ಪ ಭಾಷಣ ಮಾಡಲಿದ್ದಾರೆ.

ಹಿಂದುಳಿದ ವರ್ಗಗಳ ನಾಯಕ ಮತ್ತು ಬಿಹಾರ ಸಿಎಂ ನಿತೀಶ್ ಕುಮಾರ್ ಮತ್ತು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರನ್ನು



ಕರೆತರಲು ಪಕ್ಷವು ಸಿದ್ಧತೆ ನಡೆಸುತ್ತಿದೆ ಎಂದು ತಿಳಿದುಬಂದಿದೆ.

ಈ ರ್ಯಾಲಿಯು ಒಗ್ಗಟ್ಟಿನ ಸಂದೇಶವನ್ನು ರವಾನಿಸಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ತವರು ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿ ಯದುವೀರ್ ಅವರ ಗೆಲುವಿಗೆ ಕ್ರಮಸಲು ಬಿಜೆಪಿ ಮತ್ತು ಜೆಡಿಎಸ್ ಕಾರ್ಯಕರ್ತರನ್ನು ಹುರಿದುಂಬಿಸಲು ಸಿದ್ಧತೆ ನಡೆಸಲಾಗಿದೆ ಎನ್ನಲಾಗಿದೆ.

ಬಿಜೆಪಿಯ ಈ ಅಬ್ಬರ ಪ್ರಚಾರಕ್ಕೆ ಪ್ರತಿಯಾಗಿ ಕಾಂಗ್ರೆಸ್ ಕೂಡ ಸಿದ್ಧತೆ ಆರಂಭಿಸಿದೆ. ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರೊಂದಿಗೆ ಮೈಸೂರು ಮತ್ತು ಚಾಮರಾಜನಗರ ಲೋಕಸಭಾ ಕ್ಷೇತ್ರಗಳಲ್ಲಿ ಏಪ್ರಿಲ್ 12 ರಿಂದ ಮೂರು ದಿನಗಳ ಕಾಲ ಸಿದ್ಧರಾಮಯ್ಯ ಅವರು ಪ್ರಚಾರ ನಡೆಸಲಿದ್ದಾರೆಂದು ತಿಳಿದುಬಂದಿದೆ.

ಸಚಿವರಾದ ಸತೀಶ್ ಜಾರಕಿಹೊಳಿ, ಜಿ.ಪರಮೇಶ್ವರ್, ಕೆಪಿಸಿಸಿ ಕಾರ್ಯಾಧ್ಯಕ್ಷ ತನ್ವೀರ್ ಸೇಠ್ ನಾಯಕರೊಂದಿಗೆ ಹಿಂದುಳಿದ ಸಮುದಾಯಗಳು, ಅಲ್ಪಸಂಖ್ಯಾತರು ಮತ್ತು ದಲಿತರ ಮತಗಳನ್ನು ಕ್ರೋಢೀಕರಿಸಲು ಪ್ರಚಾರ ನಡೆಸಲಿದ್ದಾರೆ. ಶಿವಕುಮಾರ್ ಕೂಡ ಒಕ್ಕಲಿಗ ಮುಖಂಡರ ಸಭೆ ನಡೆಸಿ ಸಮುದಾಯದ ಬೆಂಬಲ ಪಡೆಯಲು ಯತ್ನ ನಡೆಸಲಿದ್ದಾರೆಂದು ತಿಳಿದುಬಂದಿದೆ.

ಚಾಮರಾಜನಗರ ಕ್ಷೇತ್ರದ ಕೆಲವು ಭಾಗಗಳಲ್ಲಿ ರಾಹುಲ್ ಗಾಂಧಿ ಮತ್ತು ಇಂಡಿಯಾ ಒಕ್ಕೂಟದ ನಾಯಕರೊಂದಿಗೆ ರ್ಯಾಲಿಗಳ ನಡೆಸಲು ಕೆಪಿಸಿಸಿ ಚಿಂತನೆ ನಡೆಸಿದ್ದು, ಸುರ್ಜೆವಾಲಾ, ಕೆಸಿ ವೇಣುಗೋಪಾಲ್ ಮತ್ತು ಇತರರು ಈ ರ್ಯಾಲಿಯಲ್ಲಿ ಪ್ರಚಾರ ಮಾಡುವ ಸಾಧ್ಯತೆಗಳಿವೆ ಎಂದು ಮೂಲಗಳು ತಿಳಿಸಿವೆ.

ಒಟ್ಟಿನಲ್ಲಿ ಮೈಸೂರು ಮತ್ತು ಚಾಮರಾಜನಗರ ಲೋಕಸಭಾ ಕ್ಷೇತ್ರದ ಚುನಾವಣೆ ದಿನೇ ದಿನೇ ರಂಗೇರುತ್ತಿದ್ದು, ಅಭ್ಯರ್ಥಿಗಳು ಮಾತ್ರ ಗೆಲುವಿನ ಮಂತ್ರ ಪಠಿಸುತ್ತಿದ್ದಾರೆ.

ಯುವ ಮತದಾರರ ಗಮನ ಸೆಳೆಯಲು ಬೈಕ್ ರ್ಯಾಲಿ

■ ಕಾಯಕಯೋಗಿ ಸುದ್ದಿ

ಮೈಸೂರು: ಲೋಕಸಭಾ ಚುನಾವಣೆಯು ಹತ್ತಿರ ಬರುತ್ತಿರುವ ಹಿನ್ನೆಲೆ ಮತದಾರರಲ್ಲಿ ಮತದಾನದ ಮಹತ್ವ ಹಾಗೂ ಅರಿವನ್ನು ಮೂಡಿಸಲು ಮತ್ತು ಭಾರತೀಯ ಚುನಾವಣಾ ಆಯೋಗವು ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಜಾಗೃತಿ ಮೂಡಿಸಿ, ಪ್ರತಿಯೊಬ್ಬ ಮತದಾರರು ಅದರಲ್ಲೂ ಯುವ ಮತದಾರರ ಗಮನ ಸೆಳೆಯಬೇಕಿದೆ. ಹಾಗಾಗಿ ಜಿಲ್ಲಾಡಳಿತ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಬೈಕ್ ರ್ಯಾಲಿಯನ್ನು ಏರ್ಪಡಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಅವರು ತಿಳಿಸಿದರು.

ಜಿಲ್ಲಾಡಳಿತ ಹಾಗೂ ಜಿಲ್ಲಾ ಸ್ವೀಪ್ ಸಮಿತಿ, ಮಹಾನಗರ ಪಾಲಿಕೆ ವತಿಯಿಂದ ಗನ್ ಹೌಸ್ ಸರ್ಕಲ್ ನಿಂದ ಕೆಂಪೇಗೌಡ ಸರ್ಕಲ್ ವರೆಗೆ ಆಯೋಜಿಸಿದ್ದ ಬೈಕ್ ರ್ಯಾಲಿ ಕಾರ್ಯಕ್ರಮದ ಭಾಗವೆಂಬಿ ಮಾತನಾಡಿದರು.

ಪ್ರತಿಯೊಬ್ಬ ಮತದಾರನು ಯಾವುದೇ ಆಸೆ ಆಮಿಷಕ್ಕೆ ಒಳಗಾಗದೆ ನೈತಿಕ ಮತದಾನ ವನ್ನು ಕಡ್ಡಾಯವಾಗಿ ಮಾಡಬೇಕು ಎಂದರು.

ಪ್ರಸ್ತುತ ಯುವಜನರು ಮತದಾನ ಎಂದರೆ ಹಿಂಜರಿಯುವುದುಂಟು. ಹಾಗಾಗಿ ಅವರಿಗೆ ಮತದಾನದ ಮಹತ್ವವನ್ನು ತಿಳಿಸಬೇಕು. ಹೆಚ್ಚಿನ ಸಂಖ್ಯೆಯಲ್ಲಿ ಮತದಾನ ಮಾಡಿ




ಚುನಾವಣೆಯನ್ನು ಯಶಸ್ವಿ ಮಾಡಿಬೇಕು ಎಂದರು.

ಚುನಾವಣಾ ಅಕ್ರಮಗಳನ್ನು ತಡೆಯುವುದು ಕೇವಲ ಅಧಿಕಾರಿಗಳಿಗೆ ಸೀಮಿತ ವಾಗಿಲ್ಲ. ಬದಲಾಗಿ ಪ್ರತಿಯೊಬ್ಬ ವ್ಯಕ್ತಿಯು ನಮ್ಮೊಂದಿಗೆ ಕೈಜೋಡಿಸಿ ಚುನಾವಣಾ ಅಕ್ರಮಗಳು ಕಂಡುಬಂದರೆ ಸಿ ವಿಜಿಲ್ ಆಪ್ ನಲ್ಲಿ ವಿಡಿಯೋ, ಆಡಿಯೋ, ಫೋಟೋ ಹಾಗೂ ಜಿ.ಪಿ.ಎಸ್ ಮೂಲಕ ಮಾಹಿತಿ ಯನ್ನು ನೀಡಿ ಅಕ್ರಮವನ್ನು ತಡೆಗಟ್ಟಲು ಸಹಕರಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪೊಲೀಸ್ ಆಯುಕ್ತರಾದ ರಮೇಶ್ ಬನೋತ್ , ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾ ಹಣಾಧಿಕಾರಿ ಹಾಗೂ ಜಿಲ್ಲಾ ಸ್ವೀಪ್ ಸಮಿತಿಯ ಅಧ್ಯಕ್ಷರಾದ ಕೆ.ಎಂ ಗಾಯಿತ್ರಿ, , ಜಿಲ್ಲಾ ಪೊಲೀಸ್ ಮಹಿಷ್ಮಾಧಿಕಾರಿಗಳಾದ ಸಿಷಾ ಲಾಟ್ಕರ್, ಮಹಾನಗರ ಪಾಲಿಕೆಯ ಆಯುಕ್ತರಾದ ಎನ್. ಎನ್ ಮಧು ಸೇರಿದಂತೆ ಇನ್ನಿತರ ಜಿಲ್ಲಾ ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

ಹಾಲು ಉತ್ಪಾದಕರಿಗೆ ಹಣ ಜಮೆ ಮಾಡುವಂತೆ ಆಗ್ರಹ

ನಂಜನಗೂಡು: ಹಾಲು ಉತ್ಪಾದಕರಿಗೆ ಕೂಡಲೇ ಹಣವನ್ನು ಜಮೆ ಮಾಡುವಂತೆ ನಂಜನಗೂಡಿನಲ್ಲಿ ಸಾಮೂಹಿಕ ನಾಯಕತ್ವದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಂಪಾಪುರ ಗ್ರಾಮದ ಹಾಲು ಉತ್ಪಾದಕರು ಒತ್ತಾಯವನ್ನು ಮಾಡಿದ್ದಾರೆ. ನಂಜನಗೂಡು ನಗರದ ತಾಲೂಕು ಆಡಳಿತ ಭವನದ ಮುಂಭಾಗದಲ್ಲಿ ಇಂದು ಹಂಪಾಪುರ ಗ್ರಾಮದಲ್ಲಿ ಕಾರ್ಯನಿರ್ವಹಿಸುತ್ತಿರುವವಾಲು ಉತ್ಪಾದಕರ ಮಹಿಳಾ ಸಹಕಾರ ಸಂಘದಲ್ಲಿ ಹಾಲು ಉತ್ಪಾದಕರಿಗೆ ಹಣ ಜಮೆಯಾಗಿಲ್ಲ. ಸರ್ಕಾರದಿಂದ ನೀಡುವ ಪ್ರೋತ್ಸಾಹ ಧನವನ್ನು ಸರಿಯಾಗಿ ನೀಡುತ್ತಿಲ್ಲ. ಮಹಿಳಾ ಸಹಕಾರ ಸಂಘ ಆಗಿರುವುದರಿಂದ ಮಹಿಳಾ ಕಾರ್ಯದರ್ಶಿ ಕಾರ್ಯನಿರ್ವಹಿಸಬೇಕು. ಆದರೆ ಅವರ ಪತಿ ಕಾರ್ಯನಿರ್ವಹಿಸುತ್ತಿದ್ದಾರೆ. ಹಾಲನ್ನು ಅವರ ಮನೆಯಲ್ಲಿಯೇ ಸಂಗ್ರಹ ಮಾಡುತ್ತಿದ್ದಾರೆ. ಉತ್ಪಾದಕರಿಗೆ ಬೋನಸ್ ನೀಡಿಲ್ಲ ಕೂಡಲೇ ರೈತರ ಖಾತೆಗೆ ಹಣವನ್ನು ಜಮೆ ಮಾಡಬೇಕು. ಸಂಘದಲ್ಲಿ ಕಾನೂನು ಉಲ್ಲಂಘನೆ ಮಾಡಿರುವ ಕಾರ್ಯದರ್ಶಿಯ ವಿರುದ್ಧ ಸೂಕ್ತ ಕ್ರಮ ಕೈಗೊಂಡು ಕೆಲಸದಿಂದ ವಜಾ ಮಾಡಬೇಕು. ಹೊಸದಾಗಿ ಕಾರ್ಯದರ್ಶಿಯನ್ನು ನೇಮಕ ಮಾಡಬೇಕು ಹಾಗೂ ಕಮಿಟಿ ರಚನೆ ಮಾಡಿ ಚುನಾವಣೆಯನ್ನು ಮಾಡಬೇಕು ಎಂದು ಸಾಮೂಹಿಕ ನಾಯಕತ್ವದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆಯ ಜಿಲ್ಲಾಧ್ಯಕ್ಷ ವಿದ್ಯಾಸಾಗರ್ ಒತ್ತಾಯಿಸಿದ್ದಾರೆ. ಈ ಸಂದರ್ಭದಲ್ಲಿ ರೈತ ಸಂಘದ ಮುಖಂಡರು ಹಾಗೂ ಹಾಲು ಉತ್ಪಾದಕರು ಭಾಗವಹಿಸಿದ್ದರು.



ನಂಜನಗೂಡಿನ ಬಸ್, ರೈಲ್ವೆ ನಿಲ್ದಾಣಗಳಲ್ಲಿ ಮತದಾನ ಜಾಗೃತಿ ಪ್ರವಾಸ ಕೈಬಿಡಿ: ಬೆರಳಿಗೆ ಇಂಕು ಹಾಕಿಸಿಕೊಳ್ಳುವಂತೆ ಕರೆ

■ ಕಾಯಕಯೋಗಿ ಸುದ್ದಿ

ನಂಜನಗೂಡು: ಮತದಾನದ ದಿನ ರಜೆಯ ದಿನ ಅಲ್ಲ. ಅಂದು ಪ್ರವಾಸವನ್ನು ಕೈಗೊಳ್ಳದೆ ಜವಾಬ್ದಾರಿಯುತ ನಾಗರಿಕರಾಗಿ ಸಂವಿಧಾನಿಕ ಹಕ್ಕನ್ನು ಚಲಾಯಿಸುವಂತೆ ನಂಜನಗೂಡು ತಾಲ್ಲೂಕು ಸ್ವೀಪ್ ಸಮಿತಿಯಿಂದ ಸಾರ್ವಜನಿಕರಿಗೆ ಅರಿವು ಮೂಡಿಸಲಾಯಿತು.

ಚಾಮರಾಜನಗರ ಲೋಕಸಭಾ ಚುನಾವಣೆಯಲ್ಲಿ ಮತದಾನ ಪ್ರಮಾಣ ಹೆಚ್ಚಿಸುವ ನಿಟ್ಟಿನಲ್ಲಿ ತಾಲ್ಲೂಕು ಪಂಚಾಯಿತಿ ಸ್ವೀಪ್ ಸಮಿತಿ ವತಿಯಿಂದ ನಿತ್ಯ ವಿನೂತನ ರೀತಿಯಲ್ಲಿ ಮತದಾನ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳುತ್ತಿದ್ದು, ಇಂದು ನಂಜನಗೂಡು ನಗರದ ರೈಲ್ವೆ ನಿಲ್ದಾಣ ಹಾಗೂ ಸಾರ್ವಜನಿಕ ಬಸ್ ನಿಲ್ದಾಣದಲ್ಲಿ ಏಪ್ರಿಲ್ 26 ರಂದು ಪ್ರವಾಸ ಕೈಗೊಳ್ಳದೆ ತಪ್ಪದೆ ಮತದಾನ ಮಾಡುವಂತೆ ಅರಿವು ಮೂಡಿಸಿದ್ದಾರೆ. ಹೆಚ್ಚು ಜನಸಂದಣಿ ಇರುವ ಬಸ್ ನಿಲ್ದಾಣದಲ್ಲಿ ತಮ್ಮ ತಮ್ಮ ಹಳ್ಳಿಗೆ ತೆರಳಲು ಬಸ್ಸಿಗಾಗಿ ಕಾಯುತ್ತಿದ್ದ ಹಿರಿಯರು, ಕಾಲೇಜು ಯುವಕ–ಯುವತಿಯರು ಸೇರಿದಂತೆ ಎಲ್ಲಾ ಸಾರ್ವಜನಿಕರಿಗೆ ಸಮೃದ್ಧ ಮತ್ತು ಸದೃಢ ದೇಶ ಕಟ್ಟಲು ಪ್ರತಿಯೊಬ್ಬರ ಮತವು ಅತ್ಯಮೂಲ್ಯ ಎಂಬುದನ್ನು ಮನದಟ್ಟು ಮಾಡಲಾಯಿತು. ಇನ್ನೊಂದೆಡೆ ರೈಲು ನಿಲ್ದಾಣದಲ್ಲಿ ಮತದಾನದ ಬಗ್ಗೆ ಅರಿವು ಮೂಡಿಸುವ ಜಾಗೃತ ಗೀತೆ, ಘೋಷ



ವಾಕ್ಯಗಳನ್ನು ಕೇಳಿಸಿ, ಮತದಾನ ದಿನ ರಜೆ ಎಂದು ಭಾವಿಸದೆ ಮತ ಹಾಕುವ ಮೂಲಕ ಚುನಾವಣಾ ಹಬ್ಬವನ್ನು ಆಚರಿಸುವಂತೆ ಕರೆ ನೀಡಲಾಯಿತು.

ಈ ಸಂದರ್ಭದಲ್ಲಿ ತಾಲ್ಲೂಕು ಸ್ವೀಪ್ ಸಮಿತಿಯ ದಿನೇಶ್, ಬಸವರಾಜು, ರವಿ, ಕಾವ್ಯ ಸೇರಿದಂತೆ ಸಿಬ್ಬಂದಿಗಳು ಭಾಗವಹಿಸಿದ್ದರು.

ಚಿಣ್ಣರಮೇಳ ಉದ್ಘಾಟನಾ ಸಮಾರಂಭ

ಮೈಸೂರು: ರಂಗಾಯಣದ ವತಿಯಿಂದ ಚಿಣ್ಣರಮೇಳ–2024 ರ ಮಕ್ಕಳ ರಂಗ ತರಬೇತಿ ಶಿಬಿರವನ್ನು ಏ.12 ರಿಂದ ಮೆ.07 ರವರೆಗೆ ರಂಗಾಯಣದ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ. ಏ.12 ರಂದು ಸಂಜೆ 5 ಗಂಟೆಗೆ ರಂಗಾಯಣದ ವನರಂಗ ಬಯಲು ರಂಗಮಂದಿರದಲ್ಲಿ ಇಂಡಿಯಾ ಬುಕ್ ಆಫ್ ರೆಕಾರ್ಡ್ಸ್ ಬಾಲ ರಂಗ ಕಲಾವಿದರಾದ ಕು. ಗೋಕುಲ ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಮೈಸೂರು ವಿಭಾಗದ ಜಂಟಿ ನಿರ್ದೇಶಕರಾದ ವಿ.ಎನ್. ಮಲ್ಲಿಕಾರ್ಜುನಸ್ವಾಮಿ ಅವರು ಅಧ್ಯಕ್ಷತೆಯನ್ನು ವಹಿಸುವರು.

ಮಂಡ್ಯ ಜಿಲ್ಲೆ ಜನಪದಗಳ ತವರಾಗಿದೆ: ಹಿ.ಚಿ.ಬೋರಲಿಂಗಯ್ಯ

ಮಂಡ್ಯ: ಜಿಜಾಪುರ

website: www.kayakayogi.com
ಕಾಯಕಯೋಗಿ
KAYAKA YOGI - Regional Daily
ಪುಟ–4
11–04–2024
ತುಮಕೂರು–ಚಾಮರಾಜನಗರ

ವಿಜೃಂಭಣೆಯ ಬೆಟ್ಟಳ್ಳಿ ಮಾರಮ್ಮನ ತೆಪ್ಪೋತ್ಸವ


■ ಕಾಯಕಯೋಗಿ ಸುದ್ದಿ

ಹನೂರು: ಪಟ್ಟಣ ಸಮೀಪದ ಆರ್.ಎಸ್ ದೊಡ್ಡಿಯಲ್ಲಿ ಶ್ರೀ ಬೆಟ್ಟಳ್ಳಿ ಮಾರಮ್ಮನ ತೆಪ್ಪೋತ್ಸವವು ಗ್ರಾಮಸ್ಥರ ಸಮ್ಮುಖದಲ್ಲಿ ವಿಜೃಂಭಣೆಯಿಂದ ಜರುಗಿತು.

ಶ್ರಿ ಬೆಟ್ಟಳ್ಳಿ ಮಾರಮ್ಮನ ದೇವಿಯನ್ನು ಕರೆತಂದ ಗ್ರಾಮಸ್ಥರು ರಾತ್ರಿ ಗ್ರಾಮದ ಕರೆ ವಿರಿಯ ಬಳಿ ವಿಶೇಷ ಪೂಜೆಯನ್ನು ಸಲ್ಲಿಸಿದರು. ಬಳಿಕ ವಿವಿಧ ಪುಷ್ಪ ಹಾಗೂ ವಿದ್ಯುತ್ ದೀಪಗಳಿಂದ ಸಿಂಗರಿಸಲಾಗಿದ್ದ ತೆಪ್ಪದಲ್ಲಿ ದೇವಿಯ ಮೂರ್ತಿಯನ್ನು ಕೂರಿಸಿ ನೆರೆದಿದ್ದ ಗ್ರಾಮಸ್ಥರ ಸಮ್ಮುಖದಲ್ಲಿ ವಿಜೃಂಭಣೆಯಿಂದ ತೆಪ್ಪೋತ್ಸವವನ್ನು ನೆರವೇರಿಸಲಾಯಿತು. ಈ ಸಂದರ್ಭದಲ್ಲಿ ಭಕ್ತರು ದೇವಿಯ ಬಗ್ಗೆ ಜಯಘೋಷ ಮೊಳಗಿಸಿದರು.

ಬಳಿಕ ಗ್ರಾಮದ ಕೆರೆಯ ವಿರಿಯ ಬಳಿ ಹಸಿರು ಸೊಪ್ಪಿನಿಂದ ನಿರ್ಮಿಸಿದ್ದ ಚಪ್ಪರದ ಉಯ್ಯಾಲೆಯಲ್ಲಿ ದೇವಿಯ ಉತ್ಸವಮೂರ್ತಿಯನ್ನು ಕೂರಿಸಿ ಪೂಜೆ ಸಲ್ಲಿಸಲಾಯಿತು. ನೆರೆದಿದ್ದ ಗ್ರಾಮಸ್ಥರ ಸಮ್ಮುಖದಲ್ಲಿ ಉಯ್ಯಾಲೋತ್ಸವ ನೆರವೇರಿಸಲಾಯಿತು.

ಈ ವೇಳೆ ಗ್ರಾಮದ ಮಹಿಳೆಯರು ದೇವಿಗೆ ತಂಪ್ಪುಜ್ಯೋತಿಯನ್ನು ಅರ್ಪಿಸಿ ದೇವರ ಕೃಪೆಗೆ ಪಾತ್ರರಾದರು. ರಾತ್ರಿ 12 ಗಂಟೆಯ ನಂತರ ಉತ್ಸವ ಮೂರ್ತಿಯನ್ನು ನಿಂಬೆಹಣ್ಣು ಹಾಗೂ ವಿವಿಧ ಪುಷ್ಪಗಳಿಂದ ಸಿಂಗರಿಸಿ ಸತ್ತಿಗೆ, ಸೂರಿಪಾನಿ ಹಾಗೂ ಮಂಗಳ ವಾದ್ಯಮೇಳ ದೊಂದಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಸಲಾಯಿತಲ್ಲದೇ ಪ್ರತಿ ಮನೆಯ ಮುಂದೆಯೂ ಉತ್ಸವ ಮೂರ್ತಿಗೆ ವಿಶೇಷ ಪೂಜೆ ಸಲ್ಲಿಸಲಾಯಿತು. ಬಳಿಕ ಉತ್ಸವ ಮೂರ್ತಿಯನ್ನು ಮೆರವಣಿಗೆಯ ಮೂಲಕ ಪಟ್ಟಣದ ಬೆಟ್ಟಳ್ಳಿ ಮಾರಮ್ಮನ ದೇಗುಲಕ್ಕೆ ಕರೆ ತರಲಾಯಿತು.



850 ವರ್ಷ ಇತಿಹಾಸವುಳ್ಳ ವಡ್ಡಗೆರೆ ವೀರನಾಗಮ್ಮ ದೇವಿ ಅದ್ದೂರಿ ಜಾತ್ರಾ ಮಹೋತ್ಸವ..

ದೇವಾಲಯಗಳ ಅಭಿವೃದ್ಧಿಗೆ ಮುಜರಾಯಿ ಇಲಾಖೆಯ ಧೋರಣೆ : ಶ್ರೀ ಹನುಮಂತನಾಥ ಸ್ವಾಮೀಜಿ

■ ಕಾಯಕಯೋಗಿ ಸುದ್ದಿ
ಮಂಜುಸ್ವಾಮಿ ಎಂ ಎನ್ ಕೊರಟಗೆರೆ

ಕೊರಟಗೆರೆ : ತಾಲ್ಲೂಕಿನ ವಡ್ಡಗೆರೆಯ ಪ್ರಸಿದ್ಧ ವೀರನಾಗಮ್ಮ ದೇವಿಯ ಜಾತ್ರಾ ಮಹೋತ್ಸವಕ್ಕೆ ಲಕ್ಷಾಂತರ ಜನ ಆಗಮಿಸಿದ್ದರು. ಬೇಸಿಗೆಯ ಕಡುಬಿಸಿಲನ್ನು ಲೆಕ್ಕಿಸದೆ ಪುಟ್ಟ ಮಕ್ಕಳೊಂದಿಗೆ ಕುಟುಂಬ ಸಮೇತ ಸರತಿ ಸಾಲಿನಲ್ಲಿ ನಿಂತು ದೇವಿಯ ದರ್ಶನ ಪಡೆದರು.

ಪ್ರತಿ ವರ್ಷವೂ ಹಿಂದುಗಳ ಮೊದಲ ಹೊಸ ವರ್ಷದ ಚೈತ್ರ ಮಾಸದ ಚಂದ್ರಮಾನ ಯುಗಾದಿ ಹಬ್ಬದ ಮಾರನೇ ದಿನ ವಡ್ಡಗೆರೆ ವೀರನಾಗಮ್ಮ ದೇವಿಯ ಜಾತ್ರೆಯು ಧಾರ್ಮಿಕ ಸಾಂಪ್ರದಾಯಿಕ ಆಚರಣೆಯೊಂದಿಗೆ ರಾಜ್ಯ ಸೇರಿದಂತೆ ನೆರೆ ರಾಜ್ಯವಾದ ತಮಿಳುನಾಡು, ಕೇರಳ , ಆಂದ್ರ ಪ್ರದೇಶ, ತೆಲಂಗಾಣ, ಗೋವಾ ರಾಜ್ಯಗಳಿಂದಲು ಸಹ ಭಕ್ತಾದಿಗಳು ಈ ಜಾತ್ರಾ ಮಹೋತ್ಸವಕ್ಕೆ ಆಗಮಿಸುತ್ತಾರೆ.

ವಿಶೇಷವಾಗಿ ಜಾತ್ರಾ ದಿನದಂದು ಮಹಿಳೆಯರು ಮತ್ತು ಹೆಣ್ಣು ಮಕ್ಕಳು ದೇವಿಯ ಕಲ್ಯಾಣಿಯಲ್ಲಿ ಮಿಂದು ಉರುಳು ಸೇವೆ ಮತ್ತು ದೀರ್ಘದಂಡ ಸೇವೆಗಳನ್ನು ಹರಿಕೆ ಮುಹಾಂತರ ತೀರಿಸುತ್ತಾರೆ.

ಈ ಜಾತ್ರೆಯಲ್ಲಿ ದೇವಿಗೆ ಜಲದಿ, ಆರತಿ ಸೇವೆ, ಉತ್ಸವ ನಡೆಯಲಿದ್ದು ಭಕಾದಿಗಳು ಸ್ವಯಂ ಆಗಿ ಪಾನಕ ಮತ್ತು ಮಜ್ಜಿಗೆಯನ್ನು ಭಕ್ತರಿಗೆ ನೀಡಿದರು. ದೇವಾಲಯದ ಆಡಳಿತ ಮಂಡಳಿ ಹಾಗೂ ವಡ್ಡಗೆರೆ ಗ್ರಾಮಸ್ಥರು ಜಾತ್ರೆಗೆ ಆಗಮಿಸಿದ್ದ ಸಾವಿರಾರು ಭಕ್ತರಿಗೆ ಅನ್ನ ಸಂತರ್ಪಣೆಯನ್ನು ಏರ್ಪಡಿಸಿದ್ದರು. ಒಟ್ಟಾರೆಯಾಗಿ ವಡ್ಡಗೆರೆ ವೀರನಾಗಮ್ಮ ಜಾತ್ರೆಯು ವಿವಿಧ ಆಚರಣೆಗಳೊಂದಿಗೆ ವಿಜೃಂಭಣೆಯಿಂದ ನಡೆಯಿತು.



ಭಕ್ತರ ಹಾಣಿಕೆಯನ್ನು ದೇವಾಲಯಕ್ಕೆ ನೀಡಿ
ಡಾ ಶ್ರೀ ಹನುಮಂತನಾಥ ಸ್ವಾಮೀಜಿ :–

ವಡ್ಡಗೆರೆ ವೀರನಾಗಮ್ಮ ದೇವಿ ಜಾತ್ರೆಗೆ ಆಗಮಿಸಿದ್ದ ಕುಂಚ ಶ್ರೀ ಶ್ರೀ ಹನುಮಂತನಾಥ ಸ್ವಾಮೀಜಿ ದೇವಾಲಯಗಳ ಬಗ್ಗೆ ಸರ್ಕಾರ ಮತ್ತು ಮುಜರಾಯಿ ಇಲಾಖೆಯ ಧೋರಣೆ ಬಗ್ಗೆ ತೀವ್ರ ಅಸಮಧಾನ ವ್ಯಕ್ತಪಡಿಸಿ ಈ ದೇವಾಲಯವು ಸುಮಾರು 850 ವರ್ಷಗಳ ಇತಿಹಾಸವಿದ್ದು ಭಕ್ತರ ಮತ್ತು ಗ್ರಾಮಸ್ಥರ ಹಾಗೂ ಟ್ರಸ್ಟ್‌ನ ಶ್ರವಣದಿಂದ ಮುಂದುವರೆಯುತ್ತಿದೆ. ಈ ದೇವಾಲಯವನ್ನು ಸರ್ಕಾರವು ಮುಜರಾಯಿ ಇಲಾಖೆಗೆ ಸೇರಿಸಿಕೊಂಡಿದ್ದು, ಸದರಿ ದೇವಾಲಯದಲ್ಲಿ ಭಕ್ತರು ಸಲ್ಲಿಸಿದ ಕಾಣಿಕೆಯ ಹುಂಡಿ ಹಣನ್ನು ತಪ್ಪದೇ ತೆಗೆದುಕೊಂಡು ಹೋಗಿ ಸರ್ಕಾರಕ್ಕೆ



ಸಲ್ಲಿಸುತ್ತಾರೆ. ಆದರೆ ದೇವಾಲಯದ ಜಾತ್ರೆ ಹಾಗೂ ಅಭಿವೃದ್ಧಿಗೆ ಯಾವುದೇ ಗಮನ ನೀಡದ ಇಲಾಖೆಗಳು ಹಾಗೂ ಸರ್ಕಾರವು ದೇವರಿಗೆ ಸಲ್ಲಿಸಿದ್ದ ಕಾಣಿಕೆಯನ್ನು ಬಳಸಿಕೊಳ್ಳುವ ಹಕ್ಕು ಇಲ್ಲ. ಇದು ದೇಶದ ಮತ್ತು ರಾಜ್ಯದ ಎಲ್ಲಾ ಮುಜರಾಯಿ ದೇವಾಲಯಗಳ ದುಸ್ಥಿತಿ ಇದಾಗಿದೆ. ಕೂಡಲೇ ಸರ್ಕಾರವು ದೇವಾಲಯಗಳನ್ನು ದೂರಿನ ಗ್ರಾಮಸ್ಥರಿಗೆ ಮತ್ತು ನಗರದ ಟ್ರಸ್ಟ್‌ಗಳಿಗೆ ವರ್ಗಾವಣೆ ಮಾಡಿ. ಇಲ್ಲವೇ ಭಕ್ತರ ಹಣ ದೇವಾಲಯದ ಅಭಿವೃದ್ಧಿಗೆ ನೀಡಿ ಎಂದು ಆಗ್ರಹಿಸಿದರು.

ಜಾತ್ರೆಗೆ ಭೇಟಿ ನೀಡಿದ ವಿ ಸೋಮಣ್ಣ,ವಡ್ಡಗೆರೆ ವೀರನಾಗಮ್ಮ ಜಾತ್ರೆಗೆ ತುಮಕೂರು ಕ್ಷೇತ್ರದ ಎನ್.ಡಿ.ಎ ಅಭ್ಯರ್ಥಿ ವಿ.ಸೋಮಣ್ಣ ಆಗಮಿಸಿ ವೀರನಾಗಮ್ಮನಿಗೆ ಪೂಜೆ ಸಲ್ಲಿಸಿ ಪತ್ರಕರ್ತರೊಂದಿಗೆ ಮಾತನಾಡಿ ಇತಿಹಾಸ ಪ್ರಸಿದ್ಧ ಪುರಾತನ ಕಾಲದಿಂದಲು ಶ್ರೀ ವೀರನಾಗಮ್ಮ ದೇವಾಲಯದ ಅಭಿವೃದ್ಧಿಗೆ ಭಕ್ತನಾಗಿ ನನ್ನ ಶಕ್ತಿ ಮೀರಿ ಸೇವೆಯನ್ನು ಸಲ್ಲಿಸುತ್ತೇನೆ ಎಂದರು. ಈ ಸಂದರ್ಭದಲ್ಲಿ ಸೋಮಣ್ಣನವರು ಭಕ್ತಾದಿಗಳಿಗೆ ಊಟ ಬಡಿಸಿದ್ದು ವಿಶೇಷವಾಗಿತ್ತು.

ಈ ಸಂದರ್ಭದಲ್ಲಿ ಟ್ರಸ್ಟ್‌ನ ಅಧ್ಯಕ್ಷ ವೀರಕ್ಯಾತರಾಯ, ಕಾರ್ಯದರ್ಶಿ ನಾಗೇಶ್, ಧರ್ಮದರ್ಶಿಗಳಾದ ಕ್ಯಾತಪ್ಪ, ಡಾ. ರಾಮಚಂದ್ರ, ವೀರನಾಗಪ್ಪ, ಶಿವಕುಮಾರ್, ಮಾರುತಿ, ಬಿಜೆಪಿ ಅನಿಲ್‌ಕುಮಾರ್ , ಮಧುಗಿರಿ ಜಿಲ್ಲಾ ಅಧ್ಯಕ್ಷ ಹನುಮಂತೇಗೌಡ, ಕೊರಟಗೆರೆ ಮಂಡಲ ಅಧ್ಯಕ್ಷ ಡಾ.ದರ್ಶನ್, ಮಾಜಿ ಅಧ್ಯಕ್ಷ ಪವನ್‌ಕುಮಾರ್, ಮುಖಂಡರುಗಳಾದ ವೆಂಕಟಾಚಲಯ್ಯ, ಲಿಂಗರಾಜು, ಡಾಡಿ ವೆಂಕಟೇಶ್, ನಟರಾಜು, ದಯಾನಂದ್, ಜೆಡಿಎಸ್ ಜಿಲ್ಲಾ ಸಂಘಟನಾ ಕಾರ್ಯದರ್ಶಿ ವಿರಕ್ತಾಕರಾಯ, ಮುಖಂಡರು ಗಳಾದ ಸಾಕಣ್ಣ, ನಾಗಭೂಷಣ್ ಸೇರಿದಂತೆ ಇತರರು ಹಾಜರಿದ್ದರು.

ಕಾಡಾನೆ ದಾಳಿ: ಮಹಿಳೆ ಬಲಿ

■ ಕಾಯಕಯೋಗಿ ಸುದ್ದಿ

ಚಾಮರಾಜನಗರ: ಪಾದಯಾತ್ರೆಯ ಮೂಲಕ ಮಲೆ ಮಾದೇಶ್ವರ ಬೆಟ್ಟಕ್ಕೆ ತೆರಳುತ್ತಿದ್ದ ಮಹಿಳೆಯ ಮೇಲೆ ಕಾಡಾನೆ ದಾಳಿ ನಡೆಸಿದ ಪರಿಣಾಮ ಸ್ಥಳದಲ್ಲಿ ಮೃತಪಟ್ಟಿರುವ ಘಟನೆ ಮಂಗಳವಾರ ರಾತ್ರಿ ಜರುಗಿದೆ.

ಮಂಡ್ಯ ಜಿಲ್ಲೆ ಮಳವಳ್ಳಿ ತಾಲೂಕಿನ ಹುಲ್ಲೇಗಾಳ ಗ್ರಾಮದ ಲಕ್ಷ್ಮಿ(36) ಮೃತಪಟ್ಟ ದುರ್ದೈವಿ ಆಗಿದ್ದಾರೆ.

ಘಟನೆ ವಿವರ: ಯುಗಾದಿ ಹಬ್ಬದ ದಿನ ಶ್ರೀ ಕ್ಷೇತ್ರ ಮಲೆ ಮಹದೇಶ್ವರ ಬೆಟ್ಟಕ್ಕೆ ಮಳವಳ್ಳಿ ತಾಲೂಕಿನ ಹೊನಗನಹಳ್ಳಿ ಗ್ರಾಮದಿಂದ ಸುಮಾರು 20 ಕ್ಕೂ ಹೆಚ್ಚು ಜನರು ಗೂಡ್ಸ್ ವಾಹನದಲ್ಲಿ ಮಲೆಮಾದೇಶ್ವರ ಬೆಟ್ಟಕ್ಕೆ ತೆರಳುವಾಗ



ತಾಳಬೆಟ್ಟದಲ್ಲಿ ಸುಮಾರು 15ಕ್ಕೂ ಹೆಚ್ಚು ಪಾದಯಾತ್ರಿಗಳು ಹೋಗುತ್ತಿರುವುದನ್ನು ಗಮನಿಸಿದ ಇವರು ಸಹ ಪಾದಯಾತ್ರೆಯ ಮೂಲಕ ಹೋಗುವುದಕ್ಕೆ ತೀರ್ಮಾನಿಸಿ ಅವರ ಜೊತೆಯಲ್ಲಿಯೇ ಪಾದಯಾತ್ರೆ ಹೊರಟಿದ್ದಾರೆ. ಪಾದಯಾತ್ರೆಯ ಮೂಲಕ ಮಲೆ ಮಹದೇಶ್ವರ ಬೆಟ್ಟಕ್ಕೆ ತೆರಳುತ್ತಿದ್ದ ಸಂದರ್ಭದಲ್ಲಿ ಹಾಲಹಳ್ಳ ಸಮೀಪ ಲಕ್ಷ್ಮಿ ರವರ ಮೇಲೆ ಕಾಡಾನೆ ಏಕಾಏಕಿ ದಾಳಿ ನಡೆಸಿದ ಪರಿಣಾಮ ಸ್ಥಳದಲ್ಲಿಯೇ ಮೃತಪಟ್ಟಿದ್ದಾರೆ. ನಂತರ ಗಾಬರಿಕೊಂಡ ಕುಟುಂಬಸ್ಥರು ಪೊಲೀಸರಿಗೆ ಮಾಹಿತಿ ನೀಡಿದ ನಂತರ ಮೃತ ಶವವನ್ನು ಮಲೆ ಮಹದೇಶ್ವರ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಮರಣೋತ್ತರ ಪರೀಕ್ಷೆ ನಡೆಸಿ ವಾರಸುದಾರರಿಗೆ ಒಪ್ಪಿಸಲಾಗಿದೆ.

ಈ ಸಂಬಂಧ ಮೃತರ ಸಹೋದರಿ ಪದ್ಮ ಮಲೆ ಮಹದೇಶ್ವರ ಬೆಟ್ಟ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದು ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಮುಂದಿನ ಕ್ರಮ ಕೈಗೊಂಡಿದ್ದಾರೆ.

ಪಿಯುಸಿ ಪರೀಕ್ಷೆ: ಸಂಯುಕ್ತ ಪದವಿ ಪೂರ್ವ ಕಾಲೇಜಿಗೆ ಶೇ.95ರಷ್ಟು ಫಲಿತಾಂಶ



■ ಕಾಯಕಯೋಗಿ ಸುದ್ದಿ

ಹನೂರು: ಪಟ್ಟಣದ ಶ್ರೀವಿವೇಕಾನಂದ ಸಂಯುಕ್ತ ಪದವಿ ಪೂರ್ವ ಕಾಲೇಜಿಗೆ ಶೇ 95.23% ಅತ್ಯುತ್ತಮ ಫಲಿತಾಂಶ ಪಡೆದುಕೊಂಡಿದೆ.

ಮಾರ್ಚ್ 2024ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಶ್ರೀವಿವೇಕಾನಂದ ಸಂಯುಕ್ತ ಪದವಿ ಪೂರ್ವ ಕಾಲೇಜಿಗೆ ಶೇಕಡಾ 95.23%, ಫಲಿತಾಂಶ ದೊರಕಿದೆ. ವಾಣಿಜ್ಯ ವಿಭಾಗದಲ್ಲಿ ಶೇ.100 ಫಲಿತಾಂಶ ದೊರಕಿದ್ದು, 6 ಅತ್ಯುನ್ನತ ಶ್ರೇಣಿ, 9 ಪ್ರಥಮ ಶ್ರೇಣಿ, 3 ದ್ವಿತೀಯ ಶ್ರೇಣಿಯಲ್ಲಿ ವಿದ್ಯಾರ್ಥಿ ಗಳು ತೇರ್ಗಡೆ ಹೊಂದಿ ಕಾಲೇಜಿಗೆ ಕೀರ್ತಿ ತಂದಿರುತ್ತಾರೆ. ನಂದಿನಿ ಎಂ(549), ರಮ್ಯ ಎಸ್ (548), ಶಾಖಿಯಾ (540), ದರ್ಶನ್ ಎಲ್ (535), ರಮ್ಯ ಜಿ (521), ಪವಿತ್ರಾ ಟಿ. (513) ಅಂಕ ಪಡೆದಿರುತ್ತಾರೆ.

ವಿಜ್ಞಾನ ವಿಭಾಗದಲ್ಲಿ ಶೇ.91.66 ದೊರಕಿದ್ದು, 2 ಅತ್ಯುನ್ನತ ಶ್ರೇಣಿ, 19 ಪ್ರಥಮ ಶ್ರೇಣಿ, 1 ವಿದ್ಯಾರ್ಥಿ ದ್ವಿತೀಯ ಶ್ರೇಣಿಯಲ್ಲಿ ವಿದ್ಯಾರ್ಥಿಗಳು ತೇರ್ಗಡೆ ಹೊಂದಿರುತ್ತಾರೆ. ಸಹನ ಏ (519), ಪ್ರಜ್ವಲ್‌ಕುಮಾರ್ ಎಂ (513), ಸಚಿನ್ ರಾಥೋಡ್ (485) ಅಂಕ ಪಡೆದಿರುತ್ತಾರೆ.

ಅತ್ಯುತ್ತಮ ಫಲಿತಾಂಶಕ್ಕಾಗಿ ಶ್ರಮಿಸಿದ ಎಲ್ಲಾ ವಿದ್ಯಾರ್ಥಿಗಳನ್ನು, ಉತ್ತಮ ಉಪನ್ಯಾಸಕರನ್ನು ಸಂಸ್ಥೆಯ ಅಧ್ಯಕ್ಷರಾದ ಉಮಾರಾಜೇಂದ್ರನ್, ಕಾರ್ಯದರ್ಶಿಗಳಾದ ಸುರೇಶ್‌ನಾಯ್ಕ್, ಸಂಚಾಲಕರಾದ ರಾಜೇಂದ್ರನ್, ಖಜಾಂಚಿಯವರಾದ ಶ್ರೀದೇವಿ, ಆಡಳಿತ ಮಂಡಳಿ ಸದಸ್ಯರು, ಪ್ರಾಂಶುಪಾಲರಾದ ಮಧುಸೂಧನ್ ಹಾಗೂ ಬೋಧಕೇತರ ಸಿಬ್ಬಂದಿಗಳು ಅಭಿನಂದಿ ಸಿದ್ದಾರೆ.

ಮದ್ದೂರು ಚೆಕ್‌ಪೋಸ್ಟ್ ಬಳಿ ದಾಖಲೆ ಇಲ್ಲದ 60 ಸಾವಿರ ರೂ. ಹಣ ವಶ

ಚಾಮರಾಜನಗರ:– ಲೋಕಸಭಾ ಸಾರ್ವತ್ರಿಕ ಚುನಾವಣೆ ಸಂಬಂಧ ಗುಂಡ್ಲುಪೇಟೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಮದ್ದೂರು ಚೆಕ್‌ಪೋಸ್ಟ್‌ನಲ್ಲಿ ಇಂದು ದಾಖಲೆ ಇಲ್ಲದೆ ಸಾಗಾಣಿಕೆ ಮಾಡುತ್ತಿದ್ದ 60 ಸಾವಿರ ರೂ.ಗಳನ್ನು ಎಫ್.ಎಸ್.ಟಿ ತಂಡದ ಅಧಿಕಾರಿಗಳು ವಶಕ್ಕೆ ಪಡೆದಿದ್ದಾರೆ.

ಮದ್ದೂರು ಚೆಕ್‌ಪೋಸ್ಟ್‌ನಲ್ಲಿ ಬೆಳಿಗ್ಗೆ 9 ಗಂಟೆ ಸಮಯದಲ್ಲಿ ಕೆಎ–11 ಎ–9007 ಸಂಖ್ಯೆಯ ಈಚರ್ ಗೂಡ್ಸ್ ವಾಹನದಲ್ಲಿ ದಾಖಲೆಗಳಲ್ಲದೇ ಸಾಗಾಣಿಕೆ ಮಾಡುತ್ತಿದ್ದ ಸರೀಪಾಷ ಬಿನ್ ಅಬ್ದುಲ್ ಬಷೀರ್ ಅವರಿಂದ 60 ಸಾವಿರ ರೂ.ಗಳನ್ನು ಎಫ್.ಎಸ್.ಟಿ ತಂಡದ ಅಧಿಕಾರಿ ಗುರುಮಲ್ಲೇಶ್. ಡಿ.ಎಂ ಅವರು ಜಪ್ತಿ ಮಾಡಿದ್ದಾರೆ. ಹಣ ಸಾಗಣೆ ಮಾಡುತ್ತಿದ್ದ ಬಗ್ಗೆ ವಿಚಾರಣೆ ಮಾಡಿದ ವೇಳೆ ಸ್ಪಷ್ಟ ಸಮಂಜಸ ಉತ್ತರ ದೊರೆಯದ ಹಿನ್ನೆಲೆಯಲ್ಲಿ ಹಣವನ್ನು ವಶಕ್ಕೆ ಪಡೆದು ಅಪ ವಿಜಾನೆಯಲ್ಲಿ ಇರಿಸಲಾಗಿದೆ. ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಶಿಲ್ಪಾ ನಾಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಲೋಕಸಭಾ ಚುನಾವಣೆ : ಹಿರಿಯ ನಾಗರಿಕರು, ವಿಶೇಷಚೇತನ ಮತದಾರರಿಗೆ ಮನೆಯಲ್ಲಿಯೇ ಮತದಾನ ಮಾಡಲು ಅವಕಾಶ

■ ಕಾಯಕಯೋಗಿ ಸುದ್ದಿ

ಚಾಮರಾಜನಗರ:– ಲೋಕಸಭಾ ಸಾರ್ವತ್ರಿಕ ಚುನಾವಣೆ–2024ರ ಸಂಬಂಧ ಚಾಮರಾಜನಗರ ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 85 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರು ಮತ್ತು ವಿಶೇಷಚೇತನ ಮತದಾರರಿಗೆ ಏಪ್ರಿಲ್ 13 ರಿಂದ 18ರವರೆಗೆ ಅಂಚೆ ಮತಪತ್ರದ ಮೂಲಕ ಮನೆಯಲ್ಲಿಯೇ ಮತದಾನ ಮಾಡಲು ಅವಕಾಶ ಕಲ್ಪಿಸಲಾಗಿದೆ.

ಭಾರತ ಚುನಾವಣಾ ಆಯೋಗದ ನಿರ್ದೇಶನದನ್ವಯ 85 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರು ಮತ್ತು ವಿಶೇಷಚೇತನ ಮತದಾರರ ಮಾಹಿತಿಯನ್ನು ಸಂಗ್ರಹಿಸಿ ಎಲೆಕ್ಟೋನ್ (Electone) ತಂತ್ರಾಂಶದಲ್ಲಿ ದಾಖಲಿಸಲಾಗಿದ್ದು, ಸದರಿ ಮತದಾರರಿಗೆ ಅಂಚೆ ಮತಪತ್ರದ ಮೂಲಕ ಮತದಾನ ಮಾಡಲು ಏಪ್ರಿಲ್ 13 ರಿಂದ 18ರವರೆಗೆ ಮತದಾನ ದಿನಾಂಕವನ್ನು ಬೆಂಗಳೂರು ಮುಖ್ಯ ಚುನಾವಣಾಧಿಕಾರಿಗಳು ನಿಗದಿಪಡಿಸಿದ್ದಾರೆ.

ಅದರನ್ವಯ 22–ಚಾಮರಾಜನಗರ (ಪ.ಜಾ) ಲೋಕಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಒಟ್ಟು 982 ಮಂದಿ 85 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರು ಹಾಗೂ 445 ಮಂದಿ ವಿಶೇಷಚೇತನ ಮತದಾರರಿಗೆ ಮನೆಯಲ್ಲಿಯೇ ಮತದಾನ ಮಾಡಲು ಅವಕಾಶ ಕಲ್ಪಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳು ಹಾಗೂ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

E-mail:kayakayoginews@gmail.com

ಮಾಧುಸ್ವಾಮಿ ಕಾಂಗ್ರೆಸ್‌ಗೆ ಬಂದ್ರೆ ನಾನೇ ಸ್ವಾಗತ ಮಾಡುತ್ತೇನೆ : ಡಾ.ಜಿ.ಪರಮೇಶ್ವರ್

■ ಕಾಯಕಯೋಗಿ ಸುದ್ದಿ

ತುಮಕೂರು: ರಾಮೇಶ್ವರಂ ಕೆಫೆಯಲ್ಲಿ ಬಾಂಬ್ ಸ್ಫೋಟ ಪ್ರಕರಣಕ್ಕೆ ಸಂಬಂಧಿಸಿದಂತೆ ತನಿಖೆ ನಡೀತಿದೆ.ಎನ್ ಐ ಎ ಟೀಂ ನಿಂದ ತನಿಖೆ ನಡಿತಿದೆ ತನಿಖೆ ಬಗ್ಗೆ ಅನೇಕ ವಿಚಾರ ವನ್ನ ನಮಗೆ ತಿಳಿಸಿಲ್ಲ. ಅಪರಾಧಿಗಳನ್ನ ಪತ್ತೆ ಮಾಡಿದ್ದಾರೆ ಎಂದು ಗೃಹ ಸಚಿವ ಪರಮೇಶ್ವರ್ ತಿಳಿಸಿದ್ದಾರೆ.

ತುಮಕೂರಿನಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಬಿಜೆಪಿ ಕಾರ್ಯ ಕರ್ತನ ವಿಚಾರಣೆ ವಿಚಾರದಲ್ಲಿ ಆರೋಪಿಗೆ ಯಾರೆಲ್ಲ ಸಂಪರ್ಕದಲ್ಲಿದ್ರು ಅವರನ್ನೆಲ್ಲ ವಿಚಾರಣೆ ಮಾಡ್ತಿದ್ದಾರೆ ಎಂದರು.

ಮುದ್ದಹನುಮೇಗೌಡ ಸೋಲು ಗೆಲುವಿನ ಕ್ರೆಡಿಟ್ ಕಾಂಗ್ರೆಸ್ ಗೆ ಸೇರಿದ್ದು. ಐದು ಟ್ರಿಲಿಯನ್ ಎಕಾನಮಿ ಯಾರಿಗೆ ಮಾಡುತ್ತಿ



ದ್ದಾರೆ. 10 ಫ್ಯಾಮಿಲಿಗಳಿಗೆ ಅನುಕೂಲ ಮಾಡಿಕೊಡಲು ಮಾಡುತ್ತಿದ್ದಿರಾ. ಐದು ಟ್ರಿಲಿಯನ್ ಎಕಾನಮಿ ಪಾಲುದಾರಿಕೆ ನಿಮಗೂ ಸಿಗುವಂತಾಗಬೇಕು ಎಂದರು.

ಸಮೃದ್ಧಿಯಾಗಿ ದೇಶ ನಡೆಸುತ್ತೇವೆ. ಮಾಧುಸ್ವಾಮಿ ಕಾಂಗ್ರೆಸ್ ಗೆ ಬಂದ್ರೆ ನಾನೇ ಸ್ವಾಗತ ಮಾಡುತ್ತೇನೆ. ಮುದ್ದಹನುಮೇಗೌಡರು ಭೇಟಿ ಮಾಡಿದ್ದಾರೆ. ಸಂದರ್ಭ ಬಂದಾಗ ಭೇಟಿ ಮಾಡ್ತೀವಿ ಎಂದರು. ಪ್ರತಿ ಚುನಾವಣೆಯಲ್ಲೂ ಸರ್ವೇ ಮಾಡಲಾಗುತ್ತದೆ. ಒಂದು ಹಂತಕ್ಕೆ ಮತದಾನ ಪೂರ್ವ ಸರ್ವೇಗಳನ್ನ ಗೌರವಿಸುತ್ತೇವೆ ಎಂದರು.

ಮಾದರಿ ನೀತಿ ಸಂಹಿತೆ ಕಟ್ಟುನಿಟ್ಟಾಗಿ ಪಾಲಿಸಿ : ಮೀನಾ ಸೂಚನೆ

■ ಕಾಯಕಯೋಗಿ ಸುದ್ದಿ

ಚಾಮರಾಜನಗರ: ಲೋಕಸಭಾ ಸಾರ್ವತ್ರಿಕ ಚುನಾವಣೆಯನ್ನು ಮುಕ್ತ, ನ್ಯಾಯಸಮ್ಮತ ಹಾಗೂ ಪಾರದರ್ಶಕವಾಗಿ ನಡೆಸುವ ನಿಟ್ಟಿನಲ್ಲಿ ಜಾರಿಯಾಗಿರುವ ಮಾದರಿ ನೀತಿ ಸಂಹಿತೆಯನ್ನು ಕಟ್ಟುನಿಟ

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ–5 | 11–04–2024

ಹಾಸನ–ರಾಮನಗರ

ಏ.5 ರಿಂದ ಮೇ 4 ರವರೆಗೆ 1000 ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಆಹ್ವಾನ

■ ಕಾಯಕಯೋಗಿ ಸುದ್ದಿ

ಹಾಸನ: ಕರ್ನಾಟಕ ಸರ್ಕಾರದ ಕಂದಾಯ ಇಲಾಖೆಯಲ್ಲಿ ಖಾಲಿ ಇರುವ ಒಟ್ಟು 1000 ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಅರ್ಜಿ ಆಹ್ವಾನಿಸಿದ್ದು, ಕೆಲವು ತಾಂತ್ರಿಕ ಕಾರಣಗಳಿಂದ ಆನ್‌ಲೈನ್ ಅರ್ಜಿ ಸಲ್ಲಿಸುವ ಪ್ರಕ್ರಿಯೆ ಪ್ರಾರಂಭವಾಗಿರಲಿಲ್ಲ. ಏ.5 ರಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಪರಿಷ್ಕೃತ ವೇಳಾಪಟ್ಟಿ ಬಿಡುಗಡೆ ಮಾಡಿದ್ದು ಏ. 5ರಿಂದ ಮೇ 4 ರವರೆಗೆ ಆನ್‌ಲೈನ್‌ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

ದ್ವಿತೀಯ ಪಿ.ಯೂ.ಸಿ ತೇರ್ಗಡೆಯಾಗಿರುವ ವಿದ್ಯಾರ್ಥಿಗಳು ಹುದ್ದೆಗಳಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ಅಧಿಕೃತ ವೆಬ್‌ಸೈಟ್ ವಿಳಾಸ <https://cetonline.karnataka.gov.in/kea/ "sÉÃn> ನಿಡಬಹುದಾಗಿದೆ. ಹಾಸನದ ಸಾಲಗಾಮೆ ರಸ್ತೆಯಲ್ಲಿರುವ ಕೃಷಿಕ್ ಸರ್ವೋದಯ ಫ್ಲೌಡೇಶನ್(ರಿ)ನಲ್ಲಿ ಗ್ರಾಮ ಆಡಳಿತ ಅಧಿಕಾರಿ ಹಾಗೂ ಪಂಚಾಯತಿ ಅಭಿವೃದ್ಧಿ ಅಧಿಕಾರಿ ನೇಮಕಾತಿ ಪರೀಕ್ಷೆಗಳಿಗೆ ರಿಯಾಯಿತಿ ಶುಲ್ಕದಲ್ಲಿ ನುರಿತ ವಿಷಯ ತಜ್ಞರಿಂದ ತರಬೇತಿ ಪ್ರಾರಂಭಿಸಲಾಗುವುದು.

ಆಸಕ್ತರು ಮೊಬೈಲ್ ಸಂಖ್ಯೆ 8660217739 ಕ್ಕೆ ಕರೆ ಅಥವಾ ವಾಟ್ಸಾಪ್ ಮಾಡಬಹುದಾಗಿದೆ ಎಂದು ಶಾಖೆಯ ಗೌರವ ಕಾರ್ಯದರ್ಶಿಗಳಾದ ಹೆಚ್.ಪಿ.ಮೋಹನ್ ರವರು ತಿಳಿಸಿರುತ್ತಾರೆ.

ಕೇಂದ್ರ ವೀಕ್ಷಕರಿಂದ ಪರಿಶೀಲನೆ

ಹಾಸನ : ಹಾಸನ ಲೋಕಸಭಾ ಕ್ಷೇತ್ರಕ್ಕೆ ಕೇಂದ್ರ ಚುನಾವಣಾ ಆಯೋಗದ ವೀಕ್ಷಕರಾದ ಚಿದ್ರಾನೋಷ್ ಠಾಕೂರ್ ಅವರು ಶನಿವಾರ ವಿವಿಧ ಚೆಕ್ ಪೋಸ್ಟ್ ಗಳಿಗೆ ಭೇಟಿ ನೀಡಿ ಪರಿಶೀಲಿಸಿದರು.

ಜೌಲೇನಹಳ್ಳಿ ಹಾಗೂ ಮದ್ದಾಪುರ ಚೆಕ್ ಪೋಸ್ಟ್ ಗಳಿಗೆ ತೆರಳಿದ ವೀಕ್ಷಕರು, ತಪಾಸಣಾ ಕಾರ್ಯ ವೈಖರಿಯನ್ನು ಪರಿಶೀಲಿಸಿದರು. ಅರಕಲಗೂಡು, ಹೊಳೆನರಸೀಪುರ, ಶ್ರವಣಬೆಳಗೊಳ ಮತ್ತು ಹಾಸನ ವಿಧಾನಸಭಾ ಕ್ಷೇತ್ರಗಳ ಇವಿಎಂ ಸ್ಟಾಂಗ್ ರೂಂ ಗಳಿಗೂ ಭೇಟಿ ನೀಡಿದ ವೀಕ್ಷಕರು, ಸಿದ್ಧತೆಗಳನ್ನು ಪರಿಶೀಲಿಸಿದರು.

ಪಾನ ನಿರೋಧ (ಒಣ)ದಿನವೆಂದು ಘೋಷಣೆ

ಹಾಸನ: ಲೋಕಸಭಾ ಸಾರ್ವತ್ರಿಕ ಚುನಾವಣೆ–2024ರ ಸಂಬಂಧ ಏ.24 ರಂದು ಸಂಜೆ 06 ಗಂಟೆಯಿಂದ ಮತದಾನ ಹಾಗೂ ಜೂ.04 ರಂದು ಮತ ಎಣಿಕೆ ಕಾರ್ಯ ನಡೆಯಲಿರುತ್ತದೆ. ಕೇಂದ್ರ ಚುನಾವಣಾ ಆಯೋಗ ನಿರ್ದೇಶನದಂತೆ ಮತದಾನದ ಸಮಯದಲ್ಲಿ ಹಾಗೂ ಮತ ಎಣಿಕೆ ಸಮಯದಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಮತ್ತು ಕಾನೂನು ಸುವ್ಯವಸ್ಥೆಗೆ ಧಕ್ಕೆಯುಂಟಾಗದಂತೆ ಹಾಗೂ ಮತದಾನ ಕಾರ್ಯ ಹಾಗೂ ಮತ ಎಣಿಕೆ ಕಾರ್ಯವು ಸುಗಮವಾಗಿ ನಡೆಸಲು ಮುನ್ನೆಚ್ಚರಿಕೆ ಕ್ರಮವಾಗಿ ತೆಗೆದುಕೊಳ್ಳಬೇಕಾಗಿರುವುದರಿಂದ ಹಾಸನ ಜಿಲ್ಲೆಯಾದ್ಯಂತ ಎಲ್ಲಾ ಬಗೆಯ ಮದ್ಯ ಮಾರಾಟ ಮತ್ತು ಎಲ್ಲಾ ಬಗೆಯ ಬಾರುಗಳನ್ನು ಮುಚ್ಚುವುದು ಸೇರಿದಂತೆ ಮತದಾನಕ್ಕೆ ಹಾಗೂ ಮತ ಎಣಿಕೆಗೆ ಯಾವುದೇ ಅಡ್ಡಿ ಆಗದಂತೆ ಎಲ್ಲಾ ಬಗೆಯ ಅಮಲು ಪಾನೀಯ ಹಾಗೂ ಮದ್ಯ ಶೇಖರಿಣಿ, ಮದ್ಯ ಮಾರಾಟ, ಮದ್ಯ ತಯಾರಿಕಾ ಘಟಕ ಹಾಗೂ ಸರಬರಾಜು ಮಾಡುವಂತಹ ಎಲ್ಲಾ ಬಗೆಯ ಸ್ಟಾರ್ ಹೋಟೆಲ್‌ಗಳು, ಡಾಬಾಗಳು, ರೆಸ್ಟೋರೆಂಟ್ ಗಳಲ್ಲಿ ಮದ್ಯ ಮಾರಾಟ ಮಾಡುವುದನ್ನು ಹಾಗೂ ಮದ್ಯ ಸಾಗಾಟ ಮತ್ತು ಸರಬರಾಜು ಮಾಡುವುದನ್ನು ನಿಷೇಧಿಸುವುದು ಅಗತ್ಯವಿರುವುದಾಗಿ ಕಂಡು ಬಂದಿರುವುದರಿಂದ ಕರ್ನಾಟಕ ಅಬಕಾರಿ ಸನ್ನದುಗಳು (ಸಾಮಾನ್ಯ ಷರತ್ತುಗಳು) ನಿಯಮ 1967 ರ ನಿಯಮ 10(ಬಿ) ಮತ್ತು ಪ್ರಜಾ ಪ್ರಾತಿನಿಧ್ಯ ಕಾಯ್ದೆ 1951ರ ಕಲಂ135(ಸಿ) ರಡಿ ದತ್ತವಾಗಿರುವ ಅಧಿಕಾರವನ್ನು ಚಲಾಯಿಸಿ "ಹಾಸನ ಜಿಲ್ಲೆಯಾದ್ಯಂತ ಪಾನ ನಿರೋಧ (ಒಣ)ದಿನವೆಂದು ಘೋಷಣೆ ಮಾಡಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಸಿ ಸತ್ಯಭಾಮ ಅವರು ಆದೇಶ ಹೊರಡಿಸಿದ್ದಾರೆ.

Empowered Committee ರಚಿಸಿ ಆದೇಶ

ಹಾಸನ: ಕೇಂದ್ರ ಗೃಹ ಮಂತ್ರಾಲಯದ ನಿರ್ದೇಶನದಂತೆ ಆರ್ಥಿಕ ದುರ್ಬಲ ಬಂದಿಗಳ ದಂಡ ಪಾವತಿಗೆ ಮತ್ತು ಜಾಮೀನು ಮಂಜೂರಾತಿಗೆ ಆರ್ಥಿಕ ನೆರವು ನೀಡಲು ಮತ್ತು ರಾಜ್ಯದ ಜೈಲುಗಳಲ್ಲಿ ಅಧಿಕ ಜನದಟ್ಟಣೆಯ ಸಮಸ್ಯೆಯನ್ನು ಪರಿಹರಿಸಲು Empowered Committee ರಚಿಸಲು ನಿರ್ದೇಶಿಸಿರುತ್ತಾರೆ.

ಅದರಂತೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಸಮಿತಿಯ ಅಧ್ಯಕ್ಷರು, ಪೋಲಿಸ್ ಅಧಿಕ್ಷಕರು ಸಮಿತಿಯ ಸದಸ್ಯರು, ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಸದಸ್ಯ ಕಾರ್ಯದರ್ಶಿಯವರು ಸಮಿತಿಯ ಸದಸ್ಯರು, ಜಿಲ್ಲಾ ಕಾರಾಗೃಹ ಅಧಿಕ್ಷಕರು ಸಮಿತಿಯ ಸದಸ್ಯ ಕಾರ್ಯದರ್ಶಿ, ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸಿ.ಜೆ.ಎಂ ರವರನ್ನು ನಾಮ ನಿರ್ದೇಶಿತ ಸಮಿತಿಯ ಸದಸ್ಯರಾಗ್ನಾಗಿ ನೇಮಿಸಿ ಜಿಲ್ಲಾಧಿಕಾರಿ ಸಿ ಸತ್ಯಭಾಮ ಅವರು ಆದೇಶಿಸಿರುತ್ತಾರೆ.

ವಿಕಲಚೇತನರ ಮತದಾರರು ಮತದಾನ ಮಾಡಲು ವಿವಿಧ ಸೌಲಭ್ಯಗಳು: ಜಿಲ್ಲಾ ಚುನವಣಾಧಿಕಾರಿ

ರಾಮನಗರ: ಲೋಕಸಭಾ ಚುನಾವಣೆ –2024ಕ್ಕೆ ಸಂಬಂಧಿಸಿದಂತೆ ಏಪ್ರಿಲ್ 26 ರಂದು ವಿಕಲಚೇತನರ ಮತದಾರರು ಮತದಾನ ಮಾಡಲು ಅನುವಾಗುವಂತೆ ವಿಲ್ ಚೇರ್, ರ‍್ಯಾಂಪ್ (Wheel Chair, Ramp) ಸೌಲಭ್ಯಗಳನ್ನು ಕಲ್ಪಿಸಲಾಗಿದೆ. ದೃಷ್ಟಿದೋಷವುಳ್ಳ ವಿಕಲಚೇತನರಿಗೆ ಮ್ಯಾಗ್ನಿಫೈಯಿಂಗ್ ಗ್ಲಾಸ್ ಸೌಲಭ್ಯ ಹಾಗೂ ಬ್ರೈಲ್ ಲಿಪಿಯಲ್ಲಿ ಚುನಾವಣೆಯಲ್ಲಿ ಸ್ಪರ್ಧಿಸುತ್ತಿರುವ ಅಭ್ಯರ್ಥಿಗಳ ಮಾಹಿತಿ 7ಎ ಡಮ್ಮಿ ಪೋಸ್ಟಲ್ ಬ್ಯಾಲೆಟ್‌ನ ಸೌಲಭ್ಯವನ್ನು ಪ್ರತಿ ಮತಗಟ್ಟೆಯಲ್ಲಿ ಒದಗಿಸಲಾಗಿದೆ.

ಚುನಾವಣೆ ನೀತಿ ಸಂಹಿತೆ 1961ರ ನಿಯಮ ಎನ್ ರನ್ನಯ ದೃಷ್ಟಿದೋಷವುಳ್ಳ ವಿಕಲಚೇತನರು ಮತದಾನ ಮಾಡಲು ಮತಗಟ್ಟೆಗೆ ಜೊತೆಗಾರರನ್ನು ಕರೆದುಕೊಂಡು ಬರಲು ಅವಕಾಶ ಕಲ್ಪಿಸಲಾಗಿದೆ.ಗ್ರಾಮೀಣ ಪುನರ್ವಸತಿ ಕಾರ್ಯಕರ್ತರಿಂದ ಸಹಾಯವನ್ನು ಪಡೆದು ಮತ ಚಲಾಯಿಸಬಹುದಾಗಿದೆ ಹಾಗೂ ವಿಕಲಚೇತನರ ಮತದಾರರು ಈ ಸೌಲಭ್ಯಗಳನ್ನು ಬಳಸಿಕೊಳ್ಳುವಂತೆ ಮತ್ತು ಯಾರೊಬ್ಬರು ಮತದಾನದಿಂದ ದೂರ ಉಳಿಯದಂತೆ ತಪ್ಪದೇ ಮತದಾನ ಮಾಡುವಂತೆ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಲೋಕಸಭಾ ಸಾರ್ವತ್ರಿಕ ಚುನಾವಣೆ :– ಎರಡನೇ ಹಂತ ರ‍್ಯಾಂಡಮೈಸೇಷನ್

ಹಾಸನ: ಲೋಕಸಭಾ ಸಾರ್ವತ್ರಿಕ ಚುನಾವಣೆ 2024 ರ ಸಂಬಂಧ ಎರಡನೇಯ ಹಂತದ ವಿದ್ಯಮ್ಮಾನ ಮತಯಂತ್ರಗಳನ್ನು 16–ಹಾಸನ ಲೋಕಸಭಾ ಕ್ಷೇತ್ರದ ವ್ಯಾಪ್ತಿಯ ಎಲ್ಲಾ 8 ವಿಧಾನಸಭಾ ಕ್ಷೇತ್ರಗಳ ಬಿ.ಯು., ಸಿ.ಯು., ವಿವಿ ಪ್ಯಾಟ್‌ಗಳ ಯುನಿಟ್ ಐ.ಡಿ. ಗಳನ್ನು ರ‍್ಯಾಂಡಮೈಸೇಷನ್ ಅನ್ನು ಚುನಾವಣಾ ಸಾಮಾನ್ಯ ವೀಕ್ಷಕರಾದ ಚಂದ್ರಮೋಹನ್ ಠಾಕೂರ್ ಮತ್ತು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಸಿ ಸತ್ಯಭಾಮ,ಅಪರ ಜಿಲ್ಲಾಧಿಕಾರಿ ಕೆ ಟಿ ಶಾಂತಲಾ ಹಾಗೂ ಅಭ್ಯರ್ಥಿಗಳ ಸಮಕ್ಷಮದಲ್ಲಿ ಮಾಡಲಾಯಿತು.

ಮಹಿಳೆ ನಾಪತ್ತೆ

ರಾಮನಗರ: ಕನಕಪುರ ಟೌನಿನ ಬಿಜಿಎಸ್ ಬಡಾವಣೆಯ ನಿವಾಸಿ ಹೇಮ (21 ವ?ರ್) ಕಾಣೆಯಾಗಿದ್ದಾರೆ ಎಂದು ದೂರು ದಾಖಲಾಗಿದೆ.

ಚಹರೆಯ ವಿವರ:– ಸಾಧಾರಣ ಮೈಕಟ್ಟು, ಗೋಧಿ ಮೈಬಣ್ಣ, ದುಂಡುಮುಖ, ಬಲಗೈಯಲ್ಲಿ ಅಮ್ಮ ಮತ್ತು ಎನ್ ಎಂಬ ಅಕ್ಷರದ ಹಸಿರು ಬಣ್ಣದ ಹಚ್ಚೆ ಇರುತ್ತದೆ. ಇವರು ಕಾಣೆಯಾಗುವಾಗ ಹಳದಿ ಬಣ್ಣದ ಜೂಡಿದಾರ್ ಧರಿಸಿರುತ್ತಾರೆ. ಇವರು ಕಂಡು ಬಂದರೆ ಆರಕ್ಷಕ ನಿರೀಕ್ಷಕರು, ಕನಕಪುರ ಪುರ ಪೊಲೀಸ್ ಠಾಣೆ, ರಾಮನಗರ ಜಿಲ್ಲೆ ಇವರನ್ನು ಸಂಪರ್ಕಿಸುವಂತೆ ಕೋರಲಾಗಿದೆ.

ಏ.13,14ರಂದು ಮನೆ ಮತದಾನ: ರಾಘವೇಂದ್ರ

■ ಕಾಯಕಯೋಗಿ ಸುದ್ದಿ

ಕನಕಪುರ:ಏಪ್ರಿಲ್ 13/14 ರಂದು ತಾಲ್ಲೂಕಿನಾದ್ಯಂತ ಮನೆ ಮತದಾನ ನಡೆಸಲಾಗುವುದು ಸಹಾಯಕ ಚುನಾವಣಾ ಅಧಿಕಾರಿ ರಾಘವೇಂದ್ರ ಡಿ ತಿಳಿಸಿದರು.

ತಾಲ್ಲೂಕು ಕಛೇರಿ ಸಭಾಂಗಣದಲ್ಲಿ ಈ ಬಗ್ಗೆ ಸುದ್ದಿ ಗೋಷ್ಠಿ ನಡೆಸಿ ಮಾತನಾಡಿದ ಅವರು ಬೆಂಗಳೂರು ಗ್ರಾಮಾಂತರ ಲೋಕ ಸಭಾ ಚುನಾವಣಾ ಹಿನ್ನೆಲೆಯಲ್ಲಿ ತಾಲ್ಲೂಕಿ ನಲ್ಲಿರುವ ಹಿರಿಯ ಹಾಗೂ ಅಂಗವಿಕಲರ ಅನುಕೂಲಕ್ಕಾಗಿ ಕೇಂದ್ರ ಚುನಾವಣಾ ಆಯೋಗ ಅವರ ಮನೆಯಲ್ಲೇ ಮತದಾನ ಮಾಡುವ ಅವಕಾಶ ಕಲ್ಪಿಸಿದ್ದು, ತಾಲ್ಲೂಕಿನ ಸುಮಾರು 5500 ಅರ್ಹ ಮತದಾರರಲ್ಲಿ 352 ಜನ ಮತದಾರರು ತಮ್ಮ ಮನೆಯಲ್ಲೇ ಮತದಾನ ಮಾಡಲು ಹೆಸರನ್ನು



ನೊಂದಾಯಿಸಿ ಕೊಂಡಿದ್ದು ಈ ನಿಟ್ಟಿನಲ್ಲಿ ತಾಲ್ಲೂಕಿನಲ್ಲಿ ಏಪ್ರಿಲ್ 13/14 ರಂದು ಅಂಚೆ ಮತದಾನ ಪ್ರಕ್ರಿಯೆ ನಡೆಸಲಾಗುವುದು ಎಂದು ಮಾಹಿತಿ ನೀಡಿದರು.

ಈ ಪ್ರಕ್ರಿಯೆಗೆ ಈಗಾಗಲೇ ಸಿಬ್ಬಂದಿಗಳಿಗೆ ತರಬೇತಿಯನ್ನು ನೀಡಲಾಗಿದ್ದು ಹತ್ತು ತಂಡಗಳು ಸತತ ಎರಡು ದಿನಗಳ ಕಾಲ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಕಾರ್ಯ ನಿರ್ವಹಿಸಲಿದ್ದು ಒಂದು ತಂಡದಲ್ಲಿ ಒಬ್ಬ ಪಿ ಆರ್ ಒ, ಬಿ ಎಲ್ ಒ, ಪೋಲೀಸ್ ಸಿಬ್ಬಂದಿ ಸೇರಿ ಐದು ಜನರಿದ್ದು ಬ್ಯಾಲೆಟ್ ಪೇಪರ್ ಮೂಲಕ ಮತದಾನ ಪ್ರಕ್ರಿಯೆಯನ್ನು ಅಧಿಕಾರಿಗಳು ನಡೆಸಲಿದ್ದಾರೆ. ಈ ಬಗ್ಗೆ ಎಲ್ಲಾ ರಾಜಕೀಯ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರಿಗೂ ಮಾಹಿತಿ ನೀಡಲಾಗಿದ್ದು ಯಾವುದೇ ಗೊಂದಲ, ಸಂಶಯಕ್ಕೆ ಎಡ ಮಾಡಿಕೊಡದೇ ಅತ್ಯಂತ ಪಾರದರ್ಶಕವಾಗಿ ಈ ಚುನಾವಣಾ ಪ್ರಕ್ರಿಯೆಯನ್ನು ನಡೆಸಲು ತಮ್ಮ ತಮ್ಮ ಗ್ರಾಮ ವ್ಯಾಪ್ತಿಯಲ್ಲಿ ಇದರ ಬಗ್ಗೆ ಜನತೆಗೆ ಜಾಗೃತಿಯನ್ನು ಮೂಡಿಸುವಂತೆ ಮನವಿ ಮಾಡಿ ರುವುದಾಗಿ ತಿಳಿಸಿದರು.

ತಹಶೀಲ್ದಾರ್ ಸ್ಮಿತಾ ರಾಮು ಹಾಗೂ ಸಿಬ್ಬಂದಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಜಿಲ್ಲೆಯಲ್ಲಿ ಉಪಯೋಗಿಸದ ಕೊಳವೆಬಾವಿ ಮುಚ್ಚಲು ಸೂಚನೆ

■ ಕಾಯಕಯೋಗಿ ಸುದ್ದಿ

ಹಾಸನ: ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ ತೆರೆದ ಕೊಳವೆ ಬಾವಿಗಳಲ್ಲಿ ಸಂಭವಿಸಬಹುದಾದ ದುರಂತಗಳನ್ನು ತಪ್ಪಿಸುವ ಹಿನ್ನೆಲೆಯಲ್ಲಿ ಸರ್ಕಾರದ ವಿವಿಧ ಇಲಾಖೆಗಳಿಂದ ಅರೆ ಸರ್ಕಾರಿ–ಇನ್ನಿತರ ಸಂಸ್ಥೆಗಳಿಂದ ಅಥವಾ ಖಾಸಗಿಯವರಿಂದ ಕೊರೆಯಲಾದ ಕೊಳವೆ ಬಾವಿಗಳನ್ನು ಮುಂಜಾಗ್ರತೆ ಕ್ರಮ ಕೈಗೊಂಡು ಈಗಾಗಲೇ ತೆರದ ಮತ್ತು ತ್ಯಕ್ತ ಕೊಳವೆ ಬಾವಿಗಳನ್ನು ಮುಚ್ಚಲಾಗಿದ್ದು, ಈ ಜಿಲ್ಲೆಯ ವ್ಯಾಪ್ತಿಯಲ್ಲಿ ಯಾವುದೇ ತೆರದ/ವಿಫಲ ಕೊಳವೆ ಬಾವಿಗಳು ಇರದಂತೆ ಸರ್ವೋಚ್ಚ ನ್ಯಾಯಾಲಯದ ಆದೇಶ ಪಾಲಿಸಲಾಗುತ್ತದೆ.

ದಿನಾಂಕ:03.04.2024ರಂದು ವಿಜಯಪುರ ಜಿಲ್ಲೆಯಲ್ಲಿ 2 ವರ್ಷದ ಮಗು ಕೊಳವೆಬಾವಿಗೆ ಬಿದ್ದ ಪ್ರಕರಣದ ಕುರಿತಂತೆ ಮುಂಜಾಗ್ರತ ಕ್ರಮವಹಿಸಲು ಸರ್ಕಾರದ ವಿವಿಧ ಇಲಾಖೆಗಳು ಅರೆ ಸರ್ಕಾರಿ–ಇನ್ನಿತರ ಸಂಸ್ಥೆಗಳಿಂದ ಮತ್ತು ರೈತರು ತಮ್ಮ ಕೃಷಿ ಜಮೀನುಗಳಲ್ಲಿ ಕೊರೆಸಿರುವ ಕೊಳವೆ ಬಾವಿಗಳು ವಿಫಲವಾಗಿದ್ದಲ್ಲಿ ಅಂತಹ ಬಾವಿಗಳನ್ನು ಗುರುತಿಸಿ ಅವುಗಳಿಗೆ ಸೂಕ್ತವಾದ ಕಬ್ಬಿಣದ ಕ್ಯಾಪ್ ಹಾಕಿ, ಅದರ ಮೇಲೆ 2 ಅಡಿಗಳಷ್ಟು ಮಣ್ಣು ಹಾಕಿ ಅದರ ಮೇಲೆ ಮುಳ್ಳು ಹಾಕಿ ಮುಚ್ಚಬೇಕು.

ಕೊಳವೆ ಬಾವಿಗಳನ್ನು ಸೂಕ್ತ ರೀತಿಯಲ್ಲಿ ಮುಚ್ಚದಿದ್ದಲ್ಲಿ ಸಂಬಂದಪಟ್ಟ ಜಮೀನು ಮಾಲೀಕರು ಹಾಗೂ ರಿಗ್ ಮಾಲೀಕರು ಕಾನೂನು ಕ್ರಮ ಎದುರಿಸಬೇಕಾಗುತ್ತದೆ. ಕೊಳವೆಬಾವಿ ಕೊರೆಯುವ ರಿಗ್ ಯಂತ್ರಗಳನ್ನು ಅದರ ಮಾಲೀಕರು ಕರ್ನಾಟಕ ಅಂತರ್ಜಲ ಪ್ರಾಧಿಕಾರದಿಂದಿರಿಯಲ್ಲಿ ನೊಂದಾಯಿಸಿಕೊಳ್ಳುವುದು ಕಡ್ಡಾಯವಾಗಿರುತ್ತದೆ. ವಿಫಲವಾದ ಕೊಳವೆಬಾವಿಗಳನ್ನು ಮುಚ್ಚಿಸದೇ ಇರುವಂತಹ ಪ್ರಕರಣಗಳಿಗೆ ನಾದರೂ ಜಿಲ್ಲೆಯಲ್ಲಿ ಸಂಭವಿಸಿದರೆ ಸಂಬಂಧಿಸಿದ ಭೂ ಮಾಲೀಕರು ಹಾಗೂ ಬೋರ್‌ವೆಲ್ ಕೊರೆದಿರುವ ಏಜೆನ್ಸಿಯವರ ವಿರುದ್ಧ ವಿಫತ್ತು ನಿರ್ವಹಣೆ ಕಾಯ್ದೆ–2005 ರಂತೆ ಕಾನೂನು ಕ್ರಮ ಕೈಗೊಳ್ಳಲಾಗುವುದು.

ಈ ಬಗ್ಗೆ ಎಲ್ಲಾ ಗ್ರಾಮ ಪಂಚಾಯತಿ ವ್ಯಾಪ್ತಿಗಳಲ್ಲಿ ಗ್ರಾಮವಾರು ಪರಿಶೀಲಿಸಿ ಹತ್ತೊಮ್ಮೆ ತೆರದ/ವಿಫಲ ಕೊಳವೆ ಬಾವಿಗಳನ್ನು ಮುಚ್ಚಲು ಕ್ರಮ ಕೈಗೊಳ್ಳಲಾ ಗಿದ್ದು, ಸ್ಥಳೀಯ ಸಂಘ ಸಂಸ್ಥೆಗಳು ಎನ್.ಜಿ.ಒ/ಇತರೆ ಖಾಸಗಿ ವ್ಯಕ್ತಿಗಳು ಸಹ ವಿಫಲ ಕೊಳವೆ ಬಾವಿಯನ್ನು ಮುಚ್ಚಲು ಸಹಕರಿಸುವುದು. ಯಾವುದೇ ಅನಾಹುತ ಸಂಭವಿಸುವ ಮುನ್ನ ತಮ್ಮ ಗ್ರಾಮಗಳ ವ್ಯಾಪ್ತಿಯಲ್ಲಿ ತೆರದ/ನಿರುಪಯುಕ್ತ ಕೊಳವೆ ಬಾವಿಗಳು ಕಂಡುಬಂದಲ್ಲಿ ಸಾರ್ವಜನಿಕರು ಜಿಲ್ಲಾಧಿಕಾರಿಗಳ ಕಾರ್ಯಾಲಯದ ಸಹಾಯವಾಣಿ ಸಂಖ್ಯೆ: 08172–261111 ಸಹಾಯವಾಣಿಗೆ ಕರೆ ಮಾಡಿ ತಿಳಿಸಲು ಜಿಲ್ಲಾ ಅಂತರ್ಜಲ ಪ್ರಾದಿಕಾರ ಸಮಿತಿಯ ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿ ಸಿ ಸತ್ಯಭಾಮ ಅವರು ತಿಳಿಸಿದ್ದಾರೆ.

ಪರೀಕ್ಷೆಗೆ ಹಾಜರಾಗಲು ಕೊನೆಯ ಅವಕಾಶ

ಹಾಸನ: ಸರ್ಕಾರಿ ಶ್ರೀಮತಿ ಎಲ್.ವಿ ಪಾಲಿಟೆಕ್ನಿಕ್ ನಲ್ಲಿ ಸಿ–03 ಮತ್ತು ಸಿ–09 ಪಠ್ಯಕ್ರಮಗಳಲ್ಲಿ ಪ್ರವೇಶ ಪಡೆದಿರುವ ಹಾಗೂ ಸಿ–15 ಪಠ್ಯಕ್ರಮದಲ್ಲಿ(2017–18 ನೇ ಶೈಕ್ಷಣಿಕ ಪ್ರವೇಶ ಪಡೆದಿರುವ ವಿದ್ಯಾರ್ಥಿಗಳಿಗೆ ಮೇ–2024ರ ಪರೀಕ್ಷೆಗೆ ಹಾಜರಾಗಲು ಕೊನೆಯ ಅವಕಾಶ ನೀಡಿ ವಿಸ್ತರಿಸಲಾಗಿದೆ ಎಂದು ಸರ್ಕಾರಿ ಶ್ರೀಮತಿ ಎಲ್.ವಿ ಪಾಲಿಟೆಕ್ನಿಕ್ ಪ್ರಾಂಶುಪಾಲರು ತಿಳಿಸಿದ್ದಾರೆ.

ಕೇಂದ್ರ ವೆಚ್ಚ ವೀಕ್ಷಕರಿಂದ ಪರಿಶೀಲನೆ

ಹಾಸನ: ಹಾಸನ ಲೋಕಸಭಾ ಕ್ಷೇತ್ರಕ್ಕೆ ಕೇಂದ್ರ ಚುನಾವಣಾ ವೆಚ್ಚ ವೀಕ್ಷಕರಾದ ವೈಭವ್ ಅಗರವಾಲ್ ಅವರು ಬುಧವಾರ ಸಕಲೇಶಪುರ ತಾಲ್ಲೂಕಿನ ಹುರಡಿ ಚೆಕ್ ಪೋಸ್ಟ್‌ಗೆ ಭೇಟಿ ನೀಡಿ ಪರಿಶೀಲಿಸಿದರು.

ಭಾರತೀ ಸಂಯುಕ್ತ ಪದವಿ ಪೂರ್ವ ಕಾಲೇಜ್ (ಎಕ್ಸಲೆನ್ಸ್)ಗೆ ಉತ್ತಮ ಫಲಿತಾಂಶ

■ ಕಾಯಕಯೋಗಿ ಸುದ್ದಿ

ಭಾರತೀನಗರ: ಭಾರತೀನಗರದ ಭಾರತೀ ಸಂಯುಕ್ತ ಪದವಿ ಪೂರ್ವ ಕಾಲೇಜಿಗೆ (ಎಕ್ಸಲೆನ್ಸ್) ಶೇ.95 ಫಲಿತಾಂಶ ಬಂದು ಅತ್ಯುನ್ನತ ಶ್ರೇಣಿಯಲ್ಲಿ ತೇರ್ಗಡೆಗೊಂಡಿದ್ದಾರೆ.

ಭಾರತೀನಗರದ ಭಾರತೀ ಸಂಯುಕ್ತ ಪದವಿ ಪೂರ್ವ ಕಾಲೇಜಿನ (ಎಕ್ಸಲೆನ್ಸ್) ಶೇ.95 ಫಲಿತಾಂಶ ಬಂದು ಅತ್ಯುನ್ನತ ಶ್ರೇಣಿಯಲ್ಲಿ 35 ವಿದ್ಯಾರ್ಥಿಗಳು, 50 ವಿದ್ಯಾರ್ಥಿಗಳು ಪ್ರಥಮ ದರ್ಜೆಯಲ್ಲಿ, ಹಾಗೂ 07 ವಿದ್ಯಾರ್ಥಿಗಳು ದ್ವಿತೀಯ ದರ್ಜೆಯಲ್ಲಿ ತೇರ್ಗಡೆ ಹೊಂದಿರುವ ಎಲ್ಲಾ ವಿದ್ಯಾರ್ಥಿಗಳನ್ನು ಸಂಸ್ಥೆಯ ಅಧ್ಯಕ್ಷ ಮಧು. ಜಿ. ಮಾದೇಗೌಡ, ಕಾರ್ಯದರ್ಶಿ ಜಿ.ಎಂ.ನಂಜೇಗೌಡ, ಸಿಇಒ ಆಲಯ್ ಮಧು, ಪ್ರಾಂಶುಪಾಲರಾದ ಮಲ್ಲಿಕಾರ್ಜುನ್ ಹಾಗೂ ಎಲ್ಲಾ ಟ್ರಸ್ಟಿಗಳು ಅಭಿನಂದಿಸಿದ್ದಾರೆ.

ವಾಣಿಜ್ಯ ವಿಭಾಗದಲ್ಲಿ ಶೇ 90 ಫಲಿತಾಂಶ.

ಎಚ್.ಡಿ.ಸ್ಪಂದನ ಶೇ (97.83) ಪ್ರಥಮ ಸ್ಥಾನ ಪಡೆದು ಗಣಿತ ವಿಷಯದಲ್ಲಿ 100 ಅಂಕಗಳಿಸಿದರೆ, ಕೆ.ಎಂ.ಗನ

website: www.kayakayogi.com

ಕಾಯಕ ಯೋಗಿ

KAYAKA YOGI - Regional Daily

ಪುಟ-6 | 11-04-2024

ಬೆಂಗಳೂರು

ಕರ್ನಾಟಕ-ಆಂಧ್ರ ಗಡಿಯಲ್ಲಿ ಅಪಾರ ಪ್ರಮಾಣದ ಸ್ಫೋಟಕ ಪತ್ತೆ..!

ಬೆಂಗಳೂರಿನ ರಾಮೇಶ್ವರಂ ಕೆಫೆ ಸ್ಫೋಟ ಪ್ರಕರಣದ ತನಿಖೆ ಚುರುಕುಗೊಳ್ಳುತ್ತಿರುವಂತೆಯೇ ಇತ್ತ ಕರ್ನಾಟಕ-ಆಂಧ್ರ ಗಡಿಯಲ್ಲಿ ಅಧಿಕಾರಿಗಳು ಕಾರಿನಲ್ಲಿ ಸಾಗುಸುತ್ತಿದ್ದ ಅಪಾರ ಪ್ರಮಾಣದ ಸ್ಫೋಟಕಗಳನ್ನು ಪತ್ತೆ ಮಾಡಿ ವಶಕ್ಕೆ ಪಡೆಯಲಾಗಿದೆ.

ಕೋಲಾರ ಜಿಲ್ಲೆಯ ಮುಳಬಾಗಿಲು ತಾಲೂಕಿನ ಕರ್ನಾಟಕ-ಆಂಧ್ರ ಗಡಿಯ ನಂಗಲಿ ಚೆಕ್ ಪೋಸ್ಟ್ ನಲ್ಲಿ ಅಪಾರ ಪ್ರಮಾಣದ ಸ್ಫೋಟಕಗಳನ್ನು ಪೊಲೀಸರು ವಶಕ್ಕೆ ಪಡೆದಿದ್ದು, ಘಟನೆಯಲ್ಲಿ ಓರ್ವ ಆರೋಪಿಯನ್ನು ಬಂಧಿಸಲಾಗಿದ್ದು, ಮತ್ತೊಬ್ಬ ತಲೆಮರೆಸಿಕೊಂಡಿದ್ದಾನೆ ಎಂದು ಹೇಳಲಾಗಿದೆ. ಆರೋಪಿಯಿಂದ 1200 ಜೆಲಿಟಿನ್ ಕಡ್ಡಿಗಳು, 7 ಬಾಕ್ಸ್ ವೈರ್, 6 ಡಿಟೋನೇಟರ್ ವಶಪಡಿಸಿಕೊಳ್ಳಲಾಗಿದೆ.

ಕೋಲಾರ ಜಿಲ್ಲೆಯ ಮುಳಬಾಗಲು ತಾಲೂಕಿನ ನಂಗಲಿ ಚೆಕ್ ಪೋಸ್ಟ್ ಬಳಿ ಸ್ಫೋಟಕ ಸಾಗಿಸುತ್ತಿದ್ದ ದುಷ್ಕರ್ಮಿಯನ್ನು ಬಂಧಿಸಲಾಗಿದೆ. ಖಾಸಗಿ ಕಾರಿನಲ್ಲಿ ಸ್ಫೋಟಕಗಳನ್ನು ಸಾಗಿಸಲಾಗುತ್ತಿತ್ತು. ಆರೋಪಿಗಳಲ್ಲಿ ಒಬ್ಬನನ್ನು ಬಂಧಿಸಲಾಗಿದ್ದು, ಬಂಧಿತನನ್ನು ಆಸಿಫ್ ಹಜರತ್ ಅಲಿ ಎಂದು ಗುರುತಿಸಲಾಗಿದೆ. ಕಾರಿನಲ್ಲಿದ್ದ ಮತ್ತೊಬ್ಬ ಆರೋಪಿ ಪರಾರಿಯಾಗಿದ್ದಾನೆ ಎಂದು ಮೂಲಗಳು ತಿಳಿಸಿವೆ.



ಮೌಲ್ಯಮಾಪನ ಕೇಂದ್ರಗಳ ಸುತ್ತಲೂ ನಿಷೇಧಾಜ್ಞೆ ಜಾರಿ

ಮೈಸೂರು: ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿಯ ನಿರ್ದೇಶನದಂತೆ ಏ.12 ರಿಂದ 25 ರವರೆಗೆ ಎಸ್.ಎಸ್.ಎಲ್.ಸಿ. ಪರೀಕ್ಷೆಯ ಮೌಲ್ಯ ಮಾಪನ ಕಾರ್ಯ ನಡೆಯಲಿದ್ದು, ಮೌಲ್ಯಮಾಪನ ಕಾರ್ಯ ಮುಗಿಯುವವರೆಗೂ 06 ಮೌಲ್ಯಮಾಪನ ಕೇಂದ್ರಗಳ 200 ಮೀಟರ್ ವ್ಯಾಪ್ತಿ ಪ್ರದೇಶದ ಸುತ್ತಲೂ ಬೆಳಿಗ್ಗೆ 6 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ನಿಷೇಧಾಜ್ಞೆಯನ್ನು ಘೋಷಿಸಲಾಗಿದೆ.

ಲಕ್ಷ್ಮಿಪುರಂನ ಗೋಪಾಲಸ್ವಾಮಿ ಶಿಶುವಿಹಾರ ಹಿರಿಯ ಪ್ರಾಥಮಿಕ ಶಾಲೆ ಮತ್ತು ಪ್ರೌಢಶಾಲೆ, ಕುವೆಂಪುನಗರದ ಕಾವೇರಿ ಪದವಿಪೂರ್ವ ಕಾಲೇಜು, ಜ್ಞಾನಗಂಗಾ ಪ್ರೌಢಶಾಲೆ, ಲಷ್ಕರ್ ಮೊಹಲ್ಲಾದ ಗುಡ್‌ಶೆಫರ್ಡ್ ಕಾನ್ವೆಂಟ್ ಪ್ರೌಢಶಾಲೆ, ಎನ್.ಆರ್.ಮೊಹಲ್ಲಾದ ಸೇಂಟ್ ಫಿಲೋಮಿನಾ ಪ್ರೌಢಶಾಲೆ, ಪಿ.ಪಿ.ಮೊಹಲ್ಲಾದ ನಿರ್ಮಲ ಪ್ರೌಢಶಾಲೆಗಳಲ್ಲಿ ಮೌಲ್ಯಮಾಪನಕ್ಕೆ ಸಂಬಂಧಪಟ್ಟ ಅಧಿಕಾರಿ ವರ್ತು ಸಿಬ್ಬಂದಿಗಳನ್ನು ಹೊರತುಪಡಿಸಿ ಅನಧೀಕೃತ ವ್ಯಕ್ತಿಗಳು ಸಂಚರಿಸಬಾರದು ಮತ್ತು ಯಾರೂ ಆಕ್ಷೇಪಾರ್ಹ ವಸ್ತುಗಳನ್ನು ಒಯ್ಯಬಾರದು ಎಂದು ನಗರ ಪೊಲೀಸ್ ಆಯುಕ್ತರಾದ ರಮೇಶ್.ಬಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿಜೃಂಭಣೆಯ ಶ್ರೀ ಚಿಕ್ಕದೇವಮ್ಮನವರ ಯುಗಾದಿ ಜಾತ್ರಾ ಮಹೋತ್ಸವ

■ ಕಾಯಕಯೋಗಿ ಸುದ್ದಿ

ಸರಗೂರು: ತಾಲೂಕಿನ ಅಧಿದೇವತೆ ಪ್ರಸಿದ್ಧ ಯಾತ್ರಾ ಸ್ಥಳ ಶ್ರೀಚಿಕ್ಕ ದೇವಮ್ಮನವರ ಬೆಟ್ಟದಲ್ಲಿ ಯುಗಾದಿಯ ವಿಶೇಷ ಪೂಜಾ ಕೈಂಕರ್ಯಗಳನ್ನು ಸಹಸ್ರಾರು ಭಕ್ತರ ಸಮ್ಮುಖದಲ್ಲಿ ಮುಜರಾಯಿ ಇಲಾಖೆಯ ಪುರೋಹಿತರು ನೆರವೇರಿಸಿದರು.

ಮುಂಜಾನೆಯಿಂದಲೇ ವಿಶೇಷ ಪೂಜೆ: ಪ್ರತಿ ವರ್ಷವೂ ಸಹ ಚಂದ್ರಮಾನ ಯುಗಾದಿ ದಿನದಂದು ಮುಂಜಾನೆ 4 ಗಂಟೆಯಿಂದಲೇ ವಿಶೇಷ ಪೂಜಾ ಕೈಂಕರ್ಯಗಳನ್ನು ಪ್ರಾರಂಭಿಸಲಾಯಿತು.

ತಾಲೂಕಿನ ವಿಜಾನೆಯಲ್ಲಿರುವ ಅಮ್ಮನವರ ಮೂರ್ತಿಯನ್ನು ಹೆಚ್.ಡಿ.ಕೋಟೆ ಮತ್ತು ಸರಗೂರು ತಾಲೂಕಿನ ಕಂದಾಯ ಅಧಿಕಾರಿಗಳು ಪೊಲೀಸರ ಸಮ್ಮುಖದಲ್ಲಿ ಜಾತ್ರಾ ಕಮಿಟಿಯವರಿಗೆ ಹಾಗೂ ಗ್ರಾಮಸ್ಥರಿಗೆ ಆಸ್ತಾಂತರಿಸಿದರು. ಕಂದಾಯ ಅಧಿಕಾರಿಗಳು ಸ್ಥಳದಲ್ಲೇ ಮೊಕ್ಕಾಂ ಹೂಡಿದ್ದರು.

ಸರಗೂರು, ಹೆಚ್.ಡಿ.ಕೋಟೆ ಯಿಂದ ಕೆ.ಎಸ್.ಆರ್.ಟಿ.ಸಿಯಿಂದ ಬಸ್ ವ್ಯವಸ್ಥೆ ಮಾಡಲಾಗಿತ್ತು. ನೋಂದಾಯಿತ ಖಾಸಗೀ ವಾಹನಗಳು ಬೆಟ್ಟದ ಮೇಲ್ಭಾಗಕ್ಕೆ ಭಕ್ತರನ್ನು ಕರೆತರುತ್ತಿದ್ದರು.

ಅಪಾರ ಸಂಖ್ಯೆಯ ಭಕ್ತರು ಭಾಗಿ: ಬೆಂಗಳೂರು, ಮೈಸೂರು, ಚಾಮರಾಜನಗರ ರಾಜ್ಯ ಸೇರಿದಂತೆ ಹೊರ ರಾಜ್ಯಗಳ ಅಪಾರ ಸಂಖ್ಯೆಯ ಭಕ್ತರು ಭಾಗವಹಿಸಿದ್ದರು. ಪ್ರತೀ ವರ್ಷದಂತೆ ಭಕ್ತರು ಕಾಲ್ನಡಿಗೆಯಲ್ಲಿ ಸಾಗಿ, ಕಪಿಲಾ ನದಿಯಲ್ಲಿ ಪುಣ್ಯ ಸ್ನಾನ ಮಾಡಿ ಬೆಟ್ಟ ಹತ್ತಿ ದೇವರ ದರ್ಶನ ಪಡೆದು ಪುನೀತರಾದರು. ಹರಕೆ ಹೊತ್ತ ಮಹಿಳೆಯರು ಮತ್ತು ಮಕ್ಕಳು ಬಾಯಿಬೀಗ ಸೇವೆಯಲ್ಲಿ ಪಾಲ್ಗೊಂಡು ಭಕ್ತಿ ಪರಾಕಷ್ಠೆ ಮೆರೆದರು.

ಬೆ.9 ಗಂಟೆಯ ಸಮಯದಲ್ಲಿ ಅಲಂಕೃತ ಅಮ್ಮನವರನ್ನು ಇತ್ಯಾ. ಪುರದಕಟ್ಟೆ, ಕಾಂದೂರು, ಚಾಮೇ ಗೌಡರಹುಂಡಿ ಗ್ರಾಮಸ್ಥರು ಸೇರಿದಂತೆ ಅಪಾರ ಸಂಖ್ಯೆಯ ಭಕ್ತರು ಮಂಗಳವಾದ್ಯ, ಮಂತ್ರ ಘೋಷಣೆಗಳು, ಜೈಕಾರಗಳೊಂದಿಗೆ ಬೆಟ್ಟದಿಂದ ಕೆಳಗಿಳಿಸಿ, ಹಾಲುಗಡು ಏನ ಕಪಿಲಾ ನದಿಯ ಜಪದ ಕಟ್ಟೆಯಲ್ಲಿ ಕುಳ್ಳಿರಿಸಿ, ವಿಶೇಷ ಪೂಜಾದಿಗಳನ್ನು ನೆರವೇರಿಸಿದರು.

ಅಕ್ಕ-ಪಕ್ಕದ ಗ್ರಾಮದ ಯಜಮಾನರುಗಳು, ಗ್ರಾಮಸ್ಥರು, ಕಂದಾಯ ಇಲಾಖೆ ಅಧಿಕಾರಿಗಳು, ಮುಖಂಡರು ಸೇರಿದಂತೆ ಅಪಾರ ಸಂಖ್ಯೆಯ ಭಕ್ತರು ನೆರದಿದ್ದರು.

*ಬಿಗಿ ಭದ್ರತೆ: ಸರಗೂರು ವೃತ್ತ ನಿರೀಕ್ಷಕ ಲಕ್ಷೀಕಾಂತ್, ಹೆಚ್.ಡಿ. ಕೋಟೆ ನಿರೀಕ್ಷಕ ಸಬ್ಬೀರ್ ಹುಸೇನ್, ಸರಗೂರು ಸಬ್ ಇನ್ಸ್‌ಪೆಕ್ಟರ್ ಎಂ.ಸಿ.ಮಧು, ಅಂತರಸಂತೆ ಸಬ್ ಇನ್ಸ್‌ಪೆಕ್ಟರ್ ಹನುಮಂತಪ್ಪ ಉಪ್ಪಾರ್, ಸಿಬ್ಬಂದಿಗಳಿದ ಸೋಮನಾಯಕ, ಕೃಷ್ಣಯ್ಯ, ಪ್ರವೋದ, ರಾಜು, ಶಿವಕುಮಾರ್, ಇಮ್ರಾನ್, ದರ್ಶನ್, ನಾಗೇಗೌಡ ಸೇರಿದಂತೆ ಹುಣಸೂರು ಉಪ ವಿಭಾಗದ ಸಿಬ್ಬಂದಿಗಳು ಭದ್ರತೆ ವಹಿಸಿದ್ದರು.





ಇಂದು ಸ.6 ಗಂಟೆಗೆ ಶ್ರೀಚಿಕ್ಕದೇವಮ್ಮನವರನ್ನು ಹಾಲುಗಡುವಿನಿಂದ ಇತ್ಯಾ ಗ್ರಾಮಕ್ಕೆ ಮಂಗಳ ವಾದ್ಯಗಳ ಸಮೇತ ತಂದು, ಮಠದ ಹೊಲದ ಮಂಟಪದಲ್ಲಿ ಪೂಜೆ ಸಲಾಗುವುದು. ಇಂದು ರಾತ್ರಿ ಅಲಂಕೃತ ಚಿಕ್ಕದೇವಮ್ಮನವರನ್ನು ಕುದುರೆಯ ಪಲ್ಲಕ್ಕಿಯಲ್ಲಿ ಸತ್ತಿಗೆ, ಸೂರಿಪಾನಿ, ಕೋಲಾಟ, ಕೇರಳದ ಚೆಂಡೆಮದ್ದಳವಾದ್ಯ ಕಲಾ ತಂಡಗಳು ಸೇರಿದಂತೆ ವಿವಿಧ ಮಂಗಳವಾದ್ಯಗಳನ್ನೊಳಗೊಂಡು, ಬಾಣ, ಬಿರುಸುಗಳೊಂದಿಗೆ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮಾಡಿ, ಅಮ್ಮನವರಿಗೆ ದೇವಸ್ಥಾನದಲ್ಲಿ ವಿಶೇಷ ಪೂಜೆ ನೆರವೇರಿಸುವರು.

ಪಿಡಿಓ, ಗ್ರಾಮ ಆಡಳಿತ ಅಧಿಕಾರಿ ನೇಮಕಾತಿ: ತರಬೇತಿ

ಹಾಸನ: ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಖಾಲಿ ಇರುವ 247 ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳಿಗೆ ಕರ್ನಾಟಕ ಲೋಕಸೇವಾ ಆಯೋಗದಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಪದವೀಧರ ವಿದ್ಯಾರ್ಥಿಗಳು ಈ ಹುದ್ದೆಗಳಿಗೆ ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ಅಧಿಕೃತ ವೆಬ್‌ಸೈಟ್ ವಿಳಾಸ <https://www.kpsc.kar.nic.in/> ಭೇಟಿ ನೀಡಬಹುದಾಗಿದೆ.

ಕರ್ನಾಟಕ ಸರ್ಕಾರದ ಕಂದಾಯ ಇಲಾಖೆಯಲ್ಲಿ ಖಾಲಿ ಇರುವ ಒಟ್ಟು 1000 ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿದೆ. ದ್ವಿತೀಯ ಪಿ.ಯು.ಸಿ ತೇರ್ಗಡೆಯಾಗಿರುವ ವಿದ್ಯಾರ್ಥಿಗಳು ಈ ಹುದ್ದೆಗಳಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ಅಧಿಕೃತ ವೆಬ್‌ಸೈಟ್ ವಿಳಾಸ https://cetonline.karnataka.gov.in/kea/> ಭೇಟಿ ನೀಡಬಹುದಾಗಿದೆ.

ಹಾಸನದ ಸಾಲಗಾಮೆ ರಸ್ತೆಯಲ್ಲಿರುವ ಕೃಷಿ ಸರ್ವೋದಯ ಫೌಂಡೇಶನ್(ರಿ)ನಲ್ಲಿ ಗ್ರಾಮ ಆಡಳಿತ ಅಧಿಕಾರಿ ಹಾಗೂ ಪಂಚಾಯತಿ ಅಭಿವೃದ್ಧಿ ಅಧಿಕಾರಿ ನೇಮಕಾತಿ ಪರೀಕ್ಷೆಗಳಿಗೆ ರಿಯಾಯಿತಿ ಶುಲ್ಕದಲ್ಲಿ ನುರಿತ ವಿಷಯ ತಜ್ಞರಿಂದ ತರಬೇತಿ ಪ್ರಾರಂಭಿಸಲಾಗುವುದು. ಆಸಕ್ತರು ಮೊಬೈಲ್ ಸಂಖ್ಯೆ 8660217739 ಕ್ಕೆ ಕರೆ ಅಥವಾ ವಾಟ್ಸಾಪ್ ಮಾಡಿ ಅಥವಾ <https://tinyurl.com/PDO-and-VA-Coaching> ಲಿಂಕ್ ಕ್ಲಿಕ್ ಮಾಡಬಹುದಾಗಿದೆ ಎಂದು ಶಾಪೆಯ ಕಾರ್ಯದರ್ಶಿಗಳಾದ ಹೆಚ್.ಪಿ.ಮೋಹನ್ ತಿಳಿಸಿದ್ದಾರೆ.

ಅಪರಿಚಿತ ವ್ಯಕ್ತಿಯ ಶವ ಪತ್ತೆ

ಮೈಸೂರು: ಏ.01 ರಂದು ಸಂಜೆ 6 ಗಂಟೆಯ ಸಮಯದಲ್ಲಿ ಆಲನಹಳ್ಳಿ ಪೊಲೀಸ್ ಠಾಣಾ ಸರಧ್ದಿನ ಲಲಿತಾದ್ರಿಪುರ ಮುಖ್ಯ ರಸ್ತೆಯ ಪಕ್ಕದಲ್ಲಿ ಸುಮಾರು 40 ವ?ಸ ವಯಸ್ಸಿನ ಅಪರಿಚಿತ ಗಂಡಸಿನ ಶವ ಪತ್ತೆಯಾಗಿದ್ದು,ಆಲನಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮೃತನ ಚಹರೆ: ಮೃತನು ಸುಮಾರು 40 ವರ್ಷ ವಯಸ್ಸಿನವನಾಗಿದ್ದು, 163 ಸೆ.ಮೀ.ಉದ್ದವಿರಿತ್ತಾರೆ. ಕಪ್ಪು ಕೂದಲು, ಬಿಳಿ ಮೈಬಣ್ಣ, ಉದ್ದನೆಯ ಮುಖ, ತೆಳ್ಳನೆ ಮೈಕಟ್ಟನ್ನು ಹೊಂದಿರುತ್ತಾರೆ. ಬಲಗೈಯಲ್ಲಿ ಲಕ್ಷ್ಮಿ ಹಾಗೂ ಎಡಗೈಯಲ್ಲಿ ಕಾಂತರಾಜು ಮತ್ತು ಕೈ ಮುಷ್ಠಿಯಲ್ಲಿ ಹೂ ಹಿಡಿದುಕೊಂಡಂತೆ ಹಸಿಹಚ್ಚೆ ಗುರುತು ಇದ್ದು, ಮೃತನು ಬಿಳಿ ಬಣ್ಣದ ಗೆರೆಯುಳ್ಳ ತುಂಬು ತೋಳಿನ ಶರ್ಟ್ ಮತ್ತು ನೀಲಿ ಬಣ್ಣದ ಜೀನ್ಸ್ ಪ್ಯಾಂಟ್ ಧರಿಸಿರುತ್ತಾರೆ.

ಕೃಷಿ ಕ್ಷೇತ್ರಕ್ಕೆ ಕಾಂಗ್ರೆಸ್ ನಾಯಕರ ಕೊಡುಗೆಯಾದರೂ ಏನು?: ಹೆಚ್‌ಡಿಕೆ

ಬೆಂಗಳೂರು: ಕೃಷಿ ಕ್ಷೇತ್ರಕ್ಕೆ ಕಾಂಗ್ರೆಸ್ ನಾಯಕರ ಕೊಡುಗೆ ಏನು ಎಂದು ಮಾಜಿ ಸಿಎಂ ಹೆಚ್ ಡಿ ಕುಮಾರಸ್ವಾಮಿ ಪ್ರಶ್ನಿಸಿದ್ದಾರೆ.

ಮಂಡ್ಯ ಲೋಕಸಭಾ ಕ್ಷೇತ್ರದಿಂದ ಸಂಸತ್ತಿಗೆ ಚುನಾಯಿತನಾದರೆ ಎನ್ ಡಿಎ ಸರ್ಕಾರದಲ್ಲಿ ಕೃಷಿ ಸಚಿವನಾಗುವೆ ಎಂದು ಹೆಚ್ ಡಿ ಕುಮಾರಸ್ವಾಮಿ ಹೇಳಿಕೊಂಡಿದ್ದಕ್ಕೆ ಕಾಂಗ್ರೆಸ್ ನಾಯಕರು ಗೇಲಿ ಮಾಡಿದ್ದು, ಈ ಬಗ್ಗೆ ಕುಮಾರಸ್ವಾಮಿ ಆಕ್ರೋಶ ವ್ಯಕ್ತಪಡಿಸಿದರು.

ಮಹಾದಾಯಿ ಯೋಜನೆಯನ್ನು ಬಿಜೆಪಿ-ಜೆಡಿಎಸ್ ಸಮ್ಮಿಶ್ರ ಸರ್ಕಾರ ಅಧಿಕಾರದಲ್ಲಿದ್ದಾಗ ಚಾಲನೆ ಕೊಟ್ಟಿದ್ದು, ತುಂಗಭದ್ರ ಮೇಲ್ದಂಡೆ ಯೋಜನೆ ಶುರುಮಾಡಿದ್ದು ತಾನು ಮತ್ತು ಬಿಎಸ್ ಯಡಿಯೂರಪ್ಪ ಎಂದು ಹೇಳಿದ ಕುಮಾರಸ್ವಾಮಿ ಕಾಂಗ್ರೆಸ್ ನಾಯಕರು ಕೃಷಿ ಮತ್ತು ಕೃಷಿಕರ ಬಗ್ಗೆ ಹಗುರವಾಗಿ ಮಾತಾಡುವುದನ್ನು ನಿಲ್ಲಿಸಬೇಕು ಎಂದರು.

ಏ.26 ರಂದು ಕಾರ್ಮಿಕರಿಗೆ ವೇತನಸಹಿತ ರಜೆ

ಮಂಡ್ಯ : ಚುನಾವಣಾ ಆಯೋಗವು ಏಪ್ರಿಲ್ 26 ರ ಶುಕ್ರವಾರದಂದು ಕರ್ನಾಟಕ ಲೋಕಸಭಾ ಚುನಾವಣೆಯ ? 2024ರ ಪ್ರಕ್ರಿಯೆಯಲ್ಲಿ ಮತದಾನ ನಿಗದಿಪಡಿಸಿದೆ. ಸದರಿ ದಿನದಂದು ಮಂಡ್ಯ ಜಿಲ್ಲಾದ್ಯಂತ ಎಲ್ಲಾ ಕಾರ್ಖಾನೆಗಳು, ವಾಣಿಜ್ಯ ಸಂಸ್ಥೆಗಳು, ಹೋಟೆಲ್ ಉದ್ಯಮಗಳು ಹಾಗೂ ಇತರೆ ಸಂಸ್ಥೆಗಳಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ 1951 ರ ಪ್ರಜಾ ಪ್ರತಿನಿಧಿ ಕಾಯ್ದೆ ಸೆಕ್ಷನ್ 135 (ಬಿ) ಅಡಿ ಹಾಗೂ ಕೈಗಾರಿಕಾ ಸಂಸ್ಥೆಗಳ (ರಾಷ್ಟ್ರೀಯ ಮತ್ತು ಹಬ್ಬದ ರಜೆಗಳು) ಕಾಯ್ದೆ ? 1963 ಕಲಂ 3 (ಎ)ರನ್ವಯ ಆರ್ಹ ಮತದಾರರಿಗೆ ವೇತನ ಸಹಿತ ರಜೆ ಘೋಷಿಸಿ ಸಂವಿಧಾನಾತ್ಮಕ ಹಕ್ಕಾದ ಮತದಾನವನ್ನು ಚಲಾಯಿಸುವುದಕ್ಕಾಗಿ ಎಲ್ಲಾ ಮಾಲೀಕರು/ ನಿರ್ವಹಣಾಕರು ಅನುವು ಮಾಡಿಕೊಡಬೇಕು.

ಚುನಾವಣೆ ನಡೆಯುವ ಕ್ಷೇತ್ರಗಳ ಎಲ್ಲಾ ಕಾರ್ಖಾನೆಗಳು, ವಾಣಿಜ್ಯ ಸಂಸ್ಥೆಗಳು, ಹೋಟೆಲ್ ಉದ್ಯಮಗಳ ಮಾಲೀಕರು ಸದರಿ ದಿನದಂದು ಕಾಯ್ದೆಯನ್ವಯ ಆರ್ಹ ಕಾರ್ಮಿಕರಿಗೆ ಮತದಾನ ಮಾಡಲು ಅನುಕೂಲವಾಗುವಂತೆ ಹಾಗೂ ವೇತನ ಸಹಿತ ರಜೆ ನೀಡುವಂತೆ ತಿಳಿಸಿದ್ದು, ತಪ್ಪಿದ್ದಲ್ಲಿ ಸಂಬಂಧಪಟ್ಟ ಸಂಸ್ಥೆ/ನಿರ್ವಹಣಾಕರ ವಿರುದ್ಧ ನಿಯಮಾನುಸಾರ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಮಂಡ್ಯ ಉಪವಿಭಾಗದ ಕಾರ್ಮಿಕ ಅಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಕ್ಕಳ ಸಮಗ್ರ ವ್ಯಕ್ತಿತ್ವದ ವಿಕಸನಕ್ಕೆ ಬೇಸಿಗೆ ಶಿಬಿರವು ಸಹಕಾರಿ

■ ಕಾಯಕಯೋಗಿ ಸುದ್ದಿ

ಕೃಷ್ಣರಾಜಪೇಟೆ: ಮಕ್ಕಳ ಸಮಗ್ರವಾದ ವ್ಯಕ್ತಿತ್ವದ ವಿಕಸನಕ್ಕೆ ಮಕ್ಕಳ ಬೇಸಿಗೆ ಶಿಬಿರವು ಸಹಕಾರಿಯಾಗಿದೆ ಎಂದು ಪಿಎಲ್‌ಡಿ ಬ್ಯಾಂಕ್ ಮಾಜಿ ಅಧ್ಯಕ್ಷ ನಾಯಕನಹಳ್ಳಿ ನಂಜಪ್ಪ ಹೇಳಿದರು.

ಅವರು ಕೆ.ಆರ್.ಪೇಟೆ ಪಟ್ಟಣದ ಬಿಜಿಎಸ್ ಸ್ಕೂಲ್‌ನಲ್ಲಿ 4ವರ್ಷದಿಂದ 14ವರ್ಷದೊಳಗಿನ ಮಕ್ಕಳಿಗೆ ಆಯೋಜಿಸಿದ್ದ ಮಕ್ಕಳ ಬೇಸಿಗೆ ಶಿಬಿರವನ್ನು ಜ್ಯೋತಿ ಬೆಳಗಿಸಿ ಉದ್ಘಾಟಿಸಿ ಮಾತನಾಡಿದರು.

ಇಂದಿನ ಮಕ್ಕಳೇ ನಾಳಿನ ಭವ್ಯ ಭಾರತದ ಸತ್ಪಜೆಗಳಾಗಿದ್ದಂತೆ ಮಕ್ಕಳಿಗೆ ಬಾಲ್ಯದಿಂದಲೇ ಉತ್ತಮವಾದ ಸಂಸ್ಕಾರ ಬೆಳೆದು ಅವರ ವ್ಯಕ್ತಿತ್ವವು ಸಮಗ್ರವಾಗಿ ರೂಪುಗೊಳ್ಳಲು ಬೇಸಿಗೆ ಶಿಬಿರಗಳು ನೆರವಾಗಲಿವೆ. ಈ ದಿಕ್ಕಿನಲ್ಲಿ ಆದಿಚುಂಚನಗಿರಿ ಶಾಲೆಯ ವ್ಯವಸ್ಥಾಪಕರಾದ ಡಾ. ಜೆ.ಎಸ್.ರಾಮಕೃಷ್ಣೇಗೌಡ ಅವರು ಮಕ್ಕಳಿಂದ ಯಾವುದೇ ಶುಲ್ಕವನ್ನು ಪಡೆಯದೇ ಬೇಸಿಗೆ ಶಿಬಿರವನ್ನು ಆಯೋಜಿಸಿ ಮಕ್ಕಳಿಗೆ ಹಾಡು, ನೃತ್ಯ, ಯೋಗ, ಧ್ಯಾನ, ಚಿತ್ರಕಲೆ, ಕರಾಟೆ, ಅಶುಭಾಷಣ ಸ್ಪರ್ಧೆ ಸೇರಿದಂತೆ ಗ್ರಾಮೀಣ ಕ್ರೀಡೆಗಳಾದ ಲಗೋರಿ, ಚಿನ್ನಿಕೋಲು, ಮರಕೋತಿ ಆಟ, ಕೆರೆ ದಡ, ಕೋಲಾಟ ಸೇರಿದಂತೆ ವಿವಿಧ ಗ್ರಾಮೀಣ ಕ್ರೀಡೆಗಳ ಬಗ್ಗೆ ಅರಿವಿನ ಜಾಗೃತಿ ಮೂಡಿಸುವ ಕೆಲಸವನ್ನು ಸಂಪನ್ಮೂಲ ಶಿಕ್ಷಕರ ಮೂಲಕ ಬದ್ಧತೆಯಿಂದ ಮಾಡಿಸುತ್ತಿದ್ದಾರೆ ಎಂದು ಅಭಿಮಾನದಿಂದ ಹೇಳಿದ ನಂಜಪ್ಪ ಗ್ರಾಮೀಣ ಪ್ರದೇಶದ ಮಕ್ಕಳು ನಗರ ಪ್ರದೇಶದ ಮಕ್ಕಳು ಒಡ್ಡುವ ತೀವ್ರವಾದ ಸ್ಪರ್ಧೆಯನ್ನು ಎದುರಿಸಿ ಮುನ್ನಡೆದು ಸಾಧನೆ ಮಾಡಲು ಮಕ್ಕಳ ಬೇಸಿಗೆ ಶಿಬಿರವು ವರದಾನವಾಗಿದೆ. ಮಕ್ಕಳು ತಮ್ಮ ವ್ಯಕ್ತಿತ್ವವನ್ನು ವಿಕಸನಪಡಿಸಿಕೊಂಡು ಸಾಧಿಸುವ ಛಲವನ್ನು ಮೈಗೂಡಿಸಿಕೊಂಡು ಸಮಾಜಮುಖಿಯಾಗಿ ಹೆಜ್ಜೆ ಹಾಕಬೇಕು ಎಂದು ನಂಜಪ್ಪ ಕರೆ ನೀಡಿದರು.

ಹಿರಿಯ ವಕೀಲರಾದ ಎಸ್.ಸಿ ವಿಜಯ್‌ಕುಮಾರ್, ತಾಲ್ಲೂಕು ಕಸಾಪ ಮಾಜಿ ಅಧ್ಯಕ್ಷ ಕೆ. ಆರ್. ನೀಲಕಂಠ, ಬಿಜಿಎಸ್ ಶಿಕ್ಷಣ ಸಂಸ್ಥೆಯ ವ್ಯವಸ್ಥಾಪಕ ರಾಮಚಂದ್ರ, ಕಾಲೇಜಿನ ಪ್ರೋಮ್ ಕುಪಾಲ ಪ್ರಸಾದೇಗೌಡ ಸೇರಿದಂತೆ ಮಕ್ಕಳ ಪೋಷಕರು, ಶಿಕ್ಷಕರು ಹಾಗೂ ಸಾರ್ವಜನಿಕರು ಕಾರ್ಯಕ್ರಮ ದಲ್ಲಿ ಭಾಗವಹಿಸಿದ್ದರು. ಮಕ್ಕಳು ನೀಡಿದ ಸಾಂಸ್ಕೃತಿಕ ಕಾರ್ಯಕ್ರಮಗಳು ಸಾರ್ವಜನಿಕರನ್ನು ರಂಜಿಸಿದವು.

ಪಿಯುಸಿ ಫಲಿತಾಂಶ ಪ್ರಕಟ: ಶೇ.6.48 ಫಲಿತಾಂಶ

ಮಂಡ್ಯ : 2023-24ನೇ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆ-1ರ ಫಲಿತಾಂಶ ಬುಧವಾರ ಪ್ರಕಟಗೊಂಡಿದೆ. ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿಯ ಅಧ್ಯಕ್ಷೆ ಎನ್.ಮಂಜುಶ್ರೀ, ಪರೀಕ್ಷಾ ವಿಭಾಗದ ನಿರ್ದೇಶಕ ಗೋಪಾಲಕೃಷ್ಣ ಸೇರಿ ಹಿರಿಯ ಅಧಿಕಾರಿಗಳು ಫಲಿತಾಂಶವನ್ನು ಘೋಷಣೆ ಮಾಡಿದ್ದಾರೆ. ಕಳೆದ ವರ್ಷಕ್ಕಿಂತ ಶೇ.6.48 ಹೆಚ್ಚಿನ ಫಲಿತಾಂಶ ಈ ಬಾರಿ ಬಂದಿದೆ.